23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 246 | ನವದೆಹಲಿ | ₹ ಬೆಲೆ 10 | ಮಾರ್ಚ್ 11 2026, ಬುಧವಾರ

ನಿತ್ಯ ಪಂಚಾಂಗ 11.3.2026 ಬುಧವಾರ

ಶ್ರೀ ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯಣ ಶಿಶಿರ ಹೇಮಂತ ಋತು, ಚಾಂದ್ರಮಾನ, ಫಾಲ್ಗುಣ ಬಹುಳ

ಅಷ್ಟಮಿ, ಜ್ಯೇಷ್ಠ ನಕ್ಷತ್ರ

ಕಾಲಾಷ್ಟಮಿ, ಹೊಂಬುಜ ಪದ್ಮಾವತೀ ರಥ, ಕಟ್ಟೆಮಾಡು ಉತ್ಸವ, ಚಿಕ್ಕಬೆಣಚುಕಲ್ಲು, ಹುಲ್ತಿಕೊಪ್ಪ/ಶಲವಡಿ ರಂಗನಾಥ ರಥ

ದಿನ	ರಾಹುಕಾಲ	ಯಮಗಂಡ	ಗುಳಕಕಾಲ
	ರಾಹುಕಾಲ	ಯಮಗಂಡ	ಗುಳಕಕಾಲ
ಭಾನು	4.30 – 6.00	12.00 – 1.30	3.00 – 4.30
ಸೋಮ	7.30 – 9.00	10.30 – 12.00	1.30 – 3.00
ಮಂಗಳ	3.00 – 4.30	9.00 – 10.30	12.00 – 1.30
ಬುಧ	12.00 – 1.30	7.30 – 9.00	10.30 – 12.00
ಗುರು	1.30 – 3.00	6.00 – 7.30	9.00 – 10.30
ಶುಕ್ರ	10.30 – 12.00	3.00 – 4.30	7.30 – 9.00
ಶನಿ	9.00 – 10.30	1.30 – 3.00	6.00 – 7.30

ಡಿಕೆಶಿಗೆ ಉಜ್ವಲ ರಾಜಕೀಯ ಭವಿಷ್ಯ: ಸಿಎಂ ಸಿದ್ದರಾಮಯ್ಯ

ಶಿವಕುಮಾರ್ ಸಂಘಟನಾ ಚಾತುರ್ಯ, ಬದ್ಧತೆ ಪಕ್ಷದ ಯುವನಾಯಕರಿಗೆ ಮಾದರಿ

ಬೆಂಗಳೂರು, ಮಾ.10: ಕೆಪಿಸಿಸಿ ಅಧ್ಯಕ್ಷರಾಗಿ 6 ವರ್ಷ ಯಶಸ್ವಿಯಾಗಿ ಪೂರೈಸಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರಿಗೆ ಸಿಎಂ ಸಿದ್ದರಾಮಯ್ಯ ಅಭಿನಂದನೆ ಸಲ್ಲಿಸಿದ್ದು, ನನಗಿಂತ ಕಿರಿಯರಾದ ಶಿವಕುಮಾರ್‌ಗೆ ಉಜ್ವಲವಾದ ರಾಜಕೀಯ ಭವಿಷ್ಯವಿದೆ ಎಂದು ಹಾರೈಸಿದ್ದಾರೆ.

ಈ ಸಂಬಂಧ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, 2028ರಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕು ಎನ್ನುವುದು ನಮ್ಮೆಲ್ಲರ ಬಯಕೆಯಾಗಿದೆ. ಇದಕ್ಕಾಗಿ ನಡೆಯುವ ಪಕ್ಷದ ಸಂಘಟನೆ ಮತ್ತು ಹೋರಾಟದಲ್ಲಿ ನಾನು ಕೂಡಾ ಜೊತೆ ಇರುತ್ತೇನೆ ಎಂದಿದ್ದಾರೆ. ಕೆಪಿಸಿಸಿ ಅಧ್ಯಕ್ಷರಾಗಿ 6 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿರುವ ಉಪಮುಖ್ಯಮಂತ್ರಿ, ಡಿ.ಕೆ.ಶಿವಕುಮಾರ್ ಅವರಿಗೆ ಅಭಿನಂದನೆಗಳು. ಶಿವಕುಮಾರ್ ಅವರ ಸಂಘಟನಾ ಚಾತುರ್ಯ, ಸೈದ್ಧಾಂತಿಕ ಬದ್ಧತೆ ಮತ್ತು ಕಠಿಣ ಶ್ರಮ ನಮ್ಮ ಪಕ್ಷದ ಎಲ್ಲ ಯುವನಾಯಕರಿಗೆ ಮಾದರಿಯಾದುದು ಎಂದು ಶ್ಲಾಘಿಸಿದ್ದಾರೆ.

ವಿರೋಧ ಪಕ್ಷವಾದ ಬಿಜೆಪಿ ಸುಳ್ಳು ಕೇಸ್‌ಗಳನ್ನು ಹಾಕಿ ಬಗೆಬಗೆಯ ಕಿರುಕಳ ನೀಡಿದರೂ ಶಿವಕುಮಾರ್ ಅವರು ಮಣಿಯದಿರುವುದು ಪಕ್ಷದ ಬಗ್ಗೆ ಅವರಲ್ಲಿರುವ ರಾಜಿಯಿಲ್ಲದ ನಿಷ್ಠೆಗೆ ಸಾಕ್ಷಿಯಾಗಿದೆ. ಇದು ಕಾಂಗ್ರೆಸ್ ಪಕ್ಷದ ಲಕ್ಷಾಂತರ ಕಾರ್ಯಕರ್ತರಿಗೆ ಸ್ಫೂರ್ತಿದಾಯಕ ನಡವಳಿಕೆ ಆಗಿದೆ ಎಂದಿದ್ದಾರೆ.

ಕೋಮುವಾದಿ ಶಕ್ತಿಗಳನ್ನು ಸೋಲಿಸಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲು ಪಕ್ಷದ ನಾಯಕರು ಮತ್ತು ಕಾರ್ಯಕರ್ತರ ಜೊತೆಯಲ್ಲಿ ಡಿ.ಕೆ. ಶಿವಕುಮಾರ್ ಹಗಲಿರುಳು ದುಡಿದಿದ್ದಾರೆ. ರಾಜ್ಯವನ್ನು ಸರ್ವಜನಾಂಗದ ಶಾಂತಿಯ ತೋಟವಾಗಿ ಮತ್ತೆ ಕಟ್ಟುವಲ್ಲಿ ಶಿವಕುಮಾರ್ ನನ್ನ ಹೆಗಲಿಗೆ ಹೆಗಲಾಗಿ ನಿಂತಿದ್ದಾರೆ ಎಂದು ತಿಳಿಸಿದ್ದಾರೆ.

ಕಾಂಗ್ರೆಸ್ ಶಾಸಕರಿಗೆ ಡಿಕೆಶಿ ಔತಣ

ಕೆಪಿಸಿಸಿ ಅಧ್ಯಕ್ಷರಾಗಿ ಆರು ವರ್ಷ ಪೂರ್ಣಗೊಳಿಸಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಪಕ್ಷದ ಶಾಸಕರು, ಜನಪ್ರತಿನಿಧಿಗಳಿಗೆ ಮಂಗಳವಾರ ಔತಣಕೂಟ ಆಯೋಜಿಸಿದ್ದು ಅದಕ್ಕಾಗಿ ಪಕ್ಷದ ಶಾಸಕರಿಗೆ ಖುದ್ದಾಗಿ ಆಹ್ವಾನ ನೀಡಿದರು. ವಿಧಾನಸಭೆಯಲ್ಲಿ ಪ್ರಶ್ನೋತ್ತರದ ಕಲಾಪದ ನಡುವೆ ತಮ್ಮ ಸ್ಥಾನದಿಂದ ಎದ್ದು ಕಾಂಗ್ರೆಸ್ ಪಕ್ಷದ ಪ್ರತಿಯೊಬ್ಬ ಶಾಸಕರ ಬಳಿಗೆ ಹೋದ ಡಿ.ಕೆ. ಶಿವಕುಮಾರ್ ಔತಣಕೂಟದಲ್ಲಿ ಭಾಗವಹಿಸುವಂತೆ ಆಹ್ವಾನ ನೀಡಿದರು. ಪಕ್ಷೇತರ ಸದಸ್ಯರಾಗಿರುವ ಪಾಂಡವಪುರದ ದರ್ಶನ್ ಪುಟ್ಟಣ್ಣಯ್ಯ ಅವರಿಗೂ ಆಹ್ವಾನ ನೀಡಿದರು. ಈ ಹಂತದಲ್ಲಿ ಬಿಜೆಪಿಯ ಕೆಲ ಶಾಸಕರಿಗೂ ಹಸ್ತಲಾಘವ ನೀಡಿದ ಡಿ.ಕೆ.ಶಿವಕುಮಾರ್ ಅವರು ಉಭಯ ಕುಶಲೋಪರಿ ವಿಚಾರಿಸಿಕೊಂಡರು.

ಸಿಎಂ ಕುರ್ಚಿ-ಡಿಕೆಶಿ ಗಾಬರಿ

ವಿಧಾನಸಭೆಯ ಪ್ರಶ್ನೋತ್ತರದ ಅವಧಿಯಲ್ಲಿ ಬಿಜೆಪಿಯ ಶಾಸಕ ಉದಯ್ ಗರುಡಾಚಾರ್, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಬಳಿ ಮಾತನಾಡಲು ಹೋಗಿದ್ದರು. ಅದೇ ವೇಳೆ ಬೆಂಗಳೂರಿನ ತೆರಿಗೆ ಪದ್ಧತಿಗೆ ಸಂಬಂಧಪಟ್ಟಂತೆ ವಿರೋಧ ಪಕ್ಷದ ನಾಯಕರು ಸದಸ್ಯರು ಪ್ರಶ್ನೆಗಳನ್ನು ಕೇಳುತ್ತಿದ್ದರು. ಅತ್ತ ಗಮನ ಕೊಟ್ಟಿದ್ದ ಡಿ.ಕೆ.ಶಿವಕುಮಾರ್ ಅವರು ತಮ್ಮ ಬಳಿ ಬಂದ ಉದಯ್ ಗರುಡಾಚಾರ್ ಅವರನ್ನು ಸ್ವಲ್ಪ ಸಮಯ ಕುಳಿತುಕೊಳ್ಳುವಂತೆ ಕೈಸನ್ನೆ ಮಾಡಿದರು. ಉದಯ್ ಗರುಡಾಚಾರ್ ಅವರು ಡಿ.ಕೆ.ಶಿವಕುಮಾರ್ ಪಕ್ಕದಲ್ಲಿ ಅವರ ಕುರ್ಚಿಯಲ್ಲಿ ಕೂರಲು ಮುಂದಾದರು. ಗಾಬರಿಯಾದ ಡಿ.ಕೆ.ಶಿವಕುಮಾರ್ ಅವರು ಉದಯ್ ಗರುಡಾಚಾರ್ ಅವರ ಕೈಹಿಡಿದು ಅಲ್ಲಿ ಕುಳಿತುಕೊಳ್ಳದಂತೆ ಎಚ್ಚರಿಸಿ ತಮ್ಮ ಬಲಬದಿಯಲ್ಲಿದ್ದ ಖಾಲಿ ಕುರ್ಚಿಯಲ್ಲಿ ಕೂರಲು ಹೇಳಿದರು. ಇದನ್ನು ಗಮನಿಸಿದ ಬಿಜೆಪಿಯ ಸುನೀಲ್‌ಕುಮಾರ್, ಸಿಎಂ ಕುರ್ಚಿಯಲ್ಲಿ ಯಾರು ಕೂರಬೇಕು, ಯಾರ್‍ಯಾರೋ ಕೂರುತ್ತಿದ್ದಾರೆ ಎಂದು ಲೇವಡಿ ಮಾಡಿದರು.

ಕಾಂಗ್ರೆಸ್ ಭವನಕ್ಕೆ ಭೂಮಿ ಮಂಜೂರು ಕಾನೂನು ಉಲ್ಲಂಘಿಸಿಲ್ಲ: ಬೈರತಿ ಸುರೇಶ್

ಬೆಂಗಳೂರು, ಮಾ.10: ರಾಜ್ಯದೆಲ್ಲೆಡೆ 100 ಸ್ಥಳಗಳಲ್ಲಿ ಕಾಂಗ್ರೆಸ್ ಕಚೇರಿ ತೆರೆಯುವ ಸಂಬಂಧ ಕಾನೂನು ಉಲ್ಲಂಘಿಸಿ ಭೂ ಮಂಜೂರು ಆರೋಪದ ಕುರಿತು ರಾಜ್ಯ ಸರ್ಕಾದ ವಿರುದ್ಧ ಇಂದು ವಿಧಾನ ಪರಿಷತ್‌ನಲ್ಲಿ ಪ್ರತಿಪಕ್ಷಗಳು ಆಕ್ರೋಶ ವ್ಯಕ್ತಪಡಿಸಿದವು.

ಪ್ರಶ್ನೋತರ ವೇಳೆ ಪರಿಷತ್ ಸದಸ್ಯ ಡಿ.ಎಸ್.ಅರುಣ್ ಅವರು ಈ ವಿಚಾರ ಪ್ರಸ್ತಾಪಿಸಿ, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಕಚೇರಿಗಳ ನಿರ್ಮಾಣಕ್ಕಾಗಿ 40 ಕೋಟಿ ರೂ ಮೌಲ್ಯದ ಸರ್ಕಾರಿ ಜಾಗವನ್ನು 2 ಕೋಟಿ ರೂ. ದರದಲ್ಲಿ ಮಂಜೂರು ಮಾಡಿರುವುದು ನಿಜವೇ ಎಂದು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಕಾಂಗ್ರೆಸ್ ಕಚೇರಿ ತೆರೆಯುವ ಸಂಬಂಧ ನಾಗರಿಕ ಸೌಲಭ್ಯ ನಿವೇಶನಗಳಲ್ಲಿ ಮಂಜೂರು ಮಾಡಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಿದೆ. ಮಾರುಕಟ್ಟೆ ದರಕ್ಕಿಂತ ಮಾರ್ಗಸೂಚಿ ಮೌಲ್ಯದ ಶೇ.5ರಷ್ಟು ಶುಲ್ಕ ವಿಧಿಸಿ (ಎಸ್‌ಆರ್) ತುಮಕೂರಿನಲ್ಲಿ ಮಾತ್ರ ಭೂ ಮಂಜೂರು ಮಾಡಲಾಗಿದೆ. ಮಂಜೂರಾತಿ ಪ್ರಕ್ರಿಯೆಯಲ್ಲಿ ಕಾನೂನು ಉಲ್ಲಂಘಿಸಿಲ್ಲ ಎಂದು ಸ್ಪಷ್ಟಪಡಿಸಿದರು.

ಇದಕ್ಕೆ ಆಕ್ಷೇಪಿಸಿದ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ರಾಜ್ಯದ 100 ಕಡೆಗಳಲ್ಲಿ ಕಾಂಗ್ರೆಸ್ ಕಚೇರಿ ಸ್ಥಾಪಿಸುವ ಉದ್ದೇಶ ರಾಜ್ಯ ಸರ್ಕಾರಕ್ಕಿದೆ. ರಾಜಕೀಯ ಪಕ್ಷಗಳಿಗೆ ನಿರ್ದಿಷ್ಟ ಪ್ರಮಾಣದಲ್ಲಿ ಜಾಗ ಕೊಡಬಹುದು. ಆದರೆ ಎಲ್ಲಾ ಕಡೆಗಳಲ್ಲಿ ಮಾರ್ಗಸೂಚಿದರ ಅನ್ವಯ ಭೂ ಮಂಜೂರು ಮಾಡಲು ಸಾಧ್ಯವಿಲ್ಲ. ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರವಾದರೆ ಅಕ್ರಮ ಸಕ್ರಮವಾಗಲಿದೆಯಾ, ಸರ್ಕಾರವೇ ನೇರವಾಗಿ ಲೂಟಿ ಹೊಡೆಯುತ್ತಿದೆ ಎಂದು ಆಕ್ರೋಶ ಹೊರಹಾಕಿದರು.

ರಾಜಕೀಯ ಪಕ್ಷಗಳಿಗೆ ಹಾಗೂ ಸಂಘ–ಸಂಸ್ಥೆಗಳಿಗೆ ಸಿಎ ನಿವೇಶನ ನೀಡುವುದು ಮುಂಚಿನಿಂದಲೂ ನಡೆದುಕೊಂಡು ಬರುತ್ತಿದೆ. ಬಿಜೆಪಿ ಸದಸ್ಯ ಡಿ.ಎಸ್.ಅರುಣ್ ಅವರೇ ಈ ಹಿಂದೆ ಎರಡು ಸಿಎ ನಿವೇಶನಗಳನ್ನು ಕಡಿಮೆ ಬೆಲೆಗೆ ಪಡೆದಿದ್ದಾರೆ. ಅಲ್ಲದೆ ಬಿಜೆಪಿ ಕಚೇರಿಗಳಿಗೆ ಕಡಿಮೆ ಬೆಲೆಗೆ ನಿವೇಶನ ಪಡೆದಿದ್ದಾರೆ. 10 ಸಾವಿರ ಚದರಡಿ ಜಾಗವನ್ನು 500 ರೂಪಾಯಿಗೆ ನೀಡಲಾಗಿದೆ. 2022ರಲ್ಲಿ ನೂರು ಎಕರೆ ತೆಗೆದುಕೊಂಡಿದೆ ಎಂದು ಬೈರತಿ ಸುರೇಶ್ ತಿರುಗೇಟು ನೀಡಿದರು.

ಉಭಯಪಕ್ಷಗಳ ನಡುವೆ ಜಟಾಪಟಿಯಾಗುತ್ತಿದ್ದಂತೆ ಮಧ್ಯಪ್ರವೇಶಿಸಿದ ಸಭಾಪತಿ, ಪ್ರಶ್ನೋತರ ಅವಧಿಯಲ್ಲಿ ಚರ್ಚೆ ನಡೆಸಬೇಡಿ. ಅರ್ಧ ಗಂಟೆಗೆ ಚರ್ಚೆ ನಡೆಸಬೇಕು ಎಂದರೆ ಬೇರೆ ರೂಪದಲ್ಲಿ ಕೊಡುತ್ತೇನೆ ಎಂದರು.

ನವದೆಹಲಿಯಲ್ಲಿ ರಾಜ್ಯದ ಕೇಂದ್ರ ಸಚಿವರ ಭೇಟಿ: ಉತ್ತರ ಕರ್ನಾಟಕದ ರೈಲ್ವೆ ಬೇಡಿಕೆ ಈಡೇರಿಸಲು ಕ್ರಿಯಾ ಸಮಿತಿ ನಿಯೋಗ ಮನವಿ

ನವದೆಹಲಿ, ಮಾ.10: ಕರ್ನಾಟಕ ರಾಜ್ಯದ ರೈಲ್ವೆ ಯೋಜನೆಯಾದ ಬಳ್ಳಾರಿ ಸಿರುಗುಪ್ಪ ಸಿಂಧನೂರು ಲಿಂಗಸುಗೂರು ನೂತನ ರೈಲ್ವೆ ಮಾರ್ಗ ದ ಆರಂಭಕ್ಕಾಗಿ ಹಿಂದಿನ ಯುಪಿಎ ಸರ್ಕಾರದ ರೈಲ್ವೆ ಮಂತ್ರಿ ಮಲ್ಲಿಕಾರ್ಜುನ ಖರ್ಗೆ ಹಾಗೂ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ದ ರೈಲ್ವೆ ಮಂತ್ರಿ ಗಳಾದ ಸದಾನಂದ ಗೌಡರು ತಮ್ಮ ರೈಲ್ವೆ ಬಜೆಟ್ಟಿನಲ್ಲಿ ಈ ಮಾರ್ಗಕ್ಕೆ ಸರ್ವೆ ಆದೇಶ ಮಾಡಿದ್ದರು ಸರ್ವೆ ಮುಗಿಸಿ 13 ವರ್ಷ ಗಳಾಗಿವೆ ಇಂದಿಗೂ ಈ ಮಾರ್ಗದ ಕೆಲಸ ಆರಂಭವಾಗಿರುವುದಿಲ್ಲ ಕೂಡಲೇ ಬಳ್ಳಾರಿ ಸಿರುಗುಪ್ಪ ಸಿಂಧನೂರ್ ನೂತನ ರೈಲು ಮಾರ್ಗದ ಕೆಲಸ ಆರಂಭವಾಗಬೇಕು ಎನ್ನುವ ಪ್ರಧಾನ ಬೇಡಿಕೆಯೊಂದಿಗೆ ಬಳ್ಳಾರಿ ಇಂದ ಬೆಂಗಳೂರಿಗೆ ದಿನನಿತ್ಯ ಹೋಗಿಬರಲು ಉದಯ ಸೂಪರ್ ಫಾಸ್ಟ್ ರೈಲು ಇಲ್ಲವೇ ಒಂದೇ ಭಾರತ್ ರೈಲಿನ ಸೌಲಭ್ಯ ಒದಗಿಸಬೇಕು ವಿಶ್ವವಿಖ್ಯಾತ ಹಂಪಿ ಪ್ರದೇಶವನ್ನು ಒಳಗೊಂಡ ಈ ಭಾಗದಲ್ಲಿ ಉದಯ ರೈಲಿನ ಆರಂಭದಿಂದ ದೇಶ ವಿದೇಶಗಳ ಜನತೆಗೆ ಬೆಂಗಳೂರಿಗೆ ಹೋಗಿಬರಲು ಅನುಕೂಲವಾಗುತ್ತದೆ ಕಳೆದ 30 ವರ್ಷಗಳಿಂದ ಬಳ್ಳಾರಿ ಜನತೆ ಉದಯ ರೈಲಿನ ಬೇಡಿಕೆ ಇಡುತ್ತಿರುವೆವು ಬಳ್ಳಾರಿ ಮಾರ್ಗದಲ್ಲಿ ಸಂಚರಿಸುತ್ತಿದ್ದ ಕೊಲ್ಲಾಪುರ ಮುನಗೂರು ಎಕ್ಸ್‌ಪ್ರೆಸ್ ರೈಲು ರೈಲ್ವೆ ಬಜೆಟಿನಲ್ಲಿ ಘೋಷಣೆಯಾಗಿ ಲೋಕಸಭೆಯಿಂದ ಅನುಮೋದನೆ ಪಡೆದ ರೈಲಾಗಿತ್ತು ಕಳೆದ ಒಂದು ವರ್ಷದಿಂದ ಈ ರೈಲು ನಿಲುಗಡೆ ಆಗಿದೆ.

ಶಿವಮೊಗ್ಗ ಚೆನ್ನೈ ಬೈ ವೀಕ್ಲಿ ರೈಲುಗಳು ನಿಲುಗಡೆ ಯಾಗಿದ್ದು ಈ ರೈಲುಗಳನ್ನು ಪುನಾರಾರಂಭಿಸಬೇಕು ಬಳ್ಳಾರಿ ರೈಲ್ವೆ ನಿಲ್ದಾಣದ ಆಧುನಿಕರಣ ಬೇಗನೆ ಪೂರ್ಣಗೊಳ್ಳಬೇಕು. ಜೊತೆಗೆ ರಸಗೊಬ್ಬರಗಳ ಡೌನ್ಲೋಡಿಂಗ್ ಹೆಚ್ಚಿನ ಅನುಕೂಲ ಮಾಡಿಕೊಡಬೇಕು ಎನ್ನುವ ಬೇಡಿಕೆಗಳೊಂದಿಗೆ ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ರೈಲ್ವೆ ರಾಜ್ಯ ಸಚಿವ ವಿ ಸೋಮಣ್ಣ, ಮಾಜಿ ಮುಖ್ಯಮಂತ್ರಿಗಳು ಮತ್ತು ಬೆಳಗಾವಿ ಲೋಕಸಭಾ ಸದಸ್ಯ ಜಗದೀಶ್ ಶೆಟ್ಟರ್ ಇವರನ್ನು ಮಂಗಳವಾರ ನವದೆಹಲಿಯಲ್ಲಿ ನಿಯೋಗ ಭೇಟಿ ಮಾಡಿ ಬೇಡಿಕೆಗಳ ಈಡೇರಿಕೆಗಾಗಿ ಮನವಿ ಪತ್ರ ಅರ್ಪಿಸಿ ಅವರೊಡನೆ ವಿವರವಾಗಿ ಚರ್ಚಿಸಿ ಕೂಡಲೇ ಕ್ರಮ ವಹಿಸುವಂತೆ ವಿನಂತಿಸಲಾಯಿತು

ಕರ್ನಾಟಕ ರಾಜ್ಯ ರೈಲ್ವೆ ಕ್ರಿಯಾ ಸಮಿತಿ ಅಧ್ಯಕ್ಷ ಕೆಎಂ ಮಹೇಶ್ವರ ಸ್ವಾಮಿ ಹಾಗೂ ಸಿರುಗುಪ್ಪದ ಮಾಜಿ ಶಾಸಕ ಎಂ.ಎಸ್ ಸೋಮಲಿಂಗಪ್ಪ ಅವರ ನೇತೃತ್ವದಲ್ಲಿ ಮಂತ್ರಿಗಳನ್ನು ಭೇಟಿ ಮಾಡಿದ ನಿಯೋಗದಲ್ಲಿ 25 ಜನರು ಇದ್ದರು.

ಹುಬ್ಬಳ್ಳಿ ರೈಲ್ವೆ ವಿಭಾಗದ ಡಿಆರ್‌ಯುಸಿಸಿ ಸದಸ್ಯ ಕೆ.ಎಮ್. ಕೊಟ್ರೇಶ್ ತಾಲೂಕ ಸಮಿತಿ ಅಧ್ಯಕ್ಷಪಿ ಯೋಗರಾಜ್ ಹಾಗೂ ಮುಖಂಡರಾದ ಗೋನಾಳ್ ರಾಜಶೇಖರ ಗೌಡ, ದಮ್ಮೂರು ಶೇಖರ್ ಪಲ್ಲೇದ ದೊಡ್ಡಪ್ಪ, ಗಣಪಾಲ್ ಐನಾಥ ರೆಡ್ಡಿ ಸಿರುಗುಪ್ಪ ನಗರಸಭಾ ಮಾಜಿ ಸದಸ್ಯರಾದ ನಟರಾಜ್ ಮಂಜುನಾಥ ಮಹದೇವ ಮಹದೇವ ಚಾಗಿ ಸುಬ್ಬಯ್ಯ ಕುಂಟನಾಳ ಮಲ್ಲಿಕಾರ್ಜುನ ಮುಂತಾದವರು ನಿಯೋಗದಲ್ಲಿದ್ದರು ನಾಳೆಯ ದಿನ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಕೇಂದ್ರ ಸಚಿವರಾದ ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ, ಹಾವೇರಿ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ ಸೇರಿದಂತೆ ಕರ್ನಾಟಕದಿಂದ ಆಯ್ಕೆಯಾದ ಲೋಕಸಭೆ ಮತ್ತು ರಾಜ್ಯಸಭಾ ಸದಸ್ಯರನ್ನು ನಿಯೋಗ ಭೇಟಿ ಮಾಡಿ ಮನವಿ ಪತ್ರ ಅರ್ಪಿಸಲಿದೆ.

ಬಲವಂತ ಮಾಡಿ ಹಣಕಾಸು ಇಲಾಖೆ ವಹಿಸಿದ್ದೇ ದೇವೇಗೌಡರು

ಪ್ರತಿಪಕ್ಷ ನಾಯಕ ಅಶೋಕ್ ಹೇಳಿಕೆಗೆ ಸಿಎಂ ಸ್ಪಷ್ಟನೆ

ಬೆಂಗಳೂರು, ಮಾ.10: ದೇವೇಗೌಡ ಅವರು ಹಣಕಾಸು ಇಲಾಖೆಯನ್ನು ಬಲವಂತ ಮಾಡಿ ನನಗೆ ವಹಿಸಿದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ವಿಧಾನಸಭೆಯಲ್ಲಿ ಬಜೆಟ್ ಮೇಲಿನ ಚರ್ಚೆಯಲ್ಲಿ ಭಾಗವಹಿಸಿದ್ದ ವಿರೋಧ ಪಕ್ಷದ ನಾಯಕ ಆರ್. ಅಶೋಕ್, 100 ಕುರಿಗಳನ್ನು ಲೆಕ್ಕ ಹಾಕಲು ಬಾರದ ಸಿದ್ದರಾಮಯ್ಯ ಬಜೆಟ್ ಹೇಗೆ ಮಂಡಿಸುತ್ತಾರೆ ಎಂದು ಆರಂಭದ ದಿನಗಳಲ್ಲಿ ಟೀಕೆ ಮಾಡಿದ್ದನ್ನು ಅವರೇ ಹೇಳಿಕೊಂಡಿದ್ದಾರೆ. ದೇವೇಗೌಡ ಅವರು ಅವಕಾಶ ಕೊಟ್ಟಿದ್ದರಿಂದಾಗಿ ಇಂದು ಸಿದ್ದರಾಮಯ್ಯ 17 ಬಜೆಟ್‌ಗಳನ್ನು ಮಂಡಿಸಲು ಸಾಧ್ಯವಾಗಿದೆ ಎಂದರು.

ತಪ್ಪು ಮಾಹಿತಿ ಹೋಗಬಾರದು ಎಂದು ಎದ್ದುನಿಂತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ದೇವೇಗೌಡರು ಮುಖ್ಯಮಂತ್ರಿ ಆಗಿದ್ದಾಗ ಸಂಪುಟದಲ್ಲಿ ಖಾತೆಗಳ ಹಂಚಿಕೆ ಕುರಿತು ಆರ್.ಎಲ್. ಜಾಲಪ್ಪ ಅವರ ಮೆಡಿಕಲ್ ಕಾಲೇಜಿನಲ್ಲಿ ಚರ್ಚೆಯಾಗುತ್ತಿತ್ತು. ದೇವೇಗೌಡರು, ಎಂ.ಪಿ. ಪ್ರಕಾಶ್, ಪಿ.ಜಿ.ಆರ್.ಸಿಂಧ್ಯಾ, ಆರ್.ಎಲ್. ಜಾಲಪ್ಪ ಮತ್ತು ನಾನು ಹಾಜರಿದ್ದೆವು. ನಾನು ಕಂದಾಯ ಇಲಾಖೆಯನ್ನು ಕೇಳಿದ್ದೆ. ಆರ್.ಎಲ್. ಜಾಲಪ್ಪ ಆ ಖಾತೆ ನನಗೆ ಬೇಕು ಎಂದು ಪಟ್ಟು ಹಿಡಿದರು. ಆಗ ದೇವೇಗೌಡರು ನನಗೆ ಹಣಕಾಸು ಖಾತೆ ತೆಗೆದುಕೊಳ್ಳುವಂತೆ ಸಲಹೆ ನೀಡಿದರು. ನಾನು ಆರ್ಥಿಕ ತಜ್ಞನಲ್ಲ, ಅರ್ಥಶಾಸ್ತ್ರವನ್ನು ಓದಿಲ್ಲ, ಹಣಕಾಸು ಖಾತೆ ಬೇಡ ಎಂದು ಹೇಳಿದ್ದೆ. ಅದಕ್ಕೆ ಒಪ್ಪದ ದೇವೇಗೌಡರು ನನಗೆ ನಂಬಿಕಸ್ತರೇ ಬೇಕು. ನೀನೇ ಹಣಕಾಸು ಖಾತೆಯನ್ನು ನೋಡಿಕೋ ಎಂದು ಬಲವಂತ ಮಾಡಿಕೊಟ್ಟರು ಎಂದು ವಿವರಿಸಿದರು.

ದೇವೇಗೌಡರು ಅವಕಾಶ ಕೊಟ್ಟಿದ್ದರಿಂದಾಗಿ ಇಂದು ನೀವು ಹೆಚ್ಚು ಬಜೆಟ್ ಮಂಡಿಸಿ ದಾಖಲೆ ಮಾಡಲು ಸಾಧ್ಯವಾಗಿದೆ. ದೇವೇಗೌಡರಿಗೆ ಆಗಲೇ ಈ ಬಗ್ಗೆ ಸುಳಿವು ಸಿಕ್ಕಿತ್ತು ಅನಿಸುತ್ತಿದೆ. ಇದಕ್ಕಾಗಿ ನೀವು ದೇವೇಗೌಡರಿಗೆ ಧನ್ಯವಾದ ಹೇಳಬೇಕು ಎಂದು ಆರ್.ಅಶೋಕ್ ಹೇಳಿದರು.

ಸಂಘಟನೆ, ಸವಾಲು, ಸಾಧನೆ, ಸಾರ್ಥಕತೆಯ ಆರು ವರ್ಷ

–ಡಿ.ಕೆ. ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷರು ಹಾಗೂ ಉಪಮುಖ್ಯಮಂತ್ರಿ

**"ಹನುಮನು ಉದಿಸಿದ ನಾಡು, ಬಸವನು ಆಳಿದ ಬೀಡು, ಆಚಾರ್ಯರು ಬೆಳಗಿದ ಶ್ರೀ ನಾಡು, ವೀರ ಪರಂಪರೆಯ ನೆಲೆಬೀಡು, ಧರ್ಮ, ದಕ್ಷತೆಗಳ ಕನ್ನಡ ನಾಡು" ಎಂದು ಮಾಜಿ ಮುಖ್ಯಮಂತ್ರಿ ಕೆಂಗಲ್ ಹನುಮಂತಯ್ಯ ಅವರು ಹೇಳಿದ್ದಾರೆ. ಇಂತಹ ವೀರ ಪರಂಪರೆಯ ಕನ್ನಡ ನಾಡಿನ ಜನರ ಸೇವೆ ಮಾಡುವ ಸೌಭಾಗ್ಯ ಪಡೆದ ನಾನೇ ಧನ್ಯ. ರಾಜಕೀಯ ಅಂದರೆ ಅದು ಜನರ ಬದುಕಿನ ಸುತ್ತ ಗಿರಕಿ ಹೊಡೆಯಬೇಕಾದ ಒಂದು ಪವಿತ್ರ ಕಾರ್ಯ. ಆದರೆ ಕಳೆದ ಕೆಲವು ವರ್ಷಗಳಿಂದ ರಾಜಕೀಯ ಅಂದರೆ ಜನರ ಭಾವನೆಗಳ ಜೊತೆ ಚೆಲ್ಲಾಟವಾಡುವ ಒಂದು ಪಗಡೆಯಾಟ ಎನ್ನುವ ಸಂಪ್ರದಾಯ ಹುಟ್ಟಿಕೊಂಡಿದೆ. ಆದರೆ ರಾಷ್ಟ್ರ, ರಾಜ್ಯದಲ್ಲೀಗ ಒಂದು ವಿಭಿನ್ನ ರಾಜಕೀಯ ಅಲೆ ಇದ

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಮಾರ್ಚ್ 11 2026, ಬುಧವಾರ

ಒಳಪುಟಗಳಲ್ಲಿ

ರೆಸ್ಟೋರೆಂಟ್‌ಗಳಿಗೆ ನಿರಂತರ ವಾಣಿಜ್ಯ ಎಲ್‌ಪಿಜಿ ಪೂರೈಕೆ - ಖಚಿತಪಡಿಸಿಕೊಳ್ಳಿ: ಕೇಂದ್ರಕ್ಕೆ ತೇಜಸ್ವಿ ಸೂರ್ಯ ಒತ್ತಾಯ - ಪು.5

ಸದನದಲ್ಲಿ ಕಲುಷಿತ ನೀರು ಪ್ರದರ್ಶಿಸಿದ ಸೂರಜ್ ರೇವಣ್ಣ - ಪು.6

ಬ್ಯಾಡಗಿ ಮೆಣಸಿನಕಾಯಿ ವರ್ತಕರಿಗೆ ಖಾರವಾದ ಮಧ್ಯಪ್ರಾಚ್ಯ ಯುದ್ಧ - ಪು.7

ಎಲ್‌ಪಿಜಿ ಸಿಲಿಂಡರ್ ಕಾಳಸಂತೆ ಮಾರಾಟ ತಡೆಯಲು ಎಸ್ಮಾ ಜಾರಿ

ನವದೆಹಲಿ, ಮಾ.10: ಮಧ್ಯಪ್ರಾಚ್ಯದಲ್ಲಿ ಸಂಘರ್ಷ ಹೆಚ್ಚುತ್ತಿರುವ ಹಿನ್ನಲೆ ಎಲ್‌ಪಿಜಿ ಸಿಲಿಂಡರ್‌ಗಳ ಸಂಗ್ರಹಣೆಯನ್ನು ತಡೆಗಟ್ಟಲು ಮತ್ತು ದೇಶೀಯ ಅನಿಲ ಬಿಕ್ಕಟ್ಟನ್ನು ತಪ್ಪಿಸಲು ಕೇಂದ್ರ ಸರ್ಕಾರವು ಅಗತ್ಯ ಸರಕುಗಳ ಕಾಯ್ದೆ (ಎಸ್ಮಾ) ಯನ್ನು ಜಾರಿಗೆ ತಂದಿದೆ. ದೇಶೀಯ ಬಳಕೆಗಾಗಿ ಅನಿಲ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಕಾಳಸಂತೆಕೋರ ಚಟುವಟಿಕೆಗಳನ್ನು ನಿಗ್ರಹಿಸುವ ಗುರಿಯನ್ನು ಈ ಕ್ರಮ ಹೊಂದಿದೆ.

ಮೂಲಗಳ ಪ್ರಕಾರ, ಎಸ್ಮಾ ಅನುಷ್ಠಾನದ ನಂತರ, ಎಲ್‌ಪಿಜಿ ಮತ್ತು ಇತರ ಇಂಧನಗಳ ಪೂರೈಕೆಯಲ್ಲಿ ಆದ್ಯತೆಯ ವಲಯಗಳಿಗೆ ವಿಶೇಷ ಆದ್ಯತೆ ನೀಡಲಾಗುವುದು. ಇದರರ್ಥ ಆಸ್ಪತ್ರೆಗಳು, ಶಾಲೆಗಳು, ಸರ್ಕಾರಿ ಸಂಸ್ಥೆಗಳು ಮತ್ತು ಇತರ ಪ್ರಮುಖ ವಲಯಗಳು ಅನಿಲ ಕೊರತೆಯನ್ನು ಎದುರಿಸುವುದಿಲ್ಲ.

ಕಳೆದ ಕೆಲವು ತಿಂಗಳುಗಳಲ್ಲಿ ಎಲ್‌ಪಿಜಿ ಸಿಲಿಂಡರ್‌ಗಳನ್ನು ಸಂಗ್ರಹಿಸುವ ಮತ್ತು ಕಪ್ಪು

ಮಾರುಕಟ್ಟೆ ಮಾಡುವ ಘಟನೆಗಳಲ್ಲಿ ಹೆಚ್ಚಳ ಕಂಡುಬಂದಿದೆ ಎಂದು ಸರ್ಕಾರ ಹೇಳಿದೆ. ಈ ಸಂದರ್ಭದಲ್ಲಿ, ಬಿಕ್ಕಟ್ಟನ್ನು ಪರಿಹರಿಸಲು ಮತ್ತು ಸಾರ್ವಜನಿಕರಿಗೆ ಪರಿಹಾರವನ್ನು ಒದಗಿಸಲು ಎಸ್ಮಾ ಅನುಷ್ಠಾನವು ಒಂದು ಪ್ರಮುಖ ಹೆಜ್ಜೆಯಾಗಿದೆ.

ಈ ನಡುವೆ ದೇಶೀಯ ಅಡುಗೆ ಅನಿಲ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಎಸ್ಮಾ ಕಾನೂನಿನಡಿಯಲ್ಲಿ ಎಲ್‌ಪಿಜಿ ಉತ್ಪಾದನೆಯನ್ನು ಹೆಚ್ಚಿಸಲು ಸರ್ಕಾರ ತೈಲ ಸಂಸ್ಕರಣಾಗಾರಗಳಿಗೆ

ಲಭ್ಯತೆ ಖಚಿತ ಪಡಿಸಿಕೊಳ್ಳುವುದು, ಅಕ್ರಮ ಸಂಗ್ರಹಣೆಗೆ ಕಡಿವಾಣ, ಪೂರೈಕೆ ಬಿಗಿಗೊಳಿಸಿದ ಕೇಂದ್ರ ಸರ್ಕಾರ

ಸೂಚನೆ ನೀಡಿದೆ. ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಸಂಘರ್ಷದಿಂದಾಗಿ ಸಂಭಾವ್ಯ ಪೂರೈಕೆ ಅಡಚಣೆಗಳನ್ನು ಪರಿಹರಿಸುವ ಗುರಿಯನ್ನು ಈ ಕ್ರಮ ಹೊಂದಿದೆ. 2024–25ರ ಆರ್ಥಿಕ ವರ್ಷದಲ್ಲಿ ಭಾರತದ ಎಲ್‌ಪಿಜಿ ಬಳಕೆ 31.3 ದಶಲಕ್ಷ ಟನ್‌ಗಳೆಂದು ಅಂದಾಜಿಸಲಾಗಿತ್ತು, ಅದರಲ್ಲಿ ಕೇವಲ 12.8 ದಶಲಕ್ಷ ಟನ್‌ಗಳನ್ನು ದೇಶೀಯವಾಗಿ ಉತ್ಪಾದಿಸಲಾಯಿತು ಮತ್ತು ಉಳಿದದ್ದನ್ನು ಆಮದು ಮಾಡಿಕೊಳ್ಳಲಾಯಿತು.

ಭಾರತದ ಎಲ್‌ಪಿಜಿ ಆಮದುಗಳಲ್ಲಿ 85–90 ಪ್ರತಿಶತ ಸೌದಿ ಅರೇಬಿಯಾ ಮತ್ತು ಇತರ ದೇಶಗಳಿಂದ ಬರುತ್ತವೆ ಎಂದು ತಜ್ಞರು ಹೇಳುತ್ತಾರೆ, ಅವುಗಳು ತಮ್ಮ ಸಾಗಣೆಗೆ ನಿರ್ಣಾಯಕ ಹಾರ್ಮುಜ್ ಜಲಸಂಧಿಯನ್ನು ಅವಲಂಬಿಸಿವೆ. ಕಳೆದ 11 ದಿನಗಳಿಂದ ಇರಾನ್ ಮತ್ತು ಅಮೆರಿಕ–ಇಸ್ರೇಲ್ ನಡುವೆ ನಡೆಯುತ್ತಿರುವ ಸಂಘರ್ಷವು ಈ ಜಲಮಾರ್ಗವನ್ನು ಮುಚ್ಚಿದೆ, ಇದು ಅನಿಲ ಮತ್ತು ತೈಲ ಬಿಕ್ಕಟ್ಟಿನ ಭಯವನ್ನು ಹೆಚ್ಚಿಸಿದೆ.

ಭಾರತದಲ್ಲಿ ಎಲ್‌ಪಿಜಿ ಪೂರೈಕೆಯ ಮೇಲೆ ಪರಿಣಾಮ : ತೈಲ ಮತ್ತು ಅನಿಲ ಪೂರೈಕೆಯಲ್ಲಿನ ಅಡಚಣೆಗಳು ಭಾರತವನ್ನು ತಲುಪುತ್ತಿವೆ. ದೇಶದಲ್ಲಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಕೊರತೆಯ ವರದಿಗಳು ಹೋಟೆಲ್ ಮತ್ತು ರೆಸ್ಟೋರೆಂಟ್ ಉದ್ಯಮದಲ್ಲಿ ಕಳವಳವನ್ನು ಹೆಚ್ಚಿಸಿವೆ. ಇಷ್ಟೇ ಅಲ್ಲ, ಚೆನ್ನೈ, ಮುಂಬೈ ಮತ್ತು ಬೆಂಗಳೂರಿನಂತಹ ಪ್ರಮುಖ ನಗರಗಳಲ್ಲಿ ಹೋಟೆಲ್ ಕಾರ್ಯಾಚರಣೆಗಳು ಸಹ ಸ್ಥಗಿತಗೊಂಡಿವೆ.

ಬೆಂಗಳೂರಿನ ಹೋಟೆಲ್‌ಗಳು ಮುಚ್ಚುವ ಹಂತ ತಲುಪಿವೆ

ಗ್ಯಾಸ್ ಸಿಲಿಂಡರ್ ಪೂರೈಕೆ ಸ್ಥಗಿತ: ಸಮಸ್ಯೆ ಬಗೆಹರಿಸುವಂತೆ ಕೇಂದ್ರಕ್ಕೆ ಸಿದ್ದರಾಮಯ್ಯ ಪತ್ರ

ಬೆಂಗಳೂರು, ಮಾ.10: ಬೆಂಗಳೂರಿನಲ್ಲಿ ವಾಣಿಜ್ಯ ಬಳಕೆಯ ಗ್ಯಾಸ್ ಸಿಲಿಂಡರ್ ಪೂರೈಕೆ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ಕೇಂದ್ರ ಸಚಿವ ಹರ್ದೀಪ್‌ಸಿಂಗ್ ಪುರಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ಕೇಂದ್ರ ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ಸಮಸ್ಯೆ ಬಗೆಹರಿಸುವಂತೆ ಒತ್ತಾಯಿಸಿದ್ದಾರೆ. ಗೃಹಬಳಕೆಯ ಸಿಲಿಂಡರ್ ಪೂರೈಕೆಗೂ ಆದ್ಯತೆ ನೀಡುವಂತೆ ಪತ್ರದಲ್ಲಿ ಮನವಿ ಮಾಡಿದ್ದು, ಬೆಂಗಳೂರಿನಲ್ಲಿ ಕೆಲವು ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು ಸಿಲಿಂಡರ್ ಪೂರೈಕೆ ಕೊರತೆಯಿಂದ ಮುಚ್ಚುವ ಹಂತ ತಲುಪಿವೆ. ಇದರಿಂದ ರಾಜಧಾನಿ ಬೆಂಗಳೂರಿನ ಲಕ್ಷಾಂತರ ಮಂದಿ ಸಂಕಷ್ಟಕ್ಕೆ ಸಿಲುಕುವ ಅಪಾಯವಿದೆ ಎಂದು ಉಲ್ಲೇಖಿಸಿದ್ದಾರೆ. ಬೆಂಗಳೂರಿನಂತಹ ನಗರ ದೊಡ್ಡ ಪ್ರಮಾಣದಲ್ಲಿ ವಾಣಿಜ್ಯ ಬಳಕೆ ಸಿಲಿಂಡರ್ ಅವಲಂಬಿತವಾಗಿರುವುದರಿಂದ ಕೂಡಲೇ ಮಧ್ಯಪ್ರವೇಶಿಸುವಂತೆ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಆಂಧ್ರ, ಕರ್ನಾಟಕ, ಕೇರಳ, ಹರ್ಯಾಣ, ಪಂಜಾಬ್ ಮತ್ತು ಉತ್ತರಪ್ರದೇಶದ ಸಂಸತ್ ಸದಸ್ಯರಿಗೆ ರಾಷ್ಟ್ರಪತಿ ಭವನದಲ್ಲಿ ಮಂಗಳವಾರ ಏರ್ಪಡಿಸಿದ್ದ ಸಂತೋಷ ಕೂಟದಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಕೇಂದ್ರ ಸಚಿವ ರಾಜನಾಥ್‌ಸಿಂಗ್, ಸಂಸದ ಶಶಿತರೂರ್ ಮತ್ತಿತರರು ಭಾಗವಹಿಸಿದ್ದರು.

ಪರಿಷತ್ 3 ಸ್ಥಾನಗಳಿಗೆ ಬಿಜೆಪಿ ಅಭ್ಯರ್ಥಿಗಳ ಘೋಷಣೆ

ಬೆಂಗಳೂರು, ಮಾ.10: ರಾಜ್ಯ ವಿಧಾನ ಪರಿಷತ್ತಿನ ಖಾಲಿ ಇರುವ ಸ್ಥಾನಗಳಿಗೆ ನಡೆಯಲಿರುವ ಚುನಾವಣೆಗೆ ಸಂಬಂಧಿಸಿದಂತೆ ಬಿಜೆಪಿ ತನ್ನ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಈ ಮೂಲಕ ಸಂಭಾವ್ಯ ಅಭ್ಯರ್ಥಿಗಳ ನಡುವಿನ ಕುತೂಹಲಕ್ಕೆ ತೆರೆ ಎಳೆದಿದೆ. ಬಿಜೆಪಿ ಕೇಂದ್ರ ಚುನಾವಣಾ ಸಮಿತಿಯು ಒಟ್ಟು ಮೂರು ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿದೆ. ಪ್ರಮುಖವಾಗಿ ಈಶಾನ್ಯ ಶಿಕ್ಷಕರ ಕ್ಷೇತ್ರದಿಂದ ಮಾಜಿ ಸದಸ್ಯ ಸುಶೀಲ್ ನಮೋಶಿ ಅವರಿಗೆ ಮತ್ತೊಮ್ಮೆ ಟಿಕೆಟ್ ನೀಡಲಾಗಿದೆ. ಉಳಿದಂತೆ, ಪೂರ್ವ ಪದವೀಧರ ಕ್ಷೇತ್ರಕ್ಕೆ ಎಸ್.ವಿ. ಸಂಕನೂರ್ ಹಾಗೂ ಆಗ್ನೇಯ ಪದವೀಧರ ಕ್ಷೇತ್ರದ ಅಭ್ಯರ್ಥಿಯಾಗಿ ಕೆ.ಎಂ. ಸುರೇಶ್ ಅವರಿಗೆ ಟಿಕೆಟ್ ಘೋಷಿಸುವ ಮೂಲಕ ಬಿಜೆಪಿ ಹೊಸಬರಿಗೂ ಆದ್ಯತೆ ನೀಡಿದೆ. ಈ ಘೋಷಣೆಯೊಂದಿಗೆ ಬಿಜೆಪಿ ತನ್ನ ಪ್ರಚಾರ ಕಾರ್ಯವನ್ನು ಚುರುಕುಗೊಳಿಸಿದ್ದು, ಪದವೀಧರರು ಮತ್ತು ಶಿಕ್ಷಕರ ಬೆಂಬಲ ಗಳಿಸಲು ತಂತ್ರ ರೂಪಿಸಿದೆ. ಅಭ್ಯರ್ಥಿಗಳ ಅಧಿಕೃತ ಆಯ್ಕೆಯು ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ತುಂಬಿದ್ದು, ಚುನಾವಣಾ ಅಖಾಡ ಇದೀಗ ರಂಗೇರಿದೆ.

ಎಲ್‌ಪಿಜಿ ದರ ಏರಿಕೆ: ಬಿಜೆಪಿ ಸಂಸದರು ಧ್ವನಿ ಎತ್ತಲಿ

■ ಚರ್ಚೆಗೂ ಅವಕಾಶವಿಲ್ಲ, ಕೇಂದ್ರ ಸರ್ಕಾರದ ವೈಫಲ್ಯ ಎದ್ದುಕಾಣುತ್ತಿದೆ: ಡಿ.ಕೆ. ಶಿವಕುಮಾರ್

ಬೆಂಗಳೂರು, ಮಾ.10: ಅಂತಾರಾಷ್ಟ್ರೀಯ ಮಹಿಳಾ ದಿನದಂದೇ ಅಡುಗೆ ಅನಿಲ ಬೆಲೆಯನ್ನು ಕೇಂದ್ರ ಸರ್ಕಾರ 60 ರೂಪಾಯಿ ಏರಿಕೆ ಮಾಡಿದೆ. ಎಲ್ಲದಕ್ಕೂ ವಿಚಿತ್ರವಾಗಿ ಧ್ವನಿಎತ್ತುವ ಬಿಜೆಪಿ ಸಂಸದರು ಈ ಬೆಲೆ ಏರಿಕೆ ಬಗ್ಗೆ ಮಾತನಾಡಲಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಕುಟುಕಿದರು. ಮಾಧ್ಯಮಗಳೊಂದಿಗೆ ಮಾತನಾಡಿ. ಗ್ಯಾಸ್ ಸಿಲಿಂಡರ್ ಬೆಲೆ ಹೆಚ್ಚಳದ ಬಗ್ಗೆ ಸಂಸತ್‌ನಲ್ಲಿ ಚರ್ಚೆ ನಡೆಸಲು ಕೇಂದ್ರ ಸರ್ಕಾರಕ್ಕೆ ಭಯವೇಕೆ? ಇದರಲ್ಲಿ ಕೇಂದ್ರ ಸರ್ಕಾರದ ವೈಫಲ್ಯ ಎದ್ದುಕಾಣುತ್ತದೆ. ಈ ವಿಚಾರ ಚರ್ಚೆ ನಡೆಸಲು ಅವಕಾಶ ನೀಡುತ್ತಿಲ್ಲ. ಆದ ಕಾರಣಕ್ಕೆ ಇಂಡಿಯಾ ಒಕ್ಕೂಟದ ಪ್ರತಿನಿಧಿಗಳು ಪ್ರತಿಭಟನೆ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಹೋಟೆಲ್ ಹಾಗೂ ಇತರ ಉದ್ದಿಮೆಗಳಿಗೆ ಬೆಲೆ ಏರಿಕೆಯಿಂದ ತೊಂದರೆಯಾಗಿದೆ. ಇದರ ಬಗ್ಗೆ ಧ್ವನಿ ಎತ್ತಬೇಕಿರುವುದು ನಮ್ಮ ಕರ್ತವ್ಯ. ಕೋಟ್ಯಂತರ ಮಹಿಳೆಯರ ಮೇಲೆ ಇದು ಪರಿಣಾಮ ಬೀರಿದೆ. ಯುದ್ದದ ಪರಿಣಾಮವಾಗಿ ಸೌದಿ ಸೇರಿದಂತೆ ಕೊಲ್ಲಿ ರಾಷ್ಟ್ರಗಳ ಭಾರತೀಯ ಉದ್ಯಮಿಗಳು, ಕೆಲಸಗಾರರ ಮೇಲೆ ಪರಿಣಾಮ ಬೀರಿದೆ ಎಂದು ಹೇಳಿದರು.

ದೇವೇಗೌಡರ ಮನ ನೋಯಿಸಲು ಇಷ್ಟವಿಲ್ಲ

ದೇವೇಗೌಡರು ಮೇಕೆದಾಟು, ಎತ್ತಿನಹೊಳೆ ಬಗ್ಗೆ ಮಾತನಾಡುತ್ತಿದ್ದಾರೆ. ಅವರ ಪಕ್ಷದ ಸದಸ್ಯರು ಲೋಕಸಭೆಯಲ್ಲಿ ಮಾತನಾಡುವಂತೆ ಹೇಳಲಿ. ಈ ವಯಸ್ಸಿನಲ್ಲಿ ಅವರ ಮೇಲೆ ವಾಗ್ದಾಳಿ ಮಾಡುವುದು ಸರಿಯಲ್ಲ. ನನಗೆ ಇಷ್ಟವೂ ಇಲ್ಲ. ಅವರ ಮನಸ್ಸು ನೋಯಿಸುವುದು ಬೇಡ ಎಂದುಕೊಂಡಿರುವೆ. ಅವರೇ ಇವುಗಳಿಗೆ ಪರಿಹಾರ ಸೂಚಿಸಲಿ. ಅದೇ ರೀತಿ ಅವರ ಪಕ್ಷದ ಸದಸ್ಯರಿಗೆ ವಿಧಾನಸಭೆಯಲ್ಲಿ ಮಾತನಾಡಲು ಹೇಳಲಿ. ಆಗ ನಾನು ನಮ್ಮ ಕಾಲದಲ್ಲಿ ಏನೇನು ಆಗಿದೆ ಎಂದು ಹೇಳುತ್ತೇನೆ .ಕೆಪಿಸಿಸಿ ಅಧ್ಯಕ್ಷರಾಗಿ ಆರು ವರ್ಷ ಪೂರೈಸಿದ್ದಕ್ಕೆ ಶಾಸಕರಿಗೆ ಹಾಗೂ ಬೆಂಗಳೂರಿನಲ್ಲಿರುವ ಎಐಸಿಸಿ ಕಾರ್ಯದರ್ಶಿಗಳಿಗೆ, ಸಂಸದರಿಗೆ ಔತಣಕೂಟ ಏರ್ಪಡಿಸಲಾಗಿದೆ. ನಾನು ಕೆಪಿಸಿಸಿ ಅಧ್ಯಕ್ಷನಾಗಿ ಅಧಿಕಾರವಹಿಸಿಕೊಂಡ ದಿನದಿಂದ ಇಲ್ಲಿಯವರೆಗಿನ ಪ್ರಯಾಣವನ್ನ ಪ್ರತ್ಯೇಕ ಮಾಧ್ಯಮಗೋಷ್ಠಿ ನಡೆಸಿ ವಿವರಿಸುತ್ತೇನೆ ಎಂದು ಡಿಕೆಶಿ ಹೇಳಿದ್ದಾರೆ.

ಹರದೀಪ್‌ಸಿಂಗ್ ಪುರಿ ಜತೆ ಶೋಭಾ ಕರಂದ್ಲಾಜೆ ಚರ್ಚೆ

ವಾಣಿಜ್ಯ ಬಳಕೆ ಎಲ್‌ಪಿಜಿ ಕೊರತೆ

ನವದೆಹಲಿ, ಮಾ.10: ಕರ್ನಾಟಕ ಸೇರಿ ದೇಶದ ಹಲವು ರಾಜ್ಯಗಳಲ್ಲಿ ಸೃಷ್ಟಿಯಾಗಿರುವ ವಾಣಿಜ್ಯ ಬಳಕೆ ಎಲ್‌ಪಿಜಿ ಸಿಲಿಂಡರ್ ಕೊರತೆ ಬಗ್ಗೆ ಕೇಂದ್ರ ಸಚಿವ ಹರಿದೀಪ್ ಸಿಂಗ್ ಪುರಿ ಗಮನಕ್ಕೆ ತರಲಾಗಿದ್ದು ಶೀಘ್ರ ಸಮಸ್ಯೆ ಇತ್ಯರ್ಥಪಡಿಸಲು ಮನವಿ ಮಾಡಿದೆ ಎಂದು ಕೇಂದ್ರ ರಾಜ್ಯ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು. ಸಂಸತ್‌ನಲ್ಲಿ ಪುರಿ ಭೇಟಿ ಬಳಿಕ ಮಾತನಾಡಿದ ಅವರು, ಬೆಂಗಳೂರು ಹೋಟೆಲ್ ಅಸೋಸಿಯೇಷನ್ ಅವರು ಪತ್ರದ ಮೂಲಕ ದೂರವಾಣಿ ಮೂಲಕ ವಾಣಿಜ್ಯ ಎಲ್‌ಪಿಜಿ ಸಮಸ್ಯೆ ಗಮನಕ್ಕೆ ತಂದಿದ್ದಾರೆ. ಜಾಗತಿಕ ಮಟ್ಟದಲ್ಲಿ ದೊಡ್ಡ ಯುದ್ಧ ನಡೆಯುತ್ತಿದೆ ಭಾರತ ಕಚ್ಚಾತೈಲ ವಲಯದಲ್ಲಿ ಆತ್ಮ ನಿರ್ಭರ ಇಲ್ಲ ಭಾರತ ಮಧ್ಯಪ್ರಾಚ್ಯದ ಮೇಲೆ ಅವಲಂಬಿಸಿದೆ. ನಮ್ಮ ಕಚ್ಚಾತೈಲ ಹೊತ್ತ ಹಡಗುಗಳು ಬರಬೇಕಿದೆ ಹೋಟೆಲ್ ಮಾಲೀಕರ ಸಮಸ್ಯೆಯನ್ನು ಕೇಂದ್ರ ಸಚಿವ ಹರದೀಪ್‌ಸಿಂಗ್ ಪುರಿ ಅವರಿಗೆ ತಿಳಿಸಿದ್ದೇನೆ, ದೇಶದಲ್ಲಿ 33 ಕೋಟಿ ಮನೆಗಳಿಗೆ ಎಲ್‌ಪಿಜಿ ನೀಡುವುದು ಹಾಗೂ ಆಸ್ಪತ್ರೆ ಹಾಗೂ ಕಾಲೇಜುಗಳಿಗೆ ಗ್ಯಾಸ್ ನೀಡುವುದು ನಮ್ಮ ಆದ್ಯತೆಯಾಗಿದೆ ಈ ಸಮಸ್ಯೆ ಬಗ್ಗೆ ಪರಿಶೀಲಿಸಲು ಸರ್ಕಾರ ಸಮಿತಿ ರಚಿಸಿದೆ ಜಾಗತಿಕ ವಿದ್ಯಮಾನಗಳನ್ನು ಗಮನಿಸಿ ಜನರು ಕೂಡಾ ಸಹಕರಿಸಿಬೇಕು ಎಂದು ಮನವಿ ಮಾಡಿದರು. ಇಂತಹ ಪರಿಸ್ಥಿತಿಯನ್ನು ದುರ್ಬಳಕೆ ಮಾಡಿಕೊಳ್ಳುವ ಜನರಿದ್ದಾರೆ ಇದನ್ನು ಕೂಡಾ ಕೇಂದ್ರ ಸರ್ಕಾರ ಗಮನ ಹರಿಸುತ್ತಿದೆ ದೇಶಕ್ಕೆ ಆಪತ್ತು ಬಂದಾಗ ಜನರು ಒಟ್ಟಾಗಿ ಎದುರಿಸಬೇಕು, ಎಲ್‌ಪಿಜಿ ಬ್ಲ್ಯಾಕ್

ಮಾರ್ಕೆಟ್ ತಡೆಯಲು ಜಿಲ್ಲಾವಾರು ತಂಡ ರಚಿಸಬೇಕು ಎಂದು ನಾನು ರಾಜ್ಯ ಸರ್ಕಾರಕ್ಕೆ ಮನವಿ ಮಾಡುತ್ತೇನೆ ಎಂದರು.

ಸಮಸ್ಯೆ ಬಗೆಹರಿಯುವ ವಿಶ್ವಾಸ

ನವದೆಹಲಿ, ಮಾ.10: ದೇಶದಲ್ಲಿ ಪೆಟ್ರೋಲ್ ಡಿಸೆಲ್ ಸಮಸ್ಯೆ ಇಲ್ಲಾ. ಎಲ್ ಪಿಜಿ ಗಲ್ಫ್ ದೇಶಗಳಿಂದ ಬರುವುದು ನಿಂತಿದೆ. ನನ್ನ ಪ್ರಕಾರ ಅದೂ ಆದಷ್ಟು ಬೇಗ ಆರಂಭವಾಗಲಿದೆ. ಮುಂದಿನ ಒಂದು ವಾರದಲ್ಲಿ ಬಹಿತೇಕ ಸಮಸ್ಯೆಗಳು

ಪರಿಹಾರವಾಗಲಿವೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟರು. ದೆಹಲಿಯಲ್ಲಿ ಖಾಸಗಿ ಸುದ್ದಿ ಸಂಸ್ಥೆಗೆ ಮಾತನಾಡಿದ ಅವರು, ದೇಶದಲ್ಲಿ ಆಂತರಿಕ ಉತ್ಪಾದನೆ ಹೆಚ್ಚಳ ಮಾಡಬೇಕಾಗುತ್ತದೆ. ಸರಕು ಸಾಗಣೆ ಹೆಚ್ಚಿಸಬೇಕು. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ನಿರಂತರ ಕೆಲಸ ಮಾಡುತ್ತಿದೆ. ಅದರಿಂದ ಇರಾನಿನಲ್ಲಿ ನಮ್ಮ ದೇಶದ ಮೂರು ಹಡಗುಗಳಿಗೆ ಇರಾನ್ ಅವಕಾಶ ಕಲ್ಪಿಸಿದೆ. ಇದು ಮೋದಿ ಸರ್ಕಾರದ ಸಕಾರಾತ್ಮಕ ಪರಿಣಾಮವಾಗಿದೆ. ಆ ಕಾರಣದಿಂದ ಪೆಟ್ರೋಲ್ ಮತ್ತು ಡಿಸೆಲ್ ಬೆಲೆಯಲ್ಲಿ ವ್ಯತ್ಯಾಸವಾಗಿಲ್ಲ. ಈಗ ಎಲ್ ಪಿಜಿ ಸಮಸ್ಯೆ ಇದೆ. ಆ ಕಡೆಗೆ ಗಮನ ಹರಿಸಬೇಕು ಎಂದು ಹೇಳಿದರು. ಪ್ರತಿಪಕ್ಷದವರು ದೇಶದ ಯಾವುದೇ ಭಾಗದಲ್ಲಿ ಏನೇ ನಡೆದರೂ, ಎಲ್ಲಿಯೇ ನಾಯಿಯೆ ಕಡಿದರೂ ಅದಕ್ಕೆ ಮೋದಿಯವರಿಗೆ ಜೋಡಿಸುತ್ತಾರೆ. ಅವರ ಪರಿಸ್ಥಿತಿ ಅಷ್ಟು ಕೆಟ್ಟಿದೆ. ದೇಶದ ಬಗ್ಗೆ ಅವರು ಯಾವತ್ತೂ ಯೋಚನೆ ಮಾಡಿಲ್ಲ. ಇಡಿ ಜಗತ್ತು, ದೇಶ ಚಿಂತೆಯಲ್ಲಿದೆ. ಬೇರೆ ದೇಶಗಳಲ್ಲಿ ಏನಾಗುತ್ತಿದೆ ಎನ್ನುವುದನ್ನು ಅವರು ನೋಡಬೇಕು. ನಮ್ಮ ದೇಶದಲ್ಲಿ ಬೇರೆ ದೇಶಗಳಿಗಿಂತ ಉತ್ತಮ ಪರಿಸ್ಥಿತಿ ಇದೆ. ಅವರಿಗೆ ಎಲ್ಲದರಲ್ಲೂ ರಾಜಕಾರಣ ಮಾಡಬೇಕಿದೆ. ದೇಶದ ಅಭಿವೃದ್ಧಿಯಲ್ಲಿ ಸಂಕಷ್ಟದಲ್ಲಿಯೂ ರಾಜಕಾರಣ ಮಾಡಲು ಬಯಸುತ್ತಾರೆ ಎಂದು ಆರೋಪಿಸಿದರು.

ಇಸ್ರೇಲ್ ದಾಳಿಗೆ ನಲುಗಿದ ಟೆಹ್ರಾನ್; ಯುದ್ಧ ನಿಲ್ಲಿಸುವ ಸುಳಿವು ನೀಡಿದ ಟ್ರಂಪ್

ಇಸ್ರೇಲ್ ಅಮೇರಿಕಾ–ಇರಾನ್ ಸಂಘರ್ಷ 11ನೇ ದಿನ

ನವದೆಹಲಿ, ಮಾ.10: ಮಧ್ಯಪ್ರಾಚ್ಯದಲ್ಲಿ ಸಂಘರ್ಷ ಮುಂದುವರಿದಿದ್ದು ಹನ್ನೊಂದನೇ ದಿನಕ್ಕೆ ಕಾಲಿಟ್ಟಿದೆ. ಇರಾನ್‌ನ ರಾಜಧಾನಿ ಟೆಹ್ರಾನ್ ಮೇಲೆ ಇಸ್ರೇಲ್ ಹೊಸ ದಾಳಿ ನಡೆಸಿದೆ. ಟೆಹ್ರಾನ್ ಜೊತೆಗೆ ಕರಾಜ್, ತಬ್ರಿಜ್ ಮತ್ತು ಇಸ್ಫಹಾನ್‌ಗಳಲ್ಲಿಯೂ ಹಲವು ಗಂಟೆಗಳ ಕಾಲ ಇಸ್ರೇಲ್ ವಾಯು ದಾಳಿ ನಡೆಸಿದ್ದು ದೊಡ್ಡ ಸ್ಫೋಟದ ಸದ್ದು ಕೇಳಿ ಬಂದಿದೆ.

ಇರಾನ್‌ನ ಇಸ್ಫಹಾನ್‌ನಲ್ಲಿ, ಗವರ್ನರ್ ಕಚೇರಿ ಮತ್ತು ಪ್ರಾಚೀನ ರಾಜಮನೆತನದ ಅರಮನೆಯನ್ನು ಗುರಿಯಾಗಿರಿಸಿಕೊಂಡು ದಾಳಿ ನಡೆಲಾಗಿದೆ. ಪರಮಾಣು ಸ್ಥಾಪನೆಗಳ ಬಳಿಯೂ ಸ್ಫೋಟ ಸಂಭವಿಸಿದೆ. ಯುನೆಸ್ಕೋ ವಿಶ್ವ ಪರಂಪರೆಯ ತಾಣವಾಗಿ ಪಟ್ಟಿ ಮಾಡಲಾದ ಪುರಾತನ ಅರಮನೆಯು ದಾಳಿಯಲ್ಲಿ ತೀವ್ರವಾಗಿ ಹಾನಿಗೊಳಗಾಗಿದೆ. ಟೆಹ್ರಾನ್‌ನ ಪೂರ್ವ ಭಾಗದಲ್ಲಿ ನಡೆದ ಮಾರಕ ದಾಳಿಯಲ್ಲಿ ಕನಿಷ್ಠ 40 ಜನರು ಸಾವನ್ನಪ್ಪಿದ್ದಾರೆ.

ಈ ದಾಳಿ

ಪರಿಸ್ಥಿತಿ ಸುಧಾರಿಸದಿದ್ದರೆ ಇನ್ನೆರಡು ದಿನಗಳಲ್ಲಿ ಶೇ.50ರಷ್ಟು ಬಂದ್

ಎಲ್‌ಪಿಜಿ ಕೊರತೆ: ವಾಣಿಜ್ಯ ನಗರಿ ಮುಂಬೈಗೆ ತಟ್ಟಿದ ಬಿಸಿ, ಹೋಟೆಲ್, ರೆಸ್ಟೋರೆಂಟ್ ಬಂದ್

ಮುಂಬೈ, ಮಾ.10: ವಾಣಿಜ್ಯ ಎಲ್‌ಪಿಜಿ ಪೂರೈಕೆಯಲ್ಲಿನ ಅಡಚಣೆಗಳಿಂದಾಗಿ ಮುಂಬೈನಲ್ಲಿ ಸುಮಾರು 20% ಹೋಟೆಲ್‌ಗಳು ಮತ್ತು ರೆಸ್ಟೋರೆಂಟ್‌ಗಳು ಇಲ್ಲಿಯವರೆಗೆ ಮುಚ್ಚಲ್ಪಟ್ಟಿವೆ ಎಂದು ನಗರದ ಹೋಟೆಲ್ ಮತ್ತು ರೆಸ್ಟೋರೆಂಟ್ ಸಂಘ ಆಹಾರ್ ತಿಳಿಸಿದೆ.

ಅನಿಲ ಪೂರೈಕೆ ಪರಿಸ್ಥಿತಿ ಸುಧಾರಿಸದಿದ್ದರೆ ಮುಂದಿನ ಎರಡು ದಿನಗಳಲ್ಲಿ ನಗರದ ಶೇ.50 ರಷ್ಟು ಹೋಟೆಲ್‌ಗಳು ಮುಚ್ಚಲ್ಪಡಬಹುದು ಎಂದು ಸಂಘ ಎಚ್ಚರಿಸಿದೆ.

ಆಹಾರ್ ಪ್ರಕಾರ, ಕಾರ್ಯನಿರ್ವಹಿಸುತ್ತಿರುವ ರೆಸ್ಟೋರೆಂಟ್‌ಗಳ ಸಂಖ್ಯೆಯು ವೈಯಕ್ತಿಕ ಸಂಸ್ಥೆಗಳು ಪ್ರಸ್ತುತ ಎಷ್ಟು ಐಕಿಯ ಸ್ಟಾಕ್ ಅನ್ನು ಹೊಂದಿವೆ ಎಂಬುದರ ಮೇಲೆ ಅವಲಂಬಿತವಾಗಿರುತ್ತದೆ. ಪರಿಸ್ಥಿತಿ ಹೀಗೆಯೇ ಮುಂದುವರಿದರೆ, ಮುಂಬರುವ ದಿನಗಳಲ್ಲಿ ಮುಂಬೈನ ಅರ್ಧದಷ್ಟು ಹೋಟೆಲ್‌ಗಳು ಮುಚ್ಚಲ್ಪಡಬಹುದು ಎಂದು ಸಂಘ ಹೇಳಿದೆ.

ಆದಾಗ್ಯೂ, ಹೋಟೆಲ್‌ಗಳನ್ನು ಸಾಮೂಹಿಕವಾಗಿ ಮುಚ್ಚುವ ಬಗ್ಗೆ ಸಂಘವು

ಯಾವುದೇ ಅಧಿಕೃತ ನಿರ್ಧಾರವನ್ನು ತೆಗೆದುಕೊಂಡಿಲ್ಲ ಎಂದು AHAR ಸ್ಪಷ್ಟಪಡಿಸಿದೆ. ರೆಸ್ಟೋರೆಂಟ್‌ಗಳನ್ನು ತೆರೆದಿಡುವ ಅಥವಾ ತಾತ್ಕಾಲಿಕವಾಗಿ ಕಾರ್ಯಾಚರಣೆಯನ್ನು ಮುಚ್ಚುವ ನಿರ್ಧಾರವು ವೈಯಕ್ತಿಕ ಹೋಟೆಲ್ ಮಾಲೀಕರು ಮತ್ತು ಅವರ ಸಂಸ್ಥೆಗಳಲ್ಲಿ ಅನಿಲ ಪೂರೈಕೆಯ ಲಭ್ಯತೆಯನ್ನು ಅವಲಂಬಿಸಿರುತ್ತದೆ.

ಅನಿಲ ಲಭ್ಯತೆಯ ಕುರಿತಾದ ಅನಿಶ್ಚಿತತೆಯಿಂದಾಗಿ ಹಲವಾರು ಹೋಟೆಲ್‌ಗಳು ಮತ್ತು ರೆಸ್ಟೋರೆಂಟ್‌ಗಳು ಈಗಾಗಲೇ ಮೆನು ಐಟಂಗಳನ್ನು ಕಡಿತಗೊಳಿಸಲು ಅಥವಾ ಕಾರ್ಯಾಚರಣೆಯನ್ನು ಸೀಮಿತಗೊಳಿಸಲು ಪ್ರಾರಂಭಿಸಿವೆ ಎಂದು ಉದ್ಯಮ ಪ್ರತಿನಿಧಿಗಳು ಹೇಳುತ್ತಿದ್ದಾರೆ.

ಗುಜರಾತ್‌ನಲ್ಲಿ ಗೃಹ ಬಳಕೆ ಅನಿಲಕ್ಕೆ ಆದ್ಯತೆ ಕೈಗಾರಿಕಾ ಬಳಕೆ ಶೇ.50ರಷ್ಟು ಕಡಿತ

ಗಾಂಧಿನಗರ, ಮಾ.10: ಮಧ್ಯಪ್ರಾಚ್ಯ ಸಂಘರ್ಷದ ಕಳವಳಗಳ ನಡುವೆ ಗುಜರಾತ್ ಸರ್ಕಾರವು ಅನಿಲದ ಕೈಗಾರಿಕಾ ಬಳಕೆಯ ಮೇಲೆ ಶೇ. 50 ರಷ್ಟು ಕಡಿತವನ್ನು ವಿಧಿಸಿದೆ ಎಂದು ರಾಜ್ಯ ಸಚಿವರೊಬ್ಬರು ಮಂಗಳವಾರ ಹೇಳಿದ್ದಾರೆ. ಅಲ್ಲದೆ ದೇಶೀಯ ಎಲ್‌ಪಿಜಿ ವಿತರಣೆಯು ನಿರಂತರವಾಗಿ ಮುಂದುವರಿಯುತ್ತದೆ ಎಂದು ಭರವಸೆ ನೀಡಿದ್ದಾರೆ.

ಮನೆಗಳು, ಅಡುಗೆ ಅನಿಲ ಸಿಲಿಂಡರ್‌ಗಳ ಕೊರತೆಯನ್ನು ಎದುರಿಸದಂತೆ ನೋಡಿಕೊಳ್ಳಲು ರಾಜ್ಯ ಮತ್ತು ಕೇಂದ್ರ ಸರ್ಕಾರ ನಿಕಟವಾಗಿ ಸಮನ್ವಯ ಸಾಧಿಸುತ್ತಿವೆ ಎಂದು ಗುಜರಾತ್ ಇಂಧನ ಸಚಿವ ಋಷಿಕೇಶ್ ಪಟೇಲ್ ಅವರು

ವಿಧಾನಸಭಾ ಅಧಿವೇಶನಕ್ಕೂ ಮುನ್ನ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಎಲ್‌ಪಿಜಿ ಕೊರತೆಯನ್ನು ತಡೆಗಟ್ಟಲು ಮತ್ತು ಮನೆಗಳಿಗೆ ಎಲ್ಪಿಜಿಯ ಸ್ಥಿರ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಹೊರಡಿಸಿದ ಆವರ್ತಕ ಮಾರ್ಗಸೂಚಿಗಳಿಗೆ ಅನುಗುಣವಾಗಿ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

ಯಾವುದೇ ಮನೆಗೂ ಸಿಲಿಂಡರ್ ಸಮಸ್ಯೆ ಆಗದಂತೆ ನೋಡಿಕೊಳ್ಳಲು ರಾಜ್ಯ ಸರ್ಕಾರ ನಿರಂತರವಾಗಿ ಕೆಲಸ ಮಾಡುತ್ತಿದೆ. ಈ ಬಗ್ಗೆ ನಾವು ಕೇಂದ್ರ ಸರ್ಕಾರದೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇವೆ" ಎಂದು ಸಚಿವರು ತಿಳಿಸಿದ್ದಾರೆ.

ಮನೆ ಬಳಕೆಗೆ ಎಲ್ ಪಿಜಿಗೆ ಆದ್ಯತೆ ನೀಡಲು ಕೆಲವು ಕೈಗಾರಿಕಾ ಬಳಕೆಯ ಅನಿಲದ ಮೇಲೆ ನಿರ್ಬಂಧಗಳನ್ನು ವಿಧಿಸಲಾಗಿದೆ ಎಂದು ಅವರು ಹೇಳಿದ್ದಾರೆ.

"ಕೈಗಾರಿಕೆಗಳಿಗೆ ಅನಿಲ ಪೂರೈಕೆಯಲ್ಲಿ ಶೇ. 50 ರಷ್ಟು ಕಡಿತವನ್ನು ವಿಧಿಸಿದ್ದೇವೆ. ರಸಗೊಬ್ಬರ ಮತ್ತು ಹಾಲಿ(ಸಂಸ್ಕರಣೆ) ಗಾಗಿ, ಅನಿಲ ಪೂರೈಕೆಯಲ್ಲಿ ಸುಮಾರು ಶೇ. 40 ರಷ್ಟು ಕಡಿತವಿದೆ" ಎಂದು ಪಟೇಲ್ ಮಾಹಿತಿ ನೀಡಿದ್ದಾರೆ.

ಸಾರ್ವಜನಿಕವಾಗಿ ಕ್ಷಮೆಯಾಚಿಸಿದ ಎನ್‌ಸಿಇಆರ್‌ಟಿ

ನವದೆಹಲಿ, ಮಾ.10: ಪುಸ್ತಕದಲ್ಲಿ ನ್ಯಾಯಾಂಗ ಭ್ರಷ್ಟಾಚಾರದ ಅಧ್ಯಾಯವನ್ನು ಸೇರಿಸಿದ್ದಕ್ಕಾಗಿ ಸುಪ್ರೀಂ ಕೋರ್ಟ್‌ನ ಕೋಪಕ್ಕೆ ಕಾರಣವಾಗಿದ್ದ ಎನ್‌ಸಿಇಆರ್‌ಟಿ ಸಾರ್ವಜನಿಕ ಕ್ಷಮೆಯಾಚಿಸಿದೆ ಮತ್ತು ಇಡೀ ಪಠ್ಯಪುಸ್ತಕವನ್ನು ಹಿಂತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದೆ.

ಎಂಟನೇ ತರಗತಿಯ ಸಮಾಜ ವಿಜ್ಞಾನ ಪಠ್ಯಪುಸ್ತಕವು ಭ್ರಷ್ಟಾಚಾರ, ಬೃಹತ್ ಪ್ರಕರಣಗಳ ಬಾಕಿ ಮತ್ತು ಸಾಕಷ್ಟು ಸಂಖ್ಯೆಯ ನ್ಯಾಯಾಧೀಶರ ಕೊರತೆ ನ್ಯಾಯಾಂಗ ವ್ಯವಸ್ಥೆ ಎದುರಿಸುತ್ತಿರುವ ಸವಾಲುಗಳಲ್ಲಿ ಸೇರಿವೆ ಎಂದು ಹೇಳಿದೆ. ಮಂಗಳವಾರ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ಎನ್‌ಸಿಇಆರ್‌ಟಿ, ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿಯು ಇತ್ತೀಚೆಗೆ ಎಕ್ಸ್‌ಪ್ಲೋರಿಂಗ್ ಸೊಸೈಟಿ: ಇಂಡಿಯಾ ಅಂಡ್ ಬಿಯಾಂಡ್ ಗ್ರೇಡ್ 8 (ಭಾಗ 2) ಎಂಬ ಸಮಾಜ ವಿಜ್ಞಾನ ಪಠ್ಯಪುಸ್ತಕವನ್ನು ಪ್ರಕಟಿಸಿದೆ, ಇದು ನಮ್ಮ ಸಮಾಜದಲ್ಲಿ ನ್ಯಾಯಾಂಗದ ಪಾತ್ರ ಎಂಬ ಶೀರ್ಷಿಕೆಯ ಅಧ್ಯಾಯ 4 ಅನ್ನು ಒಳಗೊಂಡಿದೆ. ಎನ್‌ಸಿಇಆರ್‌ಟಿಯ ನಿರ್ದೇಶಕರು ಮತ್ತು ಸದಸ್ಯರು ಈ ಅಧ್ಯಾಯ ನಾಲ್ಕಕ್ಕೆ ಬೇಷರತ್ತಾದ

ಮತ್ತು ಅನರ್ಹ ಕ್ಷಮೆಯಾಚಿಸುತ್ತಾರೆ. ಇಡೀ ಪುಸ್ತಕವನ್ನು ಹಿಂಪಡೆಯಲಾಗಿದೆ ಮತ್ತು ಲಭ್ಯವಿಲ್ಲ ಎಂದು ತಿಳಿಸಿದೆ.

ಹಿರಿಯ ವಕೀಲ ಕಪಿಲ್ ಸಿಬಲ್ ಮತ್ತು ಅಭಿಷೇಕ್ ಸಿಂಘ್ವಿ ಅವರು ಪಠ್ಯಪುಸ್ತಕಗಳಲ್ಲಿ ನ್ಯಾಯಾಂಗದ ಬಗ್ಗೆ ಆಕ್ಷೇಪಾರ್ಹ ಹೇಳಿಕೆಗಳನ್ನು ತುರ್ತು ಪರಿಗಣನೆಗೆ ಪ್ರಸ್ತಾಪಿಸಿದ ನಂತರ, ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿಪುಲ್ ಎಂ ಪಂಚೋಲಿ ಅವರನ್ನು ಒಳಗೊಂಡ ಮೂವರು ನ್ಯಾಯಾಧೀಶರ ಪೀಠವು ಸ್ವಯಂಪ್ರೇರಿತವಾಗಿ ವಿಚಾರಣೆ ನಡೆಸಿತು. 8 ನೇ ತರಗತಿಯ ಪಠ್ಯಕ್ರಮದಲ್ಲಿನ ನ್ಯಾಯಾಂಗ ಭ್ರಷ್ಟಾಚಾರದ ಕುರಿತಾದ ಅಧ್ಯಾಯವನ್ನು ಸಿಜೆಐ ಕಾಂತ್ ತೀವ್ರವಾಗಿ ಆಕ್ಷೇಪಿಸಿದರು, ನ್ಯಾಯಾಂಗವನ್ನು ದೂಷಿಸಲು ಮತ್ತು ಅದರ ಸಮಗ್ರತೆಯನ್ನು ಕಳಂಕಗೊಳಿಸಲು ಭೂಮಿಯಲ್ಲಿ ಯಾರಿಗೂ ಅವಕಾಶ ನೀಡಲಾಗುವುದಿಲ್ಲ ಎಂದು ಹೇಳಿದರು.

ನ್ಯಾಯಪೀಠದ 8ನೇ ತರಗತಿಯ ಸಮಾಜ ವಿಜ್ಞಾನ ಪುಸ್ತಕವು ನ್ಯಾಯಾಂಗದಲ್ಲಿನ ಭ್ರಷ್ಟಾಚಾರದ ಕುರಿತು ಆಕ್ಷೇಪಾರ್ಹ ವಿಷಯವನ್ನು ಹೊಂದಿರುವುದರಿಂದ ಸುಪ್ರೀಂ ಕೋರ್ಟ್ ಅದರ ಯಾವುದೇ ಪ್ರಕಟಣೆ, ಮರುಮುದ್ರಣ ಅಥವಾ ಡಿಜಿಟಲ್ ಪ್ರಸರಣದ ಮೇಲೆ ಸಂಪೂರ್ಣ ನಿಷೇಧ ವಿಧಿಸಿತು, ಗುಂಡೇಟಿನ ಗುಂಡೇಟಿನ ದಾಳಿ ನಡೆದಿದೆ ಮತ್ತು ಸಂಸ್ಥೆಯು ರಕ್ತಸಿಕ್ತವಾಗುತ್ತಿದೆ ಎಂದು ಹೇಳಿದೆ. ಸರ್ಕಾರವು ತನ್ನ ಕಡೆಯಿಂದ, ಪುಸ್ತಕದಲ್ಲಿ ವಿವಾದಾತ್ಮಕ ವಿಭಾಗವನ್ನು ಸೇರಿಸಿದ್ದಕ್ಕೆ ದುಃಖ ವ್ಯಕ್ತಪಡಿಸಿತು, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೊಣೆಗಾರಿಕೆಯನ್ನು ಸರಿಪಡಿಸುವುದಾಗಿ ಮತ್ತು ಅದನ್ನು ರಚಿಸುವಲ್ಲಿ ಭಾಗಿಯಾಗಿರುವವರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಹೊರಜಿಲ್ಲೆಗಳಲ್ಲಿ ಕಂಬಳ ಆಯೋಜನೆ ವಿರುದ್ಧ ಸಲ್ಲಿಸಿದ್ದ ಅರ್ಜಿ ಸುಪ್ರೀಂ ಕೋರ್ಟ್‌ನಲ್ಲಿ ವಜಾ

ನವದೆಹಲಿ, ಮಾ.10: ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳನ್ನು ಹೊರತುಪಡಿಸಿ ಕರ್ನಾಟಕದ ಇತರ ಭಾಗಗಳಲ್ಲಿ 'ಕಂಬಳ' ಕ್ರೀಡೆಯನ್ನು ನಡೆಸುವುದರ ವಿರುದ್ಧದ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ವಜಾಗೊಳಿಸಿದೆ, ಇದನ್ನು ರಾಜ್ಯದ ಒಂದು ನಿರ್ದಿಷ್ಟ ಪ್ರದೇಶಕ್ಕೆ ಮಾತ್ರ ಏಕೆ ಸೀಮಿತಗೊಳಿಸಬೇಕು ಎಂದು ಕೋರ್ಟ್ ಕೇಳಿದೆ.

ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರ ಪೀಠವು ಪೀಪಲ್ ಫಾರ್ ದಿ ಎಥಿಕಲ್ ಟ್ರೀಟ್ಮೆಂಟ್ ಆಫ್ ಅನಿಮಲ್ಸ್ (ಪೆಟಾ) ಇಂಡಿಯಾ ಸಲ್ಲಿಸಿದ ಅರ್ಜಿಯನ್ನು ವಿಚಾರಣೆ ನಡೆಸಿತು, ಇದು ನವೆಂಬರ್ 14 ರಂದು ಕರ್ನಾಟಕ ಹೈಕೋರ್ಟ್‌ನ ಆದೇಶವನ್ನು ಪ್ರಶ್ನಿಸಿತು.

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಹೊರಗಿನ ಯಾವುದೇ ಸ್ಥಳವನ್ನು ಕಂಬಳ ನಡೆಸಲು ರಾಜ್ಯವು ತಿಳಿಸದಂತೆ ತಡೆಯುವ ಪ್ರಾರ್ಥನೆಯನ್ನು ಹೈಕೋರ್ಟ್ ತಿರಸ್ಕರಿಸಿತ್ತು.

ಅವರು ರಾಜ್ಯದ ವಿವಿಧ ಭಾಗಗಳಲ್ಲಿ ಸಂಸ್ಕೃತಿಯನ್ನು ಪ್ರದರ್ಶಿಸಲು ಬಯಸಿದರೆ, ಅದರಲ್ಲಿ ಏನು ತಪ್ಪಿದೆ. ರಾಜ್ಯದ ಇತರ ಭಾಗಗಳ ಜನರು ಸಹ ಸಂಸ್ಕೃತಿಯೊಂದಿಗೆ ಪರಿಚಿತರಾಗಲಿ. ಅದನ್ನು ಒಂದು ನಿರ್ದಿಷ್ಟ ಪ್ರದೇಶಕ್ಕೆ ಮಾತ್ರ

ಏಕೆ ಸೀಮಿತಗೊಳಿಸಬೇಕು ಎಂದು ವಿಚಾರಣೆಯ ಸಮಯದಲ್ಲಿ ನ್ಯಾಯಮೂರ್ತಿ ಮೆಹ್ತಾ ಅಭಿಪ್ರಾಯಪಟ್ಟರು.

ಕಂಬಳಕ್ಕೆ ಸಂಬಂಧಿಸಿದ ಅರ್ಜಿಗಳನ್ನು ವಿಚಾರಣೆ ನಡೆಸುತ್ತಿದ್ದ ಸುಪ್ರೀಂ ಕೋರ್ಟ್‌ನಲ್ಲಿ ರಾಜ್ಯವು ಈ ಹಿಂದೆ ಸಲ್ಲಿಸಿದ ಅಫಿಡವಿಟ್ ಅನ್ನು ಪೆಟಾ ಇಂಡಿಯಾ ಪರ ಹಾಜರಾದ ವಕೀಲರು ಉಲ್ಲೇಖಿಸಿದರು. ಕರ್ನಾಟಕದ ಎರಡು ಕರಾವಳಿ ಜಿಲ್ಲೆಗಳಲ್ಲಿ ಇದು ಸಾಂಪ್ರದಾಯಿಕ ಕ್ರೀಡೆಯಾಗಿದೆ ಎಂದು ರಾಜ್ಯವು ಸಲ್ಲಿಸಿದೆ ಎಂದು ವಕೀಲರು ಆ ಅಫಿಡವಿಟ್‌ನಲ್ಲಿ ಹೇಳಿದರು.

ಬೆಂಗಳೂರಿನ ಸಂಪ್ರದಾಯ ಮತ್ತು ಸಂಸ್ಕೃತಿಗೆ ಇದಕ್ಕೂ ಯಾವುದೇ ಸಂಬಂಧವಿಲ್ಲ ಎಂದು ವಕೀಲರು ವಾದಿಸಿದರು, ಈಗ, ಈ ಕಾರ್ಯಕ್ರಮವನ್ನು ರಾಜ್ಯ ರಾಜಧಾನಿಯ ಮೈದಾನದಲ್ಲಿ ನಡೆಸಲಾಗುವುದು ಎಂದು ಹೇಳಿದರು. ವಿಚಾರಣೆ ಬಳಿಕ ಅರ್ಜಿಯನ್ನು ವಜಾಗೊಳಿಸುತ್ತಾ, ಪೀಠವು, ಇಂತಹ ದಿನಗಳಲ್ಲಿ ಒಂದು ದಿನ ನಾವು ಪೆಟಾಗೆ ಕೆಲವು ಪ್ರಶ್ನೆಗಳನ್ನು ಹಾಕಬಹುದು ಎಂದು ಹೇಳಿದರು.

ನವದೆಹಲಿಯ ಭಾರತ್ ಮಂಟಪದಲ್ಲಿ ಮಂಗಳವಾರ ನಡೆದ 40ನೇ ಅಂತಾರಾಷ್ಟ್ರೀಯ ಆಹಾರ ಮತ್ತು ಆತಿಥ್ಯ ಮೇಳದ ಉದ್ಘಾಟನಾ ಸಮಾರಂಭದಲ್ಲಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಭಾರತಕ್ಕೆ ಇಟಲಿಯ ರಾಯಭಾರಿ ಆಂಟೋನಿಯೊ ಬಾರ್ಟೋಲಿ ಮತ್ತು ITPO ಅಧ್ಯಕ್ಷ ಅಂಬ್. ಜಾವೇದ್ ಅಶ್ರಫ್ ಅವರೊಂದಿಗೆ ಪುಸ್ತಕವನ್ನು ಬಿಡುಗಡೆ ಮಾಡಿದರು.

ರಾಜ್ಯಸಭೆಯಲ್ಲಿ ಸರ್ಕಾರಕ್ಕೆ ಡಾ.ಸುಧಾಮೂರ್ತಿ ಸಲಹೆ

ಗ್ರಾಮೀಣರಿಗೆ ವ್ಯಕ್ತಿತ್ವ ವಿಕಸನ, ಭಾಷಾ ತರಬೇತಿ ಅಗತ್ಯ

ನವದೆಹಲಿ, ಮಾ.19: ದೇಶದ ಗ್ರಾಮೀಣ ಪ್ರದೇಶದಲ್ಲಿ ವಾಸಿಸುವ ಜನರಿಗೆ ವ್ಯಕ್ತಿತ್ವ ವಿಕಸನ ಮತ್ತು ಭಾಷಾ ತರಬೇತಿ ಒದಗಿಸುವುದು ಪ್ರಮುಖವಾಗಿದೆ ಎಂದು ರಾಜ್ಯಸಭಾ ಸದಸ್ಯೆ ಸುಧಾಮೂರ್ತಿ ಮಂಗಳವಾರ ಸಲಹೆ ನೀಡಿದ್ದಾರೆ.

ರಾಜ್ಯಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಕಾರ್ಯವೈಖರಿ ಕುರಿತ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಗ್ರಾಮಗಳು ಅಭಿವೃದ್ಧಿಯಾಗದ ಹೊರತು ದೇಶ ಪ್ರಗತಿಯಾಗುವುದಿಲ್ಲ. ಹಳ್ಳಿಗಳಲ್ಲಿನ ಗ್ರಾಮೀಣ ಜನರಿಗೆ ಕೌಶಲ್ಯ ನೀಡುವಲ್ಲಿ ಸರ್ಕಾರ ಉತ್ತಮ ಕೆಲಸ ಮಾಡುತ್ತಿದೆ. ಆದರೆ, ಅವರಿಗೆ ತಾಂತ್ರಿಕವಾಗಿ ಕೌಶಲ ನೀಡುವುದರ ಜೊತೆಗೆ ವ್ಯಕ್ತಿತ್ವ ವಿಕಸನ ಮತ್ತು ಭಾಷಾ ತರಬೇತಿ ಒದಗಿಸುವ ಮೂಲಕ ಅವರ ಆತ್ಮವಿಶ್ವಾಸವನ್ನು ಹೆಚ್ಚಿಸುವುದು ಅಷ್ಟೇ ಮುಖ್ಯವಾಗಿದೆ ಎಂದು ಮೂರ್ತಿ ಹೇಳಿದರು.

ವಿದ್ಯುತ್ ಅನ್ನು ಸುಸ್ಥಿರವಾಗಿ ಬಳಸಿಕೊಳ್ಳುವ, ಕೃಷಿ ಮತ್ತು ಇತರ ತ್ಯಾಜ್ಯವನ್ನು ಮರುಬಳಕೆ ಮಾಡುವ ಮತ್ತು ಹವಾಮಾನಕ್ಕೆ ಅನುಗುಣವಾಗಿ ರಸ್ತೆ, ವಸತಿ ಮತ್ತಿತರ ಮೂಲಸೌಕರ್ಯಗಳನ್ನು ಒದಗಿಸುವುದು ಕೂಡಾ ಮುಖ್ಯವಾಗಿದೆ ಎಂದರು.

ಕೇಂದ್ರ ಸರ್ಕಾರದ ಲಖಪತಿ ದೀದಿ" ಯೋಜನೆಯನ್ನು ಶ್ಲಾಘಿಸಿದ ಸುಧಾ ಮೂರ್ತಿ, ಇತರ ಸ್ವಸಹಾಯ

ಗುಂಪುಗಳು ತಮ್ಮ ಯಶಸ್ಸು ಮತ್ತು ಸವಾಲುಗಳನ್ನು ಉಲ್ಲೇಖಿಸಲು ಮತ್ತು ಕಲಿಯಲು ರಾಜ್ಯವಾರು ಡೇಟಾಬೇಸ್ ರಚಿಸಲು ಸರ್ಕಾರವನ್ನು ಒತ್ತಾಯಿಸಿದರು.

ಚರ್ಚೆಯಲ್ಲಿ ಪಾಲ್ಗೊಂಡ ಸಿಪಿಐ (ಎಂ) ಸಂಸದ ಜಾನ್ ಬ್ರಿಟ್ಟಾಸ್, ಗ್ರಾಮೀಣ ಸಂಕಷ್ಟದ ಪರಿಸ್ಥಿತಿಯನ್ನು ಪ್ರಸ್ತಾಪಿಸಿದರು. ಒಂದು ರಾಜ್ಯದಿಂದ ಮತ್ತೊಂದು ರಾಜ್ಯಕ್ಕೆ ಅಪಾರ ಪ್ರಮಾಣದಲ್ಲಿ ಜನರು ವಲಸೆ ಹೋಗುತ್ತಿದ್ದಾರೆ. ಉತ್ತರ ಪ್ರದೇಶವೊಂದರಲ್ಲಿಯೇ 3 ಕೋಟಿ ವಲಸಿಗರ ಜನರಿದ್ದಾರೆ. ಬಿಹಾರದಲ್ಲಿ 2.5 ಕೋಟಿ ವಲಸಿಗರಿದ್ದಾರೆ. ಈ ಗ್ರಾಮೀಣ ಸಂಕಷ್ಟದ ಪರಿಸ್ಥಿತಿಯನ್ನು ಪರಿಶೀಲಿಸುವ ಮೂಲಕ ಸರ್ಕಾರ ಗ್ರಾಮೀಣ ಭಾರತಕ್ಕೆ ನ್ಯಾಯ ಒದಗಿಸಬೇಕಾಗಿದೆ ಎಂದು ಹೇಳಿದರು.

ಬಿಎಂಸಿ ಬೆಂಬಲಿಸದವರಿಗೆ ಬಂಗಾಳದಲ್ಲಿರುವ ಹಕ್ಕಿಲ್ಲ: ಸಂಸದೆ ಮಹುವಾ ಮೊಯಿತ್ರಾ

ಕೋಲ್ಕತಾ, ಮಾ.19: ತೃಣಮೂಲ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸದವರು ಬಂಗಾಳಿಗಳೇ ಅಲ್ಲ.. ಅವರಿಗೆ ನಮ್ಮ ರಾಜ್ಯದಲ್ಲಿ ವಾಸಿಸುವ ಯಾವುದೇ ಹಕ್ಕು ಇಲ್ಲ ಎಂದು ಟಿಎಂ ಸಂಸದೆ ಮಹುವಾ ಮೊಯಿತ್ರಾ ಹೇಳಿದ್ದಾರೆ.

ಕೋಲ್ಕತ್ತಾದ ಧರ್ಮಶಾಲಾದಲ್ಲಿ ಎಸ್‌ಐಆರ್ ವಿಷಯದ ಕುರಿತು ನಡೆದ ಪ್ರತಿಭಟನೆಯ ಸಂದರ್ಭದಲ್ಲಿ ಮೊಯಿತ್ರಾ ಈ ಹೇಳಿಕೆಗಳನ್ನು ನೀಡಿದ್ದು ಅವರ ಭಾಷಣದ ವಿಡಿಯೋ ಇದೀಗ ವ್ಯಾಪಕ ವೈರಲ್ ಆಗುತ್ತಿದೆ. ಈ ವೇಳೆ ಮಾತನಾಡಿದ ಮಹುವಾ, 'ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಬಂಗಾಳದ ಜನರ ಪರವಾಗಿ ರಾಜಕೀಯ ಹೋರಾಟ ನಡೆಸುತ್ತಿದ್ದಾರೆ. ಟಿಎಂಸಿಯೊಂದಿಗೆ ಈಗ ಇಲ್ಲದಿರುವವರು ಬಂಗಾಳಿಗಳಲ್ಲ, ಅವರಿಗೆ ಬಂಗಾಳದಲ್ಲಿ ಉಳಿಯುವ ಹಕ್ಕಿಲ್ಲ.. ಏಕೆಂದರೆ ಮಮತಾ ದೀದಿ ಬಂಗಾಳದ ಜನರಿಗಾಗಿ ಈ ಯುದ್ಧ ಮಾಡುತ್ತಿದ್ದಾರೆ ಎಂದರು.

ಬಿಜೆಪಿ ಟೀಕೆ: ಇನ್ನು ಸಂಸದೆ ಮಹುವಾ ಮೊಯಿತ್ರಾ ಹೇಳಿಕೆಗೆ ಬಿಜೆಪಿ ತೀವ್ರ ಕಿಡಿಕಾರಿದ್ದು, ಇದು ಟಿಎಂಸಿ ಅಸಹಿಷ್ಣುತೆಯ ಮನಸ್ಥಿತಿಯನ್ನು ಬಿಂಬಿಸುತ್ತಿದೆ ಎಂದು ಹೇಳಿದರು, "ಟಿಎಂಸಿ ತಾನಾಶಾಹಿ, ಮಾನಸಿಕ ಮತ್ತು ಸಂಸ್ಕೃತಿಯನ್ನು ಪ್ರತಿನಿಧಿಸುತ್ತದೆ ಮತ್ತು ಮಹುವಾ ಮೊಯಿತ್ರಾ ಅವರ ಹೇಳಿಕೆಯು ಇಂದಿರಾ ಗಾಂಧಿಯವರ ಅದೇ ತನಶಾಹಿ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ" ಎಂದು ಪೂನವಾಲಾ ಹೇಳಿದರು.

ಅಲ್ಲದೆ 'ಇಂದಿರಾ ಗಾಂಧಿ ಒಮ್ಮೆ ಭಾರತವೇ ಇಂದಿರಾ, ಇಂದಿರಾವೇ ಭಾರತ ಎಂದು ಹೇಳಿದ್ದರು.

ಇಂದು, ಮಹುವಾ ಮೊಯಿತ್ರಾ ಟಿಎಂಸಿ ಬಂಗಾಳಿ, ಬಂಗಾಳಿಯೇ ಟಿಎಂಸಿ ಎಂದು ಹೇಳುತ್ತಿದ್ದಾರೆ. ಅವರ ಹೇಳಿಕೆಗಳು ಹಿಟ್ಲರ್ ಶೈಲಿಯ ಮನಸ್

ಡ್ರೋನ್ ಸರ್ವೇ ಬಳಿಕ ಆಸ್ತಿ ತೆರಿಗೆ ಹೆಚ್ಚಳ: ವಿಧಾನಸಭೆಯಲ್ಲಿ ಜಿಬಿಎ ಕ್ರಮದ ಪ್ರತಿಧ್ವನಿ, ಬಿಜೆಪಿ ಸದಸ್ಯರಿಂದ ಆಕ್ಷೇಪ

ಬೆಂಗಳೂರು, ಮಾ.10: ಬೆಂಗಳೂರಿನಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಡ್ರೋನ್ ಸರ್ವೆ ಬಳಿಕ ಹೊಸ ಹೆಚ್ಚುವರಿ ಆಸ್ತಿ ತೆರಿಗೆ ವಿಧಿಸಿರುವುದು ಬೆಳಕಿಗೆ ಬಂದಿದ್ದು, ಈ ವಿಚಾರ ವಿಧಾನಮಂಡಲದ ಅಧಿವೇಶನದಲ್ಲಿ ಪ್ರತಿಧ್ವನಿಸಿದೆ. ಜಿಬಿಎ ಈ ಕ್ರಮದ ಬಗ್ಗೆ ವಿಪಕ್ಷ ಬಿಜೆಪಿ ಭಾರಿ ಆಕ್ಷೇಪ ವ್ಯಕ್ತಪಡಿಸಿದೆ.

ಬೆಂಗಳೂರಿನ ನಾಗರಿಕರ ಮೇಲೆ ಜಿಬಿಎ ಡ್ರೋನ್ ದಾಳಿ ನಡೆಸುತ್ತಿದೆ. ಡ್ರೋನ್ ಮೂಲಕ ಸಮೀಕ್ಷೆ ಮಾಡಿ ಹೊಸ ಆಸ್ತಿ ತೆರಿಗೆ ವಿಧಿಸುತ್ತಿದೆ. ಬಾಲ್ಕನಿ, ಕಿಟಕಿ, ಟ್ಯಾಂಕ್ ಸೇರಿದಂತೆ ಮನೆಗಳ ಪೂರಕ ಕಟ್ಟಡಗಳಿಗೂ ತೆರಿಗೆ ವಿಧಿಸಿ ನೋಟಿಸ್ ನೀಡಲಾಗಿದೆ. ವಿಧಾನಸಭೆಯಲ್ಲಿ ಬಿಜೆಪಿ ಸದಸ್ಯರು ಈ ವಿಚಾರ ಪ್ರಸ್ತಾಪಿಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಆದರೆ ಡಿಸಿಎಂ ಡಿಕೆ ಶಿವಕುಮಾರ್, ಸಮಸ್ಯೆಯಿರುವವರಿಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಿರುವುದಾಗಿ ಹೇಳಿದ್ದಾರೆ.

ಈ ನಡೆ ಭಾರಿ ಚರ್ಚೆಗೆ ಗ್ರಾಸವಾಗಿದೆ. ಡ್ರೋನ್ ಸರ್ವೆ ಮೂಲಕ ಹೆಚ್ಚುವರಿ ತೆರಿಗೆ ವಸೂಲಿಗೆ ಜಿಬಿಎ ಮುಂದಾಗಿದ್ದು, ಕಟ್ಟಡದ ಬಾಲ್ಕನಿ, ಕಿಟಕಿ ಮೇಲಿನ ಸಜ್ಜೆ, ವಾಟರ್‌ಟ್ಯಾಂಕ್ ಸ್ಟ್ಯಾಂಡ್, ಕಾರ್ ಪಾರ್ಕಿಂಗ್, ಪೋರ್ಟಿಕೋ, ಮನೆ ಮುಂದಿನ ತಾತ್ಕಾಲಿಕ ಗಜಿಬೋ ಸೇರಿ ಮನೆಯ ಪೂರಕ ಕಟ್ಟಡಕ್ಕೂ ತೆರಿಗೆ ವಿಧಿಸಲಾಗಿದೆ.

ಇದುವರೆಗೂ ಅಂದಾಜು 46 ಸಾವಿರ ಮನೆ ಮಾಲಿಕರಿಂದ ತೆರಿಗೆ ಸಂಗ್ರಹಕ್ಕೆ ಜಿಬಿಎ ಮುಂದಾಗಿದ್ದು, 5 ಲಕ್ಷದಿಂದ 18 ಲಕ್ಷದವರೆಗೂ ತೆರಿಗೆ ವಸೂಲಿ ವಿಚಾರದಲ್ಲಿನ ಜಿಬಿಎ ಹೆಚ್ಚುವರಿ ತೆರಿಗೆ ವಸೂಲಿಗೆ ಮೆಸೇಜ್ ಮೂಲಕ ನೋಟಿಸ್ ನೀಡಿದೆ. ಮೆಸೇಜ್ ಓಪನ್ ಮಾಡಿದ್ರೆ ನೋಟಿಸ್ ಸ್ವೀಕರಿಸಲಾಗಿದೆ ಎಂದೇ ಭಾವಿಸಿ ಕ್ರಮಕ್ಕೆ ಮುಂದಾಗಲಿರುವ ಜಿಬಿಎ ಹೆಚ್ಚುವರಿ ತೆರಿಗೆ ಪ್ರಶ್ನೆ ಮಾಡಿದವರ ಮನೆಯನ್ನೇ ಹರಾಜು ಹಾಕಲು ಮುಂದಾಗಿದೆ. 17 ಮನೆಗಳ ಹರಾಜು ಪ್ರಕ್ರಿಯೆಗೆ ಅಂತಿಮ ನೋಟಿಸ್ ನೀಡಲಾಗಿದೆ. ಆಸ್ತಿ ತೆರಿಗೆ ಭಯೋತ್ಪಾದನೆ

ಐದು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 46 ಸಾವಿರ ಜನರಿಗೆ ನೋಟಿಸ್ ನೀಡಲಾಗಿರುವ ಜಿಬಿಎ ಕ್ರಮವನ್ನು ಜಯನಗರ ಶಾಸಕ ಸಿ.ಕೆ. ರಾಮಮೂರ್ತಿ ಪ್ರಶ್ನಿಸಿದ್ದಾರೆ. ಡ್ರೋನ್ ಸರ್ವೆ ನಡೆಸಿ ಬೆಂಗಳೂರಿನಲ್ಲಿ ಮನೆಗಳಿಗೆ ಬಾಕಿ ಹೆಚ್ಚುವರಿ ತೆರಿಗೆ, ದಂಡ ವಿಧಿಸಲಾಗುತ್ತಿದೆ. ಒಂದು ಮನೆಗೆ 7–8 ಲಕ್ಷ, 30 ಲಕ್ಷದವರೆಗೆ ತೆರಿಗೆ, ದಂಡ ಹಾಕಲಾಗುತ್ತಿದೆ ಎಂದು ಸಿ.ಕೆ. ರಾಮಮೂರ್ತಿ ವಿಷಯ ಪ್ರಸ್ತಾಪಿಸಿದ್ದಾರೆ. ರಾಮಮೂರ್ತಿ ಹೇಳಿಕೆಗೆ ಧ್ವನಿಗೂಡಿಸಿದ ಶಾಸಕರ ಸುರೇಶ್ ಕುಮಾರ್, ಇದು ಆಸ್ತಿ ತೆರಿಗೆ ಭಯೋತ್ಪಾದನೆ. ಇದನ್ನು ಹಿಂಪಡೆಯಿರಿ ಎಂದು ಆಗ್ರಹಿಸಿದ್ದಾರೆ.

ಡಿಸಿಎಂ ಸಮಜಾಯಿಷಿ

ಬಿಜೆಪಿ ಶಾಸಕರ ಹೇಳಿಕೆಗೆ ಪ್ರತಿಕ್ರಿಯಿಸಿದ ಡಿಸಿಎಂ ಡಿ.ಕೆ.ಶಿವಕುಮಾರ್, ನಾವು ಡ್ರೋನ್ ಸರ್ವೇ ನಡೆಸಿ ಯಾವುದೇ ನೋಟಿಸ್ ಕೊಡ್ತಿಲ್ಲ. ಆದ್ರೆ ಡ್ರೋನ್ ಮೂಲಕ ಮನೆಗಳ ಸರ್ವೆ ಕಾರ್ಯ ನಡೆಯುತ್ತಿದೆ. ಮೊದಲು ಸ್ವಯಂ ಘೋಷಣೆ ಯೋಜನೆ ತಂದವನು ನಾನು. ಒನ್ ಟೈಮ್ ಸೆಟ್ಲ್‌ಮೆಂಟ್ ಸ್ಕೀಂ ಕೂಡಾ ಕೊಡುತ್ತಿದ್ದೇವೆ. ಈ ಬಗ್ಗೆ ಯಾರಿಗಾದ್ರೂ ಸಮಸ್ಯೆ ಇದ್ರೆ ಅರ್ಜಿ ಕೊಡಲಿ. ಸಮಸ್ಯೆ ಇದ್ದವರಿಗೆ ಸರಿಪಡಿಸ್ತೇವೆ ಎಂದು ಹೇಳುವ ಮೂಲಕ ಸಮಜಾಯಿಷಿ ನೀಡಿದ್ದಾರೆ.

ಕರ್ನಾಟಕ ರಾಜ್ಯ ಚುನಾವಣಾ ಆಯುಕ್ತ ಜಿ.ಎಸ್. ಸಂಗ್ರೇಶಿ ಮತ್ತು ಇತರರು ಮಂಗಳವಾರ ಬೆಂಗಳೂರಿನಲ್ಲಿ ಹೊಸ ಕರ್ನಾಟಕ ರಾಜ್ಯ ಚುನಾವಣಾ ಆಯೋಗದ ಲಾಂಛನ ಬಿಡುಗಡೆ ಮಾಡಿದರು.

ಆನ್‌ಲೈನ್‌ನಲ್ಲೇ ನರ್ಸ್‌ಗಳ ನೋಂದಣಿ/ನವೀಕರಣ ಸೇವೆ

ದೇಶದಲ್ಲೇ ಮೊದಲ ಬಾರಿಗೆ ಆಧಾರ್–ಡಿಜಿಲಾಕರ್ ಮೂಲಕ 2,000ಕ್ಕೂ ಹೆಚ್ಚು ಪ್ರಮಾಣಪತ್ರ ವಿತರಣೆ

ಬೆಂಗಳೂರು, ಮಾ.10: ಕರ್ನಾಟಕ ರಾಜ್ಯ ನರ್ಸಿಂಗ್ ಮಂಡಳಿಯಲ್ಲಿ ನೋಂದಾಯಿಸಲಾದ ಲಕ್ಷಾಂತರ ಶುಶ್ರೂಷಕರು ತಮ್ಮ ವೃತ್ತಿಪರ ಅರ್ಹತೆಗಳನ್ನು ನವೀಕರಿಸಲು ಈಗ ಸುಲಲಿತ, ಸುಲಭ ವ್ಯವಸ್ಥೆ ಮಾಡಲಾಗಿದೆ. ಎಲ್ಲೇ ಇದ್ದರೂ ನರ್ಸ್‌ಗಳು ಈಗ ತಮ್ಮ ವೃತ್ತಿ ಅರ್ಹತೆ ನೋಂದಣಿ ಅಥವಾ ನವೀಕರಣವನ್ನು ಆನ್‌ಲೈನ್ ಮೂಲಕ ಮಾಡಿಕೊಳ್ಳಬಹುದಾಗಿದೆ. ಬೆಂಗಳೂರಿನ ಹೃದಯಭಾಗ ದಲ್ಲಿರುವ ಜನನಿಬಿಡ ಗಾಂಧಿನಗರ ರಸ್ತೆಗಳಲ್ಲಿ ನರ್ಸ್‌ಗಳ ಅಲೆದಾಡಬೇಕಾದ ಅವಶ್ಯಕತೆ ಇಲ್ಲ. ಭಾರತ ಮತ್ತು ವಿದೇಶಗಳಲ್ಲಿರುವ ಶುಶ್ರೂಷಕರು ಆಧಾರ್–ಡಿಜಿ ಲಾಕರ್ ಪ್ಲಾಟ್‌ಫಾರ್ಮ್ ಮೂಲಕ ನೋಂದಣಿ ನವೀಕರಣವನ್ನು ಸಂಪೂರ್ಣವಾಗಿ ಆನ್‌ಲೈನ್‌ನಲ್ಲಿ ಪೂರ್ಣಗೊಳಿಸಲು ಮಂಡಳಿ ಅನುವು ಮಾಡಿಕೊಟ್ಟಿದೆ. ಇತ್ತೀಚಿನವರೆಗೂ, ಕರ್ನಾಟಕ ಮೂಲದ ಸಂಸ್ಥೆಗಳಿಂದ ಕೋರ್ಸ್ ಅನ್ನು ಪೂರ್ಣಗೊಳಿಸಿದ ಯಾವುದೇ ನರ್ಸ್, ಪ್ರತಿ ಐದು ವರ್ಷಗಳಿಗೊಮ್ಮೆ ಗಾಂಧಿನಗರದಲ್ಲಿರುವ ಜನದಟ್ಟಣೆಯ ಕೌನ್ಸಿಲ್ ಕಚೇರಿಗೆ ಖುದ್ದಾಗಿ ಭೇಟಿ ನೀಡಬೇಕಾಗಿತ್ತು. ಈಗ ಹೊಸ ವ್ಯವಸ್ಥೆ ಜಾರಿಗೆ ಬಂದಿರುವುದರಿಂದ ಯಾವುದೇ ಮೂಲೆಯಿಂದಾದರೂ ನವೀಕರಣಕ್ಕಾಗಿ ಅರ್ಜಿ ಸಲ್ಲಿಸಬಹುದು. ಕೆಲವೇ ದಿನಗಳಲ್ಲಿ, ಮಂಡಳಿ ರಿಜಿಸ್ಟ್ರಾರ್ ಡಾ.ಕೆ.ಮಲ್ಲು ಅರ್ಜಿಯನ್ನು ಪರಿಶೀಲಿಸಿ ಅನುಮೋದಿ ಸುತ್ತಾರೆ ಮತ್ತು ನವೀಕರಿಸಿದ ಪ್ರಮಾಣಪತ್ರವನ್ನು ಅರ್ಜಿದಾರರ ಡಿಜಿಲಾಕರ್ ಖಾತೆಗೆ ನೇರವಾಗಿ ಕಳುಹಿಸಿಕೊಡಲಾಗುತ್ತದೆ. ಡಿಜಿಲಾಕರ್ ಆಧಾರಿತ ವ್ಯವಸ್ಥೆಯನ್ನು ಆಗಸ್ಟ್ 2025 ರಲ್ಲಿ ಪರಿಚಯಿಸ ಲಾಗಿದ್ದರೂ, ಆರಂಭದಲ್ಲಿ ಇದು ಹೊಸ ನೋಂದಣಿಗಳಿಗೆ ಮಾತ್ರ ಲಭ್ಯವಿತ್ತು. ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋ ಪಾಯ ಮತ್ತು ರಾಯಚೂರು ಪಾಟೀಲ್ ನರ್ಸ್‌ಗಳ ಸಮಸ್ಯೆಯನ್ನು ಕಂಡು ಕೂಡಲೇ ಪರಿಹಾರ ಸೂಚಿಸಲು ಮಂಡಳಿಗೆ ನಿರ್ದೇಶನ ನೀಡಿದರು.

ಜನವರಿವರೆಗೆ ರಾಜ್ಯದ ಎಪಿಎಂಸಿಗಳಲ್ಲಿ 70 ಲಕ್ಷ ಕೋಟಿ ರೂ. ವಹಿವಾಟು

ಮಾರುಕಟ್ಟೆ ಶುಲ್ಕವೇ 476 ಕೋಟಿ ಸಂಗ್ರಹ: ಪರಿಷತ್‌ಗೆ ಕೃಷಿ ಮಾರುಕಟ್ಟೆ ಶಿವಾನಂದ ಪಾಟೀಲ್ ಮಾಹಿತಿ

ಬೆಂಗಳೂರು, ಮಾ.10: ಪ್ರಸಕ್ತ ಹಣಕಾಸು ವರ್ಷದ ಜನವರಿ ಅಂತ್ಯಕ್ಕೆ ರಾಜ್ಯದ ಎಪಿಎಂಸಿಗಳಲ್ಲಿ ಒಟ್ಟು 70 ಲಕ್ಷ ಕೋಟಿ ರೂ. ವಹಿವಾಟು ನಡೆದಿದ್ದು, ರೂ 476.65 ಕೋಟಿ ಮಾರುಕಟ್ಟೆ ಶುಲ್ಕ ಸಂಗ್ರಹವಾಗಿದೆ ಎಂದು ಸಕ್ಕರೆ, ಕಬ್ಬು ಅಭಿವೃದ್ಧಿ, ಜವಳಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ತಿಳಿಸಿದರು.

ವಿಧಾನ ಪರಿಷತ್ತಿನಲ್ಲಿ ಮಂಗಳವಾರ ಸದಸ್ಯ ಟಿ.ಶರವಣ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಸಚಿವರು, ಕಳೆದ ಹಣಕಾಸು ವರ್ಷದಲ್ಲಿ 82 ಲಕ್ಷ ಕೋಟಿ ವಹಿವಾಟು ನಡೆದಿತ್ತು. ಈ ಅವಧಿಯಲ್ಲಿ ರೂ. 498 ಕೋಟಿ ಮಾರುಕಟ್ಟೆ ಶುಲ್ಕ ಸಂಗ್ರಹವಾಗಿದ್ದು, ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ ಈ ಪ್ರಮಾಣ ಇನ್ನು ಹೆಚ್ಚಾಗಲಿದೆ

ರಾಜ್ಯದಲ್ಲಿ 170 ಎಪಿಎಂಸಿಗಳಿದ್ದು, ಅಂಗಡಿಗಳ ಹಂಚಿಕೆ ಪ್ರಕ್ರಿಯೆ

ನಿರಂತರವಾಗಿರುತ್ತದೆ. 141 ಎಪಿಎಂಸಿ ಗಳಲ್ಲಿ ಅಂಗಡಿ ಹರಾಜು ಬಾಕಿ ಇದ್ದು, ಕ್ರಮ ಕೈಗೊಳ್ಳಲು ಸಮಿತಿಗಳಿಗೆ ಸೂಚನೆ ನೀಡಲಾಗಿದೆ. ವಾಣಿಜ್ಯ ಸ್ವರೂಪದ ಚಿಕ್ಕ ಮಳಿಗೆಗಳನ್ನು 55 ತಿಂಗಳ ಹಂಚಿಕೆ ಅವಧಿ ಮುಕ್ತಾಯವಾದ ನಂತರ ಮತ್ತೆ ಮುಂದುವರಿಸಲು ಅವಕಾಶ ಇಲ್ಲ. ಅಂತಹ ಅಂಗಡಿಗಳನ್ನು ಹೊಸದಾಗಿ ಟೆಂಡರ್ ಕರೆದು ಬೇಡಿಕೆಗೆ ಅನುಗುಣವಾಗಿ ಕ್ರಮ ಕೈಗೊಳ್ಳಲಿದ್ದು, ಬಾಕಿ ಉಳಿಯುವುದಿಲ್ಲ ಎಂದು

ಸಿಂಧನೂರಿನಲ್ಲಿ ಜವಳಿ ಪಾರ್ಕ್: 15 ಎಕರೆ ಜಾಗ ನೀಡುವಂತೆ ಕೇಂದ್ರಕ್ಕೆ ಪತ್ರ

ಸಿಂಧನೂರು ತಾಲ್ಲೂಕಿನಲ್ಲಿ ಜವಳಿ ಪಾರ್ಕ್ ಸ್ಥಾಪನೆ ಮಾಡಲು 15 ಎಕರೆ ಜಮೀನು ನೀಡುವಂತೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಜವಳಿ ಸಚಿವ ಶಿವಾನಂದ ಪಾಟೀಲ್ ವಿಧಾನಪರಿಷತ್‌ನಲ್ಲಿ ತಿಳಿಸಿದರು. ಪ್ರಶ್ನೋತ್ತರ ವೇಳೆಯಲ್ಲಿ ಬಸನಗೌಡ ಬಾದರ್ಲಿಗೆ ಉತ್ತರಿಸಿದ ಸಚಿವರು, ಕೇಂದ್ರ ಸರ್ಕಾರದ ಅಧೀನದಲ್ಲಿರುವ ಸೆಂಟ್ರಲ್ ಸೀಡ್ಸ್ ಫಾರಂನಲ್ಲಿರುವ 7,500 ಎಕರೆಯಷ್ಟು ಜಮೀನಿನಲ್ಲಿ 15 ಎಕರೆ ನೀಡುವಂತೆ ಪತ್ರ ಬರೆಯಲಾಗಿದೆ. ಜಮೀನು ದೊರೆತರೆ ಪಿಪಿಪಿ ಮಾದರಿಯಲ್ಲಿ ಜವಳಿ ಪಾರ್ಕ್ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು. ಕಲಬುರಗಿಯಲ್ಲಿ ಪಿಎಂ ಮಿತ್ರ ಪಾರ್ಕ್ ಸ್ಥಾಪನೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

3 ವಲಯಗಳಾಗಿ ಜಿಲ್ಲೆಗಳನ್ನು ವರ್ಗೀಕರಿಸಿ ಪ್ರೋತ್ಸಾಹ: ಎಂ.ಬಿ.ಪಾಟೀಲ್

2025–30ರ ಕೈಗಾರಿಕಾ ನೀತಿಯಲ್ಲಿ ಹಿಂದುಳಿದ ಪ್ರದೇಶಗಳನ್ನು ಉತ್ತೇಜಿಸುವ ಗುರಿ

ಬೆಂಗಳೂರು, ಮಾ.10: ರಾಜ್ಯದಲ್ಲಿ ಹೊಸ ಕೈಗಾರಿಕೆಗಳ ಸ್ಥಾಪನೆಗಾಗಿ ಬಂಡವಾಳ ಹೂಡಿಕೆ ಆಕರ್ಷಿಸಲು ಸರ್ಕಾರವು ಕಾಲಕಾಲಕ್ಕೆ ಕೈಗಾರಿಕಾ ನೀತಿಗಳನ್ನು ಜಾರಿ ಮಾಡುತ್ತಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಮೇಲ್ಮನೆಯಲ್ಲಿ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಪಿ.ಎಚ್.ಪೂಜಾರ್ ಅವರಿಗೆ ಉತ್ತರ ನೀಡಿದ ಅವರು, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳನ್ನು ಒಳಗೊಂಡಂತೆ ಬಂಡವಾಳ ಆಕರ್ಷಿಸಲು ಹಲವು ಆದ್ಯತಾ ಹಾಗೂ ಪ್ರೋತ್ಸಾಹಕ ಕ್ರಮಗಳನ್ನು ಕೈಗೊಳ್ಳಲಾಗಿದೆ.

2025–30 ಕೈಗಾರಿಕಾ ನೀತಿಯು ಕೈಗಾರಿಕೆಯಲ್ಲಿ ಹಿಂದುಳಿದ ಪ್ರದೇಶವನ್ನು ಉತ್ತೇಜಿಸುವ ಗುರಿಯನ್ನು ಹೊಂದಲಾಗಿದೆ. ಕೈಗಾರಿಕೆಯಲ್ಲಿ ಹಿಂದುಳಿದ ತಾಲ್ಲೂಕುಗಳಲ್ಲಿ ಹೂಡಿಕೆಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಈ ನೀತಿಯಲ್ಲಿ 3 ವಲಯಗಳಾಗಿ ರಾಜ್ಯದ ಜಿಲ್ಲೆಗಳನ್ನು ವರ್ಗೀಕರಿಸಿದೆ. ಕೈಗಾರಿಕೆಯಲ್ಲಿ ಹಿಂದುಳಿದ ತಾಲ್ಲೂಕುಗಳು, ಜಿಲ್ಲೆಗಳನ್ನು ವಲಯ–1 ಮತ್ತು ವಲಯ–2 ರಲ್ಲಿ ಹಾಗೂ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳನ್ನು ವಲಯ–3ರಲ್ಲಿ ವರ್ಗೀಕರಿಸಲಾಗಿದೆ.

ರಾಜ್ಯದ ಸಮತೋಲನ ಕೈಗಾರಿಕಾ ಅಭಿವೃದ್ಧಿಯನ್ನು ಖಚಿತಪಡಿಸಿಕೊಳ್ಳಲು, ಕೈಗಾರಿಕೆಯಲ್ಲಿ ಹಿಂದುಳಿದ ಜಿಲ್ಲೆಗಳು, ತಾಲ್ಲೂಕುಗಳಲ್ಲಿ ಹೂಡಿಕೆಗಳನ್ನು ಆಕರ್ಷಿಸಲು ಹೆಚ್ಚಿನ ಪ್ರೋತ್ಸಾಹವನ್ನು ನೀಡಲಾಗುತ್ತಿದೆ. ದೇಶ–ವಿದೇಶಗಳ ಹಲವಾರು ಪ್ರತಿಷ್ಠಿತ ಕಂಪನಿಗಳೊಂದಿಗೆ ಕರ್ನಾಟಕದಲ್ಲಿ ಬಂಡವಾಳ ಹೂಡಲು ಸಭೆಗಳನ್ನು ನಡೆಸಲಾಗುತ್ತಿದೆ ಎಂದು ಉತ್ತರಿಸಿದರು.

ಬಳ್ಳಾರಿ ವಿಮಾನ ನಿಲ್ದಾಣ: ಸಿಎಂ ನೇತೃತ್ವದಲ್ಲಿ ಸಭೆಯಲ್ಲಿ ಸೂಕ್ತ ನಿರ್ಧಾರ

ಬಳ್ಳಾರಿಯಲ್ಲಿ ವಿಮಾನ ನಿಲ್ದಾಣ ಸ್ಥಾಪನೆ ವಿಷಯವಾಗಿ ವಿಧಾನ ಪರಿಷತ್‌ನಲ್ಲಿ ಚರ್ಚೆ ನಡೆಯಿತು. ಬಳ್ಳಾರಿಯಲ್ಲಿ ವಿಮಾನ ನಿಲ್ದಾಣ ಆಗುತ್ತದೆಯೋ ಇಲ್ಲವೋ ಎಂಬುದಷ್ಟೇ ಹೇಳಿ. ಇನ್ನೂ ವಿಮಾನ ನಿಲ್ದಾಣ ನಿರ್ಮಾಣವಾಗದೇ ಹೋದರೆ ಸ್ವಾಧೀನಪಡಿಸಿಕೊಂಡ ಜಮೀನನ್ನು ಮರಳಿ ರೈತರಿಗೆ ಕೊಡಿ ಎಂದು ಆಗ್ರಹಿಸಿದರು. ಇದಕ್ಕೆ ಉತ್ತರಿಸಿದ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್, ಬಳ್ಳಾರಿಯಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಕೈಬಿಟ್ಟಿಲ್ಲ. ವಿಮಾನ ನಿಲ್ದಾಣಕ್ಕೆ ಸಂಬಂಧಿಸಿದಂತೆ ವಿಸ್ತೃತ ಯೋಜನೆಗಾಗಿ ಸಮಾಲೋಚಕರನ್ನು ನೇಮಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ವಿಸ್ತೃತ ಯೋಜನಾ ವರದಿ ಪೂರ್ಣಗೊಂಡ ಬಳಿಕ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು. ಈ ಹಿನ್ನೆಲೆಯಲ್ಲಿಯೇ ವಿಜಯನಗರ, ಬಳ್ಳಾರಿ ಹಾಗೂ ಕೊಪ್ಪಳ ಜಿಲ್ಲೆಯ ಜನಪ್ರತಿನಿಧಿಗಳ ಸಭೆಯನ್ನು ಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಕರೆಯಲಾಗುವುದು. ಅಲ್ಲಿ ಸೂಕ್ತ ನಿರ್ಧಾರ ಹೊರಬರಲಿದೆ ಎಂದು ತಿಳಿಸಿದರು. ಸ್ವಾಧೀನಪಡಿಸಿಕೊಂಡಿರುವ ಜಮೀನನ್ನು ಪುನಃ ರೈತರಿಗೆ ಹಸ್ತಾಂತರಿಸುವುದು ಸಾಧ್ಯವಿಲ್ಲ, ಪರಿಹಾರ ಹಣ ರೈತರಿಗೆ ಜಮಾವಣೆಯಾಗಿರುತ್ತದೆ. ಹೀಗಾಗಿ, ಅಲ್ಲಿ ಪರ್ಯಾಯ ಕೈಗಾರಿಕೆ ಮೊದಲಾದ ಉದ್ದೇಶಗಳಿಗೆ ಆ ಜಮೀನನ್ನು ಬಳಸಿಕೊಳ್ಳಬಹುದು ಹೊರತು, ಅದನ್ನು ಪುನಃ ರೈತರಿಗೆ ಹಸ್ತಾಂತರಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು.

ಇಂದಿನಿಂದ ರಾಜ್ಯಾದ್ಯಂತ ವೈದ್ಯರ ಮುಷ್ಕರ: ಹೊರರೋಗಿ ಸೇವೆ ಬಂದ್

ಆರೋಗ್ಯ ಸೇವೆಯಲ್ಲಿ ವ್ಯತ್ಯಯ ಸಾಧ್ಯತೆ, ಸಾಮಾನ್ಯ ರೋಗಿಗಳಿಗೆ ಸಂಕಷ್ಟ

ಬೆಂಗಳೂರು, ಮಾ.10: ಬುಧವಾರ ದಿಂದ ಸರ್ಕಾರಿ ವೈದ್ಯರು ಮುಷ್ಕರ ನಡೆಸಲು ತೀರ್ಮಾನಿಸಿದ್ದು, ಈ ಹಿನ್ನೆಲೆಯಲ್ಲಿ ಜನಸಾಮಾನ್ಯರ ಆರೋಗ್ಯ ಸೇವೆಯಲ್ಲಿ ಭಾರೀ ವ್ಯತ್ಯಯವಾಗಲಿದೆ. ವೈದ್ಯರ ಮುಷ್ಕರದ ಹಿನ್ನೆಲೆಯಲ್ಲಿ ಹೊರರೋಗಿ (ಒಪಿಡಿ) ಸೇವೆಗಳು ಬಂದ್ ಆಗುವ ಸಾಧ್ಯತೆ ಇರುವುದರಿಂದ ಸಾಮಾನ್ಯ ಕಾಯಿಲೆ ಗಳಿಗೆ ಗುರಿಯಾಗುವ ರೋಗಿಗಳಿಗೆ ಸಂಕಷ್ಟ ಎದುರಾಗುವ ಸಾಧ್ಯತೆಗಳಿವೆ.

ಹಲ್ಲು ನೋವು, ಜ್ವರ, ಸ್ಕಿನ್ ಅಲರ್ಜಿ ಸೇರಿದಂತೆ ಸಾಮಾನ್ಯ ಕಾಯಿಲೆಗಳಿಗೆ ಸರ್ಕಾರಿ ಆಸ್ಪತ್ರೆಗೆ ತೆರಳುವ ಬಡವರು ಹಾಗೂ ಇತರ ರೋಗಿಗಳು ಚಿಕಿತ್ಸೆ ಸಿಗದೆ ಪರದಾಡಬೇಕಾಗುತ್ತದೆ. ವಿವಿಧ ಬೇಡಿಕೆಗಳನ್ನು ಮುಂದಿಟ್ಟುಕೊಂಡು ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘ ನಾಳೆಯಿಂದ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡಿದ್ದು, ಸರ್ಕಾರಿ ಆಸ್ಪತ್ರೆಗಳ ಓಪಿಡಿ ಸೇವೆಗಳು ಸ್ಥಗಿತಗೊಳ್ಳುವ ಆತಂಕ ವ್ಯಕ್ತವಾಗಿದೆ. ರಾಜ್ಯಾದ್ಯಂತ, ವಿಶೇಷವಾಗಿ ರಾಜಧಾನಿ ಬೆಂಗಳೂರಿನಲ್ಲಿ ಆರೋಗ್ಯ ತುರ್ತು ಪರಿಸ್ಥಿತಿ ನಿರ್ಮಾಣವಾಗಲಿದೆ.

ವೈದ್ಯರು 15 ಪ್ರಮುಖ ಬೇಡಿಕೆಗಳು ಮುಂದಿಟ್ಟು ಹೋರಾಟಕ್ಕೆ ಮುಂದಾಗಿದ್ದಾರೆ. ಹಲವು ವರ್ಷಗಳಿಂದ ಬಾಕಿ ಉಳಿದಿರುವ ವೃಂದ ಹಾಗೂ ನೇಮಕಾತಿ ಸಮಸ್ಯೆಗಳನ್ನು ಪರಿಹರಿಸುವಂತೆ ಅವರು ಒತ್ತಾಯಿಸಿದ್ದಾರೆ. ಜೊತೆಗೆ13 ವರ್ಷಗಳಿಂದ ಪರಿಷ್ಕರಣೆ ಆಗದ ವೈದ್ಯರ ಜೇಷ್ಠತಾ ಪಟ್ಟಿ, ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಕೊರತೆ, ವೈದ್ಯಕೀಯ ಸಿಬ್ಬಂದಿ ಕೊರತೆ ಸೇರಿದಂತೆ ಇನ್ನಿತರ 15 ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಅವರು ಒತ್ತಾಯಿಸಿದ್ದಾರೆ.

ಈ ಸಮಸ್ಯೆಗಳ ಪರಿಹಾರಕ್ಕಾಗಿ ಆರೋಗ್ಯ ಇಲಾಖೆ ಇದುವರೆಗೆ ಒಟ್ಟು 7 ಸಭೆಗಳನ್ನು ನಡೆಸಿದೆ. ಆದರೆ ಯಾವುದೇ ಸ್ಪಷ್ಟ ಲಿಖಿತ ಭರವಸೆ ದೊರೆಯದ ಹಿನ್ನೆಲೆಯಲ್ಲಿ ವೈದ್ಯರು ಮುಷ್ಕರಕ್ಕೆ ಇಳಿಯಲು ತೀರ್ಮಾನಿಸಿದ್ದಾರೆ.

**ಜನಸಾಮಾನ

ನೇಮಕಾತಿ, ಬಾಕಿ ವೇತನಕ್ಕೆ ಆಗ್ರಹ: ಗ್ರಾಪಂ ನೌಕರರ ಧರಣಿ

ಕಲಬುರಗಿ, ಮಾ.10: ನೇಮಕಾತಿ ಮತ್ತು ಬಾಕಿ ವೇತನ ಪಾವತಿ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ನೇತೃತ್ವದಲ್ಲಿ ಗ್ರಾಮ ಪಂಚಾಯಿತಿ ನೌಕರರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿ ಮುಂದೆ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಆರಂಭಿಸಿದರು.

ಸಪ್ರತಿಭಟನೆಕಾರರು ನಂತರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ಕಳೆದ 2017ರ ಅಕ್ಟೋಬರ್ 31ಕ್ಕಿಂತ ಮೋದಲಿನ ಎಲ್ಲ ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ಏಕಕಾಲಕ್ಕೆ ಅನುಮೋದನೆ ನೀಡಬೇಕು ಮತ್ತು ಒಬ್ಬರಂತೆ ಹಾಗೂ 3 ಮಿನಿ ವಾಟರ್ ಟ್ಯಾಂಕ್ (ಗುಮ್ಮಿ)ಗೆ ಒಬ್ಬರಂತೆ ಪಂಪ ಆಪರೇಟರ್ ಅನುಮೋದನೆ ಕೊಡಬೇಕು. ಇಎಫ್ಎಮ್ಎಸ್.ಗಿಂತ ಮೋದಲಿನ ಬಾಕಿನಿಂತ ವೇತನ ಕರವ ಸೂಲಾತಿಯಲ್ಲಿ 40ರಷ್ಟು ಸಿಬ್ಬಂದಿ ವೇತನ ಕೊಡುವಂತೆ ಒತ್ತಾಯಿಸಿದರು.

ಕರ ವಸೂಲಿಗಾರ ಹಾಗೂ ಡಿಇಓ ಹುದ್ದೆಯಿಂದ ಗ್ರೇಡ್ 2 ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳಿಗೆ ನೇಮಕಾತಿ ಮಾಡಲು ಈಗಾಲೇ ಪ್ರಚುರಪಡಿಸಿರುವ ತಾತ್ಕಾಲಿಕ ಪಟ್ಟಿ ಅಂತಿಮಗೊಳಿಸಿ, ಆದಯೇಶ ನೀಡುವಂತೆ, ಖಾಲಿಯಿರುವ ಗ್ರೇಡ್ 2 ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಸೇವೆಯಲ್ಲಿರುವವರಿಗೆ ಹುದ್ದೆಗಳ ನೇಮಕಾತಿ (ಬಡ್ತಿ) ಮಾಡಿಕೊಳ್ಳುವಂತೆ ಅವರು ಆಗ್ರಹಿಸಿದರು.

ತೆರವಾದ ಬಿಲ್ ಕಲೆಕ್ಟರಗಳ ಸ್ಥಾನಗಳಿಗೆ ಅರ್ಹ ವಾಟರಮೆನ, ಸಿಪಾಯಿ, ಸ್ವಚ್ಛತೆಗಾರರಿಗೆ ಜೇಸ್ವತಾ ಆದಧಿರದಲ್ಲಿ 'ಬಿಲ್ಲ ಕಲೆಕ್ಟರ್ ಸ್ಥಾನಕ್ಕೆ ಬಡ್ತಿ ನೀಡುವಂತೆ, ಈಗಾಗಲೇ ತರಬೇತಿ ಪಡೆದ ಎಲ್ಲ ಸ್ವಚ್ಛವಾಹಿನಿ ನೌಕರರಿಗೆ ಕೆಲಸ ನೀಡಬೇಕು ಮತ್ತು ಈಗಾಗಲೇ ಕರ್ತವ್ಯನಿರ್ವಹಿಸುತ್ತಿರುವ ನೌಕರರಿಗೆ ಬಾಕಿ ಇರುವ ವೇತನ ನೀಡುವಂತೆ, ನಿವೃತ್ತಿಯಾದ ಸಿಬ್ಬಂದಿಗಳಿಗೆ 20 ತಿಂಗಳ ವೇತನ ಪಾವತಿಸುವಂತೆ, ರಜಾ ದಿನಗಳಲ್ಲಿ ಸಿಬ್ಬಂದಿಗಳಿಗೆ ಕೆಲಸದ ಒತ್ತಡ ಹೇರುತ್ತಿದ್ದು ಅದನ್ನು ತಡೆಗಟ್ಟುವಂತೆ, ಬಾಕಿ ಹಣ ವ್ಯತ್ಯಾಸ ಸರಿಪಡಿಸುವಂತೆ ಅವರು ಒತ್ತಾಯಿಸಿದರು.

ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ದಲಿತ ಸಂಘರ್ಷ ಸಮಿತಿ ಸದಸ್ಯರು ಮಂಗಳವಾರ ಹೊಸದೂರ, ಚಳ್ಳಕೆರೆ ಮತ್ತು ಹಿರಿಯೂರು ಪ್ರದೇಶಗಳಲ್ಲಿ ದಲಿತ ಕುಟುಂಬಗಳಿಗೆ ಪುನರ್ವಸತಿ ಕಲ್ಪಿಸಬೇಕೆಂದು ಒತ್ತಾಯಿಸಿ ಧರಣಿ ನಡೆಸಿದರು.

ಮಹಿಳೆಯರ ಸಬಲೀಕರಣವೇ ಸಮಾಜದ ಪ್ರಗತಿಯ ಮೂಲ: ಸಚಿವ ಈಶ್ವರ ಖಂಡ್ರೆ

ಬೀದರ್, ಮಾ. 10: ಮಹಿಳೆಯರ ಸಬಲೀಕರಣವೇ ಸಮಾಜದ ಪ್ರಗತಿಯ ಮೂಲವಾಗಿದೆ. ಆದ್ದರಿಂದಲೇ ನಮ್ಮ ಸರ್ಕಾರ ಮಹಿಳಾ ಸಬಲೀಕರಣಕ್ಕೆ ವಿವಿಧ ಯೋಜನೆಗಳನ್ನು ಅನುಷ್ಠಾನಕ್ಕೆ ತಂದಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ತೊಟ್ಟಿಲು ತೂಗುವ ಕೈ ದೇಶವನ್ನೂ ಆಳಬಲ್ಲದು ಎಂಬ ಮಾತಿನಂತೆ ಮಹಿಳೆಯರು ಇಂದು ಸಮಾಜದ ಎಲ್ಲ ಕ್ಷೇತ್ರಗಳಲ್ಲಿಯೂ ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿದ್ದಾರೆ. ಉಕ್ಕಿನ ಮಹಿಳೆ ಎಂದು ಖ್ಯಾತಿ ಪಡೆದ ಮಾಜಿ ಪ್ರಧಾನಮಂತ್ರಿ ಇಂದಿರಾ ಗಾಂಧಿ ಅವರ ದಿಟ್ಟ ಆಡಳಿತ ದೇಶದ ಇತಿಹಾಸದಲ್ಲಿ ಮಹತ್ವದ ಅಧ್ಯಾಯವಾಗಿದೆ' ಎಂದರು.

ಕ್ರೀಡಾ ಕ್ಷೇತ್ರದಲ್ಲಿ ಪಿ.ಟಿ. ಉಷಾ, ಸೈನಾ ನೆಹ್ವಾಲ್ ಸೇರಿದಂತೆ ಅನೇಕ ಮಹಿಳಾ ಕ್ರೀಡಾಪಟುಗಳು ದೇಶಕ್ಕೆ ಕೀರ್ತಿ ತಂದುಕೊಟ್ಟಿದ್ದಾರೆ. ಅಂತರಿಕ್ಷ ಕ್ಷೇತ್ರದಲ್ಲಿ ಕಲ್ಪನಾ ಚಾವ್ಲಾ ಮತ್ತು ಸುನೀತಾ ವಿಲಿಯಮ್ಸ್ ಅವರು ಭಾರತದ ಹೆಸರನ್ನು ವಿಶ್ವದ ಮಟ್ಟದಲ್ಲಿ ಎತ್ತಿಹಿಡಿದಿದ್ದಾರೆ ಎಂದು ಸಚಿವರು ಉಲ್ಲೇಖಿಸಿದರು.

ಕರ್ನಾಟಕ ಕಾಂಗ್ರೆಸ್ ಸರ್ಕಾರ ಮಹಿಳಾ ಸಬಲೀಕರಣಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಿದ್ದು, ಗೃಹಲಕ್ಷ್ಮಿ ಯೋಜನೆಯಡಿ ಪ್ರತಿ ಕುಟುಂಬದ ಯಜಮಾನಿ ಮಹಿಳೆಗೆ ತಿಂಗಳಿಗೆ 2,000 ಆರ್ಥಿಕ ನೆರವು ನೀಡಲಾಗುತ್ತಿದೆ. ಶಕ್ತಿ ಯೋಜನೆಯಡಿ ರಾಜ್ಯದ ಕೋಟ್ಯಂತರ ಮಹಿಳೆಯರು ಉಚಿತವಾಗಿ ಬಸ್ ಪ್ರಯಾಣದ ಸೌಲಭ್ಯ ಪಡೆಯುತ್ತಿದ್ದಾರೆ ಎಂದರು.

ಕುಟುಂಬ–ಸಮಾಜದ ಸ್ವಾಸ್ಥ್ಯಕ್ಕೆ ಸ್ತ್ರೀ ಪಾತ್ರ ಅನನ್ಯ: ಡಾ.ಭಾಗ್ಯಶ್ರೀ ಪಾಟೀಲ್

ಕಲಬುರಗಿ, ಮಾ. 10: ಎಲ್ಲರ ಕಾಳಜಿ ವಹಿಸುವ ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ಹೆಣ್ಣುಮಕ್ಕಳು ತಮ್ಮ ಹಿತಾಸಕ್ತಿ ಕಾಪಾಡಿಕೊಂಡು ಆರೋಗ್ಯ ವನ್ನು ಚನ್ನಾಗಿ ನೋಡಿಕೊಳ್ಳಬೇಕು, ಕುಟುಂಬ ಮತ್ತು ಸಮಾಜದ ಸ್ವಾಸ್ಥ್ಯ ಕಾಪಾಡುವಲ್ಲಿ ಮಹಿಳೆಯರ ಪಾತ್ರ ಅನನ್ಯವಾಗಿದೆ ಎಂದು ಕಲಬುರಗಿಯ 'ಕದಳಿ ಸಿರಿ' ಆಸ್ಪತ್ರೆಯ ನಿರ್ದೇಶಕರು ಹಾಗೂ ಖ್ಯಾತ ಸ್ತ್ರೀರೋಗ ತಜ್ಞರಾದ ಡಾ.ಭಾಗ್ಯಶ್ರೀ ಶರಣಪ್ರಕಾಶ ಪಾಟೀಲ ಹೇಳಿದರು.

ನಗರದ ಶ್ರೀ ಹೇಮರೆಡ್ಡಿ ಮಲ್ಲಮ್ಮ ಹಾಗೂ ಶ್ರೀ ವೇಮನ ದೇವಸ್ಥಾನದಲ್ಲಿ ಶ್ರೀ ಗೌರಿ ಮಹಿಳಾ ಸ್ವ–ಸಹಾಯ ಸಂಘ ಹಾಗೂ ಶ್ರೀ ಹೇಮ–ವೇಮ ಮಹಿಳಾ ಸಂಘ ವತಿಯಿಂದ ಆಯೋಜಿಸಿದ್ದ 'ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ' ಕಾರ್ಯಕ್ರಮ ವನ್ನು ಉದ್ಘಾಟಿಸಿ ಮಾತನಡಿದ ಅವರು, ಮಹಿಳೆಯರು ತಮ್ಮ ಮಾನಸಿಕ ಮತ್ತು ದೈಹಿಕ ಆರೋಗ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕು. ಪ್ರತಿಯೊಬ್ಬರ ಆರೋಗ್ಯದ ಗುಟ್ಟು ಇರುವುದು ನಾವು ಸೇವಿಸುವ ಆಹಾರದಲ್ಲಿ. ಪೌಷ್ಟಿಕ ಆಹಾರ ಸೇವನೆಯಿಂದ ಮಹಿಳೆಯರು ಸುದೀರ್ಘ ಆರೋಗ್ಯ ದಿಂದ ಇರಬೇಕು ಎಂದು ಸಲಹೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಬದಲಾದ ಜೀವನ ಪದ್ಧತಿಯ ಕಾರಣ ಮತ್ತು ದೈಹಿಕ ಪರಿಶ್ರಮದ ಕೊರತೆಯಿಂದಾಗಿ ವಿಶೇಷವಾಗಿ ಮಹಿಳೆಯರಲ್ಲಿ ಆರೋಗ್ಯದ ಸಮಸ್ಯೆಗಳು ಎದುರಾ ಗುತ್ತಿವೆ. ಆದ್ದರಿಂದ ಮಹಿಳೆಯರು ಪ್ರತಿನಿತ್ಯ ವಾಕಿಂಗ್, ವ್ಯಾಯಾಮ ಮತ್ತು ಧ್ಯಾನ ಮಾಡುವುದನ್ನು ರೂಢಿಸಿಕೊಳ್ಳಬೇಕು. ದಿನಕ್ಕೆ ಎರಡು ಬಾರಿ ಊಟ ಮಾಡುವುದು ಉತ್ತಮ ಕ್ರಮವಾಗಿದೆ. ಆಹಾರ ಸೇವನೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ತರಕಾರಿಗಳ ಸೇವನೆ ಮಾಡಬೇಕು. 40 ದಾಟಿದ ಮಹಿಳೆಯರು ವರ್ಷಕ್ಕೆ ಒಮ್ಮೆಯಾದರೂ ಬಿಪಿ, ಶುಗರ್ ಸೇರಿದಂತೆ ಇತರ ತಪಾಸಣೆಗಳನ್ನು ಮಾಡಿಕೊಳ್ಳಬೇಕು. ಇದರಿಂದ ಮುಂದೆ ಬರಬಹುದಾದ ರೋಗವನ್ನು ಮುಂಚಿತವಾಗಿ ತಡೆಗಟ್ಟಲು ಸಾಧ್ಯವಾಗಲಿದೆ ಎಂದರು.

ನ್ಯಾಯವಾದಿ ಮಂಜುಳಾ ಚವ್ಹಾಣ ಮಾತನಾಡಿ, ರಾಜಕೀಯ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಪ್ರತಿಶತ 3% ಮೀಸಲಾತಿ ಇದ್ದು, ಆದರೆ ಮಹಿಳೆಯರು ಭಾಗವಹಿಸುವಿಕೆ ಕಡಿಮೆ ಇರುತ್ತದೆ. ಹೆಣ್ಣು ಮಕ್ಕಳಿಗೆ ತಮ್ಮ ಹಕ್ಕನ್ನು ಚಲಾಯಿಸಲು ಮನೆಯಲ್ಲಿನ ಗಂಡಸರ ಆಜ್ಞೆಯಾಗಬೇಕು. ಈ ರೀತಿ ಬೆಳವಣಿಗೆ ಒಳ್ಳೆಯದಲ್ಲ, ಆತ್ಮೀಯತೆ, ಬಾಂಧ್ಯವದ ಸಂಸಾರದಿಂದ ಮಾತ್ರ ಹೆಣ್ಣಿಗೆ ಗೌರವ ನೀಡಬಹುದಾಗಿದೆ. ಒಬ್ಬ ವ್ಯಕ್ತಿ ಗಟ್ಟುಯಾಗಿ ನಿಲ್ಲಬೇಕೆಂದರೆ ಛಲ ಇರಬೇಕು, ಛಲದ ಜೊತೆಗೆ ತಾಯಿ ಶ್ರೀ ಹೇಮರೆಡ್ಡಿ ಮಲ್ಲಮ್ಮಳಂತಹ ತಾಯಿ, ಹೆಂಡತಿ ಹಾಗೂ ಅಕ್ಕ, ತಂಗಿ ರೂಪದಲ್ಲಿ ಮಹಿಳೆಯರು ಒಲಿದು ಬರಲಿ ಎಂದು ಹೇಳಿದರು.

ಕೃಷಿ ಇಲಾಖೆಯ ಉಪ ನಿರ್ದೇಶಕಿ ಅನಸೂಯಾ ಹೂಗಾರ ಮಾತನಾಡಿ, ಮಹಿಳಾ ಸ್ವ–ಸಹಾಯ ಸಂಘಗಳಿಗೆ ಸರಕಾರದ ಮಟ್ಟದಲ್ಲಿ ಅನೇಕ ಯೋಜನೆಗಳಿದ್ದು, ಅವುಗಳ ಲಾಭ ಮಹಿಳೆಯರು ಪಡೆದುಕೊಳ್ಳುವಂತಾಗಬೇಕು. ಕೃಷಿ ಇಲಾಖೆಯಲ್ಲಿ ಕೃಷಿಕ ಮಹಿಳೆಯರಿಗಾಗಿ ಇರುವ ಸವಲತ್ತುಗಳ ಬಗ್ಗೆ ಮಾಹಿತಿ ಮತ್ತು ಸಹಕಾರ ನಾವು ಸದಾ ನೀಡುತ್ತೇವೆ ಎಂದರು.

ಪದವಿ ಜತೆ ವೃತ್ತಿ ಕೌಶಲ ಬೆಳೆಸಿಕೊಳ್ಳಿ: ಪ್ರೊ ವೆಂಕಪ್ಪಯ್ಯ

ರಾಯಚೂರು, ಮಾ. 10: ವಿದ್ಯಾರ್ಥಿಗಳು ಪದವಿಯ ಜತೆಗೆ ಕೌಶಲವನ್ನು ಬೆಳೆಸಿಕೊಳ್ಳಬೇಕು. ಅಂದಾಗ ಮಾತ್ರ ವೃತ್ತಿಯಲ್ಲಿ ಉನ್ನತ ಮಟ್ಟಕ್ಕೆ ತಲುಪಲು ಸಾಧ್ಯವಾಗುತ್ತದೆ ಎಂದು ಧಾರವಾಡದ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ (ಐಐಟಿ) ನಿರ್ದೇಶಕ ವೆಂಕಪ್ಪಯ್ಯ ದೇಸಾಯಿ ಹೇಳಿದರು.

ನಗರದ ನವೋದಯ ಶಿಕ್ಷಣ ಸಂಸ್ಥೆಯ ಮುಖ್ಯ ಸಭಾಂಗಣದಲ್ಲಿ ಫಾರ್ಮಸಿ, ನರ್ಸಿಂಗ್, ಅಲೈಡ್ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ ಹಾಗೂ ತಂತ್ರಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿ ಅವರು ಮಾತನಾಡಿದರು.

ಇಂದಿನ ದಿನಮಾನಗಳಲ್ಲಿ ವಿದ್ಯಾರ್ಥಿಗಳು ಕೇವಲ ಅಂಕಗಳಿಸಿದರೆ ಸಾಲದು. ವೃತ್ತಿ ಕೌಶಲ ಬೆಳೆಸಿಕೊಂಡು ಸ್ಪರ್ಧಾತ್ಮಕ ಜಗತ್ತಿನಲ್ಲಿ ಕಾರ್ಯನಿರ್ವಹಿಸಲು ಸನ್ನದ್ಧರಾಗಬೇಕು ಎಂದು ಕರೆ ನೀಡಿದರು.

ಜಪಾನ್‌ನಲ್ಲಿ ಯಾವುದೇ ಕೀಳರಿಮೆಯಿಲ್ಲದೆ ಪೂರ್ವ ಪ್ರಾಥಮಿಕದಿಂದ ಸ್ನಾತಕೋತ್ತರ ತರಗತಿವರೆಗೆ ಅಲ್ಲಿಯ ವಿದ್ಯಾರ್ಥಿಗಳು ತರಗತಿಗಳಲ್ಲಿ ಕಸಗುಡಿಸಿ ಸ್ವಚ್ಛವಾಗಿಟ್ಟುಕೊಳ್ಳುತ್ತಾರೆ. ಅಂತಹ ಸೇವಾಭಾವ ನಮ್ಮಲ್ಲೂ ಬರಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ನವೋದಯ ಶಿಕ್ಷಣ ಸಂಸ್ಥೆ ಅಧ್ಯಕ್ಷ ಎಸ್.ಆರ್. ರೆಡ್ಡಿ ಮಾತನಾಡಿ, ವೃತ್ತಿಪರತೆ, ಪ್ರಾಮಾಣಿಕತೆ ನಮ್ಮ ಧ್ಯೇಯವಾಗಬೇಕು. ಗ್ರಾಮೀಣ ಪ್ರದೇಶ ಹಾಗೂ ಬಡವರ ಬಗ್ಗೆ ನಾವು ಯೋಚಿಸಬೇಕು ಸಹೋದ್ಯೋಗಿಗಳೊಂದಿಗೆ ನಯ ವಿನಯ ಶೀಲರಾಗಿರಬೇಕು ಎಂದು ತಿಳಿಸಿದರು.

ರಿಜಿಸ್ಟ್ರಾರ್ ಟಿ.ಶ್ರೀನಿವಾಸ್, ಡಾ.ರಾಮಮೋಹನ ಗುಪ್ತಾ, ಡಾ.ವಿಜಯಕುಮಾರ್, ಡಾ.ದೇವಾನಂದ, ಡಾ.ಉಮಾಕಾಂತ, ಡಾ.ಕಾಜೋಲ್, ಡಾ.ದೊಡ್ಡಯ್ಯ, ಡಾ. ಆನಂದ ಎಸ್.ಎಸ್. ಉಪಸ್ಥಿತರಿದ್ದರು. ಡಾ.ಅಮೃತ ರೆಡ್ಡಿ, ಸ್ವಾಗತಿಸಿದರು.

ದೋಹಾ ಬಂದರಿನಲ್ಲಿ ಸಿಲುಕಿರುವ ಕರ್ನಾಟಕದ 8 ಪ್ರವಾಸಿಗರು

ದಾವಣಗೆರೆ. ಮಾ.10; ಮಧ್ಯಪ್ರಾಚ್ಯ ದಲ್ಲಿ ನಡೆಯುತ್ತಿರುವ ಯುದ್ಧದ ಹಿನ್ನೆಲೆಯಲ್ಲಿ ಕರ್ನಾಟಕದ ಎಂಟು ಮಂದಿ ಭಾರತೀಯ ಪ್ರವಾಸಿಗರು ಹಳೆಯ ದೋಹಾ ಬಂದರಿನಲ್ಲಿ ಸಿಲುಕಿಕೊಂಡಿರುವ ಮಾಹಿತಿ ಲಬ ವಾಗಿದೆ. ಅವರ ಸುರಕ್ಷತೆ ಕುರಿತು ಆತಂಕ ವ್ಯಕ್ತವಾಗಿದ್ದು, ತಕ್ಷಣ ಕ್ರಮಕ್ಕೆ ಗೊಳ್ಳುವಂತೆ ಭಾರತ ಸರ್ಕಾರದ ವಿದೇಶಾಂಗ ವ್ಯವಹಾರಗಳ ಸಚಿ ವಾಲಯಕ್ಕೆ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಹಾಗೂ ಸಂಸದೆ ಡಾ.ಪ್ರಭಾ ಮಲ್ಲಿ ಕಾರ್ಜುನ್ ಮನವಿ ಮಾಡಿದ್ದಾರೆ.

ವಿದೇಶಾಂಗ ಸಚಿವ ಡಾ.ಸುಬ್ರಹ್ಮಣ್ಯಂ ಜೈಶಂಕರ್ ಅವರಿಗೆ ಈ ಕುರಿತು ಮನವಿ ಸಲ್ಲಿಸಲಾಗಿದ್ದು, ಸಂಬಂಧಿತ ರಾಯಭಾರಿ ಕಚೇರಿ ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಿ ಪ್ರವಾಸಿಗರನ್ನು ಶೀಘ್ರದಲ್ಲೇ ಸುರಕ್ಷಿತವಾಗಿ ಭಾರತಕ್ಕೆ ಕರೆತರಲು ಕ್ರಮ ಕೈಗೊಳ್ಳುವಂತೆ ವಿನಂತಿಸಿದ್ದಾರೆ.

ಸಿಲುಕಿಕೊಂಡಿರುವ ಪ್ರವಾಸಿಗರ ಸುರಕ್ಷತೆ ಹಾಗೂ ಶೀಘ್ರ ವಾಪಸ್ಸಿಗಾಗಿ ಕೇಂದ್ರ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂಬ ನಿರೀಕ್ಷೆ ವ್ಯಕ್ತ ವಾಗಿದೆ ಎಂದು ಸಚಿವರು ಹಾಗೂ ಸಂಸದರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸದನದಲ್ಲಿ ಕಲುಷಿತ ನೀರು ಪ್ರದರ್ಶಿಸಿದ ಸೂರಜ್ ರೇವಣ್ಣ

ಬೆಂಗಳೂರು/ಹಾಸನ, ಮಾ.10: ಹಾಸನ ತಾಲೂಕಿನ ಕೌಶಿಕ ಗ್ರಾಮದ ಕಾರ್ಖಾನೆಗಳಿಂದ ಹೊರಬರುತ್ತಿರುವ ರಾಸಾಯನಿಕ ತ್ಯಾಜ್ಯಗಳು ಕೊಳವೆ ಬಾವಿ ಸೇರಿ, ಸುತ್ತಮುತ್ತಲಿನ ಗ್ರಾಮಗಳ ಅನೇಕ ಮನೆಗಳಿಗೆ ಕಲುಷಿತ ನೀರು ಪೂರೈಕೆಯಾಗುತ್ತಿದೆ ಎಂದು ಅಲ್ಲಿ ಪೂರೈಕೆಯಾದ ಕಲುಷಿತ ನೀರಿನ ಬಾಟಲಿಯನ್ನು ಸದನದಲ್ಲಿ ಜೆಡಿಎಸ್ ಸದಸ್ಯ ಡಾ.ಸೂರಜ್ ರೇವಣ್ಣ ಪ್ರದರ್ಶಿಸಿದ ಪ್ರಸಂಗ ಇಂದು ನಡೆಯಿತು.

ಈ ರೀತಿ ಅತ್ಯಂತ ಕಲುಷಿತ ಪ್ರಮಾಣದಲ್ಲಿ ನೀರು ಪೂರೈಕೆಯಾಗುತ್ತಿದೆ. ಇಂಥ ನೀರು ಕುಡಿದರೆ ಅಲ್ಲಿನ ಜನರ ಗತಿಯೇನು. ಕೌಶಿಕ ಗ್ರಾಮದ ಬಳಿ ಇರುವ ವೈನ್ ಸೂಪರ್ ಪ್ರೈಡ್ ಮೊದಲಾದ ವಿವಿಧ ಕಾರ್ಖಾನೆಗಳ ಲ್ಯಾಬೋರೇಟರಿಗಳಿಂದ ರಾಸಾಯನಿಕ ತ್ಯಾಜ್ಯಗಳನ್ನು ಯಾವ ಮಾನದಂಡ ಅನುಸರಿಸದೇ ಅವೈಜ್ಞಾನಿಕವಾಗಿ ಬಿಡುತ್ತಿರುವುದರಿಂದ ಈ ರಾಸಾಯನಿಕ ಕೊಳವೆಬಾವಿಗಳಿಗೆ ಸೇರುತ್ತಿದೆ. ಇದು ಗಂಭೀರ ಸಮಸ್ಯೆ ಎಂದು ವಿಧಾನ ಪರಿಷತ್‌ನಲ್ಲಿ ಗಮನ ಸೆಳೆದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಈಶ್ವರ ಖಂಡ್ರೆ, ಈಗಾಗಲೇ ಈ ಸಮಸ್ಯೆಯನ್ನು ನಿವಾರಣೆ ಮಾಡಲಾಗಿದೆ. ಇನ್ನೂ ಆತಂಕವಿದ್ದರೆ ಕೂಡಲೇ ಇನ್ನೊಂದು ವೈಜ್ಞಾನಿಕ ಪರಿವೀಕ್ಷಣಾ ತಂಡವನ್ನು ಸ್ಥಳಕ್ಕೆ ಕಳುಹಿಸಲಾಗುವುದು. ಕೊಳವೆಬಾವಿಗಳಿಗೆ ರಾಸಾಯನಿಕ ಹರಿಬಿಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಮಡಿಕೇರಿಗೆ 7 ಕಿ.ಮೀ., ನಾಗರಹೊಳೆ ವಿಭಾಗದಲ್ಲಿ 20 ಕಿ.ಮೀ. ತಡೆಗೋಡೆ ನಿರ್ಮಾಣ ಶೀಘ್ರ ಈಶ್ವರ ಖಂಡ್ರೆ

ಬೆಂಗಳೂರು/ಮಡಿಕೇರಿ, ಮಾ.10: ಆನೆ–ಮಾನವ ಸಂಘರ್ಷ ನಿಯಂತ್ರಿಸಲು 2025–26ನೇ ಸಾಲಿನಲ್ಲಿ ಮಡಿಕೇರಿ ವಿಭಾಗಕ್ಕೆ 7 ಕಿ.ಮೀ ಮತ್ತು ನಾಗರಹೊಳೆ ವಿಭಾಗಕ್ಕೆ 20 ಕಿ.ಮೀ. ರೈಲು ಹಳಿ ತಡೆಗೋಡೆ ಮಂಜೂರಾಗಿದ್ದು, ಶೀಘ್ರ ಕಾಮಗಾರಿ ಆರಂಭಿಸಲಾಗುವುದು ಎಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ವಿಧಾನ ಪರಿಷತ್ತಿಗಿಂದು ತಿಳಿಸಿದ್ದಾರೆ. ಶೂನ್ಯವೇಳೆಯಲ್ಲಿ ಸುಜಾ ಕುಶಾಲಪ್ಪ ಅವರ ಪ್ರಸ್ತಾಪಕ್ಕೆ ಪ್ರತಿಕ್ರಿಯಿಸಿದ ಸಚಿವರು, ಫೆ.28ರಂದು ಕಾಡಿನಂಚಿನ ನಿವಾಸಿ 17 ವರ್ಷದ ಬಾಲಕಿ ಆನೆ ದಾಳಿಯಿಂದ ಮೃತಪಟ್ಟಿದ್ದರೆ, ಮಾ.9ರಂದು ಕಾಡಿನೊಳಗೇ ವಾಸಿಸುತ್ತಿದ್ದ 55 ವರ್ಷದ ಬುಡಕಟ್ಟು ಮಹಿಳೆ ಸಾವಿಗೀಡಾಗಿದ್ದಾರೆ ಇದು ಅತ್ಯಂತ ನೋವಿನ ಸಂಗತಿ ಎಂದರು. ಜೀವ ಅತ್ಯಂತ ಅಮೂಲ್ಯವಾದ್ದು, ಇದಕ್ಕೆ ಬೆಲೆ ಕಟ್ಟಲು ಸಾಧ್ಯವೇ ಇಲ್ಲ. ಅರಣ್ಯ ಇಲಾಖೆ ಮಾನವ–ವನ್ಯಜೀವಿ ಸಂಘರ್ಷ ತಡೆಯಲು ಎಲ್ಲ ಕ್ರಮಗಳನ್ನು ಕೈಗೊಳ್ಳುತ್ತಿದೆ. ಆನೆ ನಿಗ್ರಹ ಕಂದಕ, ಸೌರ ವಿದ್ಯುತ್ ಬೇಲಿ ನಿರ್ವಹಣೆ ಮಾಡಲಾಗುತ್ತಿದೆ. 2 ಆನೆ ಕಾಂಪೌಂಡ್ ಕಾರ್ಯನಿರ್ವಹಿಸುತ್ತಿದೆ. ಈಗ 2 ಪುಂಡಾನೆಗಳ ಸೆರೆಗೆ ಮುಖ್ಯ ವನ್ಯಜೀವಿ ಪರಿಪಾಲಕರು ಆದೇಶ ನೀಡಿದ್ದಾರೆ ಎಂದು ತಿಳಿಸಿದರು. ಈ ಎರಡೂ

ಅಭಿವೃದ್ಧಿ ಶೂನ್ಯವಾದ ಸಿದ್ದು ಬಜೆಟ್ ಜನವಿರೋಧಿ: ಡಾ. ಉಮೇಶ್ ಜಾಧವ್

ಕಲಬುರಗಿ, ಮಾ.10: ಅಭಿವೃದ್ಧಿ ಶೂನ್ಯವಾದ ಕಾಂಗ್ರೆಸ್ ಸರ್ಕಾರದ 2026– 27ನೇ ಸಾಲಿನ ಬಜೆಟ್ ಏಳು ಕೋಟಿ ಕನ್ನಡಿಗರ ಮೇಲೆ ಸಾಲದ ಹೊರೆಯನ್ನು ಹೊರಿಸಿದ ಗೊತ್ತುಗುರಿ ಇಲ್ಲದ ಜನ ವಿರೋಧಿ ಬಜೆಟ್ ಎಂದು ಮಾಜಿ ಲೋಕಸಭಾ ಸದಸ್ಯರಾದ ಡಾ. ಉಮೇಶ್ ಜಾಧವ್ ಪ್ರತಿಕ್ರಿಯೆ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್ ಸರಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು 17ನೇ ಬಾರಿಗೆ ಬಜೆಟ್ ಮಂಡಿಸುವುದಾಗಿ ಹೆಮ್ಮೆಯಿಂದ ಬೀಗುತ್ತಿದ್ದು, ಆದರೆ ಬಜೆಟ್ ಘೋಷಣೆಯಲ್ಲಿ ಜನಪರವಾದ ಯೋಜನೆಗಳಿಲ್ಲದೆ ಮುಂದಿನ ದಿನಗಳಲ್ಲಿ ಜನಸಾಮಾನ್ಯರ ಮೇಲೆ ತೆರಿಗೆ ಭಾರವನ್ನು ಹೊರಿಸಿದ ಸಾಲದ ಹೊರೆಯ ಬಜೆಟ್ ಇದಾಗಿದೆ. ಕೇವಲ ಅಧಿಕಾರದಲ್ಲಿ ಮುಂದುವರೆಯುವ ಗ್ಯಾರೆಂಟಿ ಯೋಜನೆಗಳ ಹಣಕಾಸು ಸಚಿವರಾದ ಮುಖ್ಯಮಂತ್ರಿಗಳು ತೀವ್ರ ಕಸರತ್ತು ನಡೆಸಿರುವುದು ಬಜೆಟ್‌ನಲ್ಲಿ ತಿಳಿದು ಬರುತ್ತದೆ. ಶಕ್ತಿ ಯೋಜನೆಗೆ 5,300 ಕೋಟಿ ಗೃಹಲಕ್ಷ್ಮಿ ಯೋಜನೆಗೆ 8,600 ಕೋಟಿ, ಅನ್ನಭಾಗ್ಯ ಯೋಜನೆಗೆ 6,200 ಕೋಟಿ, ಗೃಹಜ್ಯೋತಿ ಯೋಜನೆಗೆ 10,578 ಕೋಟಿ ಬೊಕ್ಕಸದಿಂದ ವ್ಯಯವಾಗುತ್ತಿದೆ. ಇದಕ್ಕಾಗಿ 8 ಲಕ್ಷದ 24,000 ಕೋಟಿ ರೂ. ಸಾಲ ಎತ್ತುವಳಿ ಮಾಡಬೇಕಾದ ಅನಿವಾರ್ಯ ಸ್ಥಿತಿ ಎದುರಾಗಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ದೇಶದಲ್ಲಿ ಅತಿ ಹೆಚ್ಚು ಸಾಲ ಎತ್ತಿದ ಎರಡನೇ ಮುಖ್ಯಮಂತ್ರಿ ಎಂಬ ಅಪಖ್ಯಾತಿಗೆ ಒಳಗಾಗಿದ್ದಾರೆ. ಮೊದಲನೇ ಸ್ಥಾನದಲ್ಲಿ ಸಣ್ಣ ರಾಜ್ಯ ಛತ್ತೀಸ್‌ಗಢ ರಾಜ್ಯವಿದೆ. ಛತ್ತಿಸ್‌ಗಢ ಸಾಲದ ಪ್ರಮಾಣ ಶೇ.150ರಷ್ಟಿದ್ದರೆ ಕರ್ನಾಟಕ ಶೇ .125 ರಷ್ಟು ಹೊಂದಿದೆ. ಸಾಲದ ಭಾರವನ್ನು ಹೊರಲು ಸರಕಾರ ಹೆಣಗಾಡುತ್ತಿದೆ. ಗ್ಯಾರಂಟಿ ಯೋಜನೆಯಿಂದ ಪ್ರತಿಯೊಬ್ಬ ಕನ್ನಡಿಗನ ಮೇಲೆ ಸಾಲದ ಹೊರೆಹಾಕಿ ಕಾಂಗ್ರೆಸ್ ಜನತೆಗೆ ಕೆಟ್ಟ ಆಡಳಿತ ನೀಡಿರುವುದು ದುರದೃಷ್ಟಕರ. 2026–27ನೇ ಸಾಲಿನಲ್ಲಿ 4.48 ಲಕ್ಷ ಕೋಟಿ ಬಜೆಟ್ ಮಂಡನೆ ಮಾಡಿದ್ದು ಬಡಜನರ ಕೈಗೆ ಖಾಲಿ ಚೊಂಬು ನೀಡಿದಂತಾಗಿದೆ. ಸಾಲದ ಹೊರೆಯನ್ನು ತುಂಬಲು ಮುಂದಿನ ದಿನಗಳಲ್ಲಿ ಪೆಟ್ರೋಲ್, ಡೀಸೆಲ್, ಸಾರಿಗೆ, ಮುದ್ರಾಂಕ ಶುಲ್ಕ, ಮದ್ಯ ಮುಂತಾದವುಗಳಿಗೆ ತೆರಿಗೆ ಹೆಚ್ಚಿಸಿ ಜನಸಾಮಾನ್ಯರ ಕಿಸೆಗೆ ಕತ್ತರಿ ಹಾಕುವ ಬಜೆಟ್ ಇದಾಗಿದೆ ಎಂದು ದೂರಿದರು.

ಉತ್ತರ ಕರ್ನಾಟಕಕ್ಕೆ ಅದರಲ್ಲೂ ಕಲ್ಯಾಣ ಕರ್ನಾಟಕ ಭಾಗಕ್ಕೆ ಉದ್ಯೋಗ, ನೀರಾವರಿ, ಕೃಷಿಗೆ ಸಂಬಂಧಿಸಿದಂತೆ ವಿಶೇಷ ಯೋಜನೆಗಳಿಲ್ಲದೆ ಮುಖ್ಯಮಂತ್ರಿಗಳು ನಿಷ್ಪಯೋಜಕ ಬಜೆಟ್ ಮಂಡಿಸಿ ಈ ಭಾಗಕ್ಕೆ ಅನ್ಯಾಯ ಮಾಡಿದ್ದಾರೆ. ಸರಕಾರ ನೇಮಿಸಿದ ಪ್ರೊ.ಗೋವಿಂದರಾವ್ ಸಮಿತಿ ವರದಿಯಂತೆ ರಾಜ್ಯದ 59 ತಾಲೂಕುಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದ ಅತ್ಯಂತ ಹಿಂದುಳಿದ, ಅತಿ ಹಿಂದುಳಿದ ಮತ್ತು ಹಿಂದುಳಿದ ತಾಲೂಕುಗಳ ಬಗ್ಗೆ ಸ್ಪಷ್ಟವಾಗಿ ವರದಿ ಕಲಿಕೆಯಾಗಿದ್ದರೂ ಈ ಬಜೆಟ್ ನಲ್ಲಿ ಯಾವುದೇ ವಿಶೇಷ ಪ್ರಸ್ತಾಪ ಅಥವಾ ಯೋಜನೆಗಳನ್ನು ಪ್ರಕಟಿಸದೆ, ಕಲ್ಯಾಣ ಕರ್ನಾಟಕ ಭಾಗವನ್ನು ಪೂರ್ಣವಾಗಿ ನಿರ್ಲಕ್ಷಿಸಲಾಗಿದೆ. ಕೇಂದ್ರದ ಪಿಎಂ ಮಿತ್ರ ಯೋಜನೆಯಡಿಯಲ್ಲಿ ಚಾಲನೆ ನೀಡಿದ ಕಲಬುರಗಿಯ ಜವಳಿ ಪಾರ್ಕ್‌ಗೆ 390 ಕೋಟಿ ರಾಜ್ಯ ಸರ್ಕಾರ ಅನುದಾನ ಬಿಡುಗಡೆ ಮಾಡಬೇಕಾಗಿದ್ದರೂ ಈ ಬಜೆಟ್‌ನಲ್ಲಿ ಕನಿಷ್ಠ ಮೊತ್ತ ಘೋಷಣೆ ಮಾಡಿರುವುದು ಯೋಜನೆಯನ್ನು ರಾಜ್ಯ ಸರಕಾರ ನಿರ್ಲಕ್ಷಿಸಿದ್ದಕ್ಕೆ ಸಾಕ್ಷಿಯಾಗಿದೆ ಎಂದು ದೂರಿದರು. ಕಲಬುರಗಿ ವಿಮಾನ ನಿಲ್ದಾಣ ಕಾರ್ಯಾಚರಣೆ ಕಳೆದ ಅಕ್ಟೋಬರ್‌ನಿಂದ ಸ್ಥಗಿತಗೊಂಡಿದ್ದರೂ ರಾಜ್ಯ ಸರ್ಕಾರ ಈ ಬಜೆಟ್‌ನಲ್ಲಿ ಯಾವುದೇ ಪ್ರಸ್ತಾಪ ಮಾಡದಿರುವುದು ಖಂಡನೀಯ.

ಒಟ್ಟಿನಲ್ಲಿ ಈ ಬಜೆಟ್ ಜನ ಸಾಮಾನ್ಯರ ಹಾಲಿಗೆ ಅತ್ಯಂತ ದುರದೃಷ್ಟಕರ ಜನ ವಿರೋಧಿ ಬಜೆಟ್ ಎಂದು ಜಾಧವ್ ಹೇಳಿದರು.

ಎಲ್‌ಪಿಜಿ ಬೆಲೆ ಏರಿಕೆ ವಿರೋಧಿಸಿ ಬೆಂಗಳೂರಿನಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮಂಗಳವಾರ ಪ್ರತಿಭಟನೆ ನಡೆಸಿದರು.

ಅಂಕೋಲಾದ ಸ್ವಾತಂತ್ರ್ಯ ಚಳವಳಿ ಮಹತ್ವವಾದದ್ದು: ಹರ್ಷಿಕಾ ಪೂಣಚ್ಚ

ಅಂಕೋಲಾ, ಮಾ.10– : ಕರ್ನಾಟಕದ ಬಾರ್ಡೋಲಿ ಎನಿಸಿಕೊಂಡಿರುವ ಅಂಕೋಲಾಕ್ಕೆ ತನ್ನದೇ ಆದ ಸ್ಥಾನಮಾನವಿದೆ. ಸ್ವಾತಂತ್ರ್ಯ ಹೋರಾಟ ದಲ್ಲಿ ಅಂಕೋಲಿಗರ ಪಾತ್ರ ಮಹತ್ವವಾದದ್ದು. ಇಲ್ಲಿ ಹಲವು ರೀತಿಯ ಚಳುವಳಿಗಳು ನಡೆದಿದ್ದು ಬೊಮ್ಮಯ್ಯ ಗಾಂವಕರ ಅವರ ಪಾತ್ರವು ಮೌಲ್ಯಯುತವಾದದ್ದು. ಇಂತವುಗಳನ್ನು ಮತ್ತೆ ಮತ್ತೆ ಮೆಲಕು ಹಾಕುವ ಉದ್ದೇಶದಿಂದ ಗಾಂವಕರ ಮೆಮೊರಿಯಲ್ ಫೌಂಡೇಶನ್‌ನವರು ಕಾರ್ಯಕ್ರಮ ಹಮ್ಮಿಕೊಂಡಿರುವುದು ಶ್ಲಾಘನೀಯವಾದದ್ದು ಎಂದು ಚಿತ್ರನಟಿ ಹರ್ಷಿಕಾ ಪೂಣಚ್ಚ ಹೇಳಿದರು.

ಪಟ್ಟಣದ ಸತ್ಯಾಗ್ರಹ ಸ್ಮಾರಕ ಸಭಾಭವನದ ಸಾಧನಾ ವೇದಿಕೆಯಲ್ಲಿ ಗಾಂವಕರ ಮೆಮೊರಿಯಲ್ ಫೌಂಡೇಶನ್ ಬಾಸಗೋಡ ಇವರು ಹಮ್ಮಿಕೊಂಡಿದ್ದ ಉಪನ್ಯಾಸ, ಯುವ ಪ್ರತಿಭಾ ಪುರಸ್ಕಾರ ಮತ್ತು ಸಾಂಸ್ಕೃತಿಕ ವೈಭವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಬಹುಮುಖಿ ವ್ಯಕ್ತಿತ್ವದ ಬೊಮ್ಮಯ್ಯ ನಾಯಕ ಅವರ ಪರಿಷ್ಕೃತ ಕೃತಿ ಲೋಕಾರ್ಪಣೆಗೊಂಡಿರುವುದು ಕೂಡ ಹೆಮ್ಮೆಯ ಸಂಗತಿ ಎಂದರು.

ಹಿರಿಯ ಪತ್ರಕರ್ತ ಗಂಗಾಧರ ಹಿರೇಗುತ್ತಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಗಾಂವಕರ ಮೆಮೊರಿಯಲ್ ಫೌಂಡೇಶನ್ ಅಧ್ಯಕ್ಷ ದೇವಾನಂದ ಗಾಂವಕರ ಪ್ರಾಸ್ತಾವಿಕವಾಗಿ ಮಾತನಾಡಿದರು. ಚಂದ್ರಶೇಖರ ಪಿ. ನಾಯಕ ಚರಿತ್ರೆಯಲ್ಲಿ ಅಮರಳಾದ ವಾಸರೆಯ ಮಾನುದೇವಿ ನಾಯಕ ಕುರಿತು ವಿವರಿಸಿದರು. ಕವಯಿತ್ರಿ ಅಕ್ಷತಾ ಕೃಷ್ಣಮೂರ್ತಿ ಕೃತಿ ಪರಿಚರಿಸಿದರು. ಮೀನಾಕ್ಷಿ ಪಾಟೀಲ, ದೀಪ್ತಿ ಅರ್ಗೇಕರ ಗಾಯನ ಪ್ರಸ್ತುತ ಪಡಿಸಿದರು. ರಾಜಶ್ರೀ ನಾಯಕ ಪರಿಚಯಿಸಿದರು. ಶಿಲ್ಪಾ ನಾಯ್ಕ ನಿರೂಪಿಸಿದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಲವರನ್ನು ಸನ್ಮಾನಿಸಿ ಗೌರವಿಸಿದರು.

ಬ್ಯಾಡಗಿ ಮೆಣಸಿನಕಾಯಿ ವರ್ತಕರಿಗೆ ಖಾರವಾದ ಮಧ್ಯಪ್ರಾಚ್ಯ ಯುದ್ಧ

ಹಾವೇರಿ, ಮಾ.10: ಮಧ್ಯಪ್ರಾಚ್ಯ ಬಿಕ್ಕಟ್ಟು ದಿನದಿಂದ ದಿನಕ್ಕೆ ಅಧಿಕವಾಗುತ್ತಿದೆ. ಇದರ ಪರಿಣಾಮ ಜಿಲ್ಲೆಯ ವಿಶ್ವಪ್ರಸಿದ್ಧ ಬ್ಯಾಡಗಿ ಮೆಣಸಿನಕಾಯಿ ಮಾರುಕಟ್ಟೆ ಮೇಲೂ ಬೀರಿದೆ. ಕೆಲವು ಮುಂಬೈ ಮತ್ತು ಚೆನ್ನೈ ಬಂದರಿನಲ್ಲಿ ನಿಂತಿವೆ. ಪರಿಣಾಮ ನೂರಾರು ಕೋಟಿ ರೂಪಾಯಿ ಮೌಲ್ಯದ ಮೆಣಸಿಕಾಯಿ ಕಂಟೇನರ್‌ಗಳಲ್ಲಿಯೇ ಉಳಿದಿದೆ. ಇತ್ತ ಇರಾನ್‌ನಿಂದ ಬ್ಯಾಡಗಿ ವರ್ತಕರಿಗೆ ಬರಬೇಕಾಗಿದ್ದ ಕೋಟ್ಯಂತರ ರೂಪಾಯಿ ಹಣವೂ ಸಂದಾಯವಾಗಿಲ್ಲ. ಇದರಿಂದಾಗಿ ಬ್ಯಾಡಗಿ ಮೆಣಸಿನಕಾಯಿ ವರ್ತಕರು ಸಂಕಷ್ಟದಲ್ಲಿ ಸಿಲುಕಿದ್ದಾರೆ ಎನ್ನುತ್ತಾರೆ ವರ್ತಕ ಎಸ್. ಆರ್. ಪಾಟೀಲ್.

ಗಲ್ಫ್ ರಾಷ್ಟ್ರಗಳಿಗೆ ವಿಶ್ವ ಪ್ರಸಿದ್ಧ ಬ್ಯಾಡಗಿ ಮೆಣಸಿನಕಾಯಿ ರಫ್ತು ಸಂಪೂರ್ಣವಾಗಿ ನಿಂತು ಹೋಗಿದೆ. ಇತ್ತ ಬೇರೆ ದೇಶಗಳಿಗೆ ಮೆಣಸಿನಕಾಯಿ ರಫ್ತು ಬಾಡಿಗೆ ಕೂಡಾ ಹೆಚ್ಚಳವಾಗಿದೆ.

ಮಸಾಲೆ ಪದಾರ್ಥಗಳ ತಯಾರಿಕೆ, ಸೌಂದರ್ಯವರ್ಧಕ ತಯಾರಿಕೆಗೆ ಉಪಯೋಗಿಸುವ ಮೆಣಸಿನಕಾಯಿ, ಮಲೇಷಿಯಾ, ಇಂಡೋನೇಷ್ಯಾ, ಬಾಲಿ, ಥಾಯ್ಲೆಂಡ್, ಸಿಂಗಾಪೂರ್ ದೇಶಗಳಿಗೆ ರಫ್ತಾಗುತ್ತಿದೆ. ಆದರೆ, ಇರಾನ್, ಇಸ್ರೇಲ್ ಹಾಗೂ ಅಮೆರಿಕಗೆ ಮೆಣಸಿನಕಾಯಿ ರಫ್ತು ಮಾಡುವ ಕಂಟೇನರ್‌ಗಳ ಬಾಡಿಗೆ ಏರಿಕೆಯಾಗಿದೆ.

ಹೀಗೆಯೇ ಮುಂದುವರೆದರೆ ರೈತರು ತರುವ ಮೆಣಸಿನಕಾಯಿ ಬೆಲೆ ಕಡಿಮೆ ಆಗುತ್ತೆ ಎನ್ನುತ್ತಾರೆ ವರ್ತಕರು.

ರಾಜ್ಯ ಬಜೆಟ್‌ನಲ್ಲಿ ಬ್ರಾಹ್ಮಣ ಸಮುದಾಯದ ನಿರ್ಲಕ್ಷ್ಯ: ವೆಂಕಟೇಶ

ಬೀದರ್, ಮಾ.10: ಅಲ್ಪ ಸಂಖ್ಯಾತರ ಓಲೈಕೆ ಬಹುಸಂಖ್ಯಾತರಿಗೆ ಟಾಂಗ್, ಬ್ರಾಹ್ಮಣ ಸಮುದಾಯವನ್ನು ರಾಜ್ಯದ ಬಜೆಟ್ ನಿರ್ಲಕ್ಷಿಸಿದೆ ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ರಾಜಕೀಯ ವೇದಿಕೆ ಮತ್ತು ರಾಜ್ಯ ಸಂಘಟನಾ ಮಾಜಿ ಕಾರ್ಯದರ್ಶಿ ಹಾಗೂ ಮಾಜಿ ಜಿಲ್ಲಾ ಅಧ್ಯಕ್ಷ ವೆಂಕಟೇಶ್ ಮೋರಖಂಡಿಕರ್ ಅವರು ಆರೋಪಿಸಿದ್ದಾರೆ.

ಸಮಾನತೆ, ಸರ್ವ ಜನಾಂಗದ ಶಾಂತಿಯ ತೋಟ ಎಂಬುವುದೇ ನಮ್ಮ ಸರ್ಕಾರದ ಧ್ಯೇಯ ಹಾಗೂ ಸಿದ್ಧಾಂತ ಎಂದು ಹೇಳುವ ಸಿಎಂ ಸಿದ್ದರಾಮಯ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ಒಂದು ನಯಾ ಪೈಸ ಅನುದಾನ ಕೊಡದೇ ತಾರತಮ್ಯ ನೀತಿ ತೋರಿಸುತ್ತಿರುವುದು ಅವರ ನುಡಿ ಹಾಗೂ ನಡೆಯಲ್ಲಿ ದ್ವಂದ್ವ ನಿಲುವು ಇರುವುದು ಬಹಿರಂಗವಾಗಿದೆ ಎಂದು ಅವರು ಹೇಳಿಕೆಯಲ್ಲಿ ದೂಯಿರಿದ್ದಾರೆ.

ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರ ಸರ್ಕಾರದಲ್ಲಿ ರಚನೆಗೊಂಡ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಬ್ರಾಹ್ಮಣರ ಅಭಿವೃದ್ಧಿಗಾಗಿ 25 ಕೋಟಿ ರೂ.ಗಳು ಮಂಡಳಿಯ ಯೋಜನೆಗಳಿಗಾಗಿ ನೀಡಿರುತ್ತಾರೆ. ತದನಂತರ ಕಾಲದಲ್ಲಿ ಬಂದಿರುವ ಯಾವುದೇ ಸರ್ಕಾರ ಇಲ್ಲಿಯ ತನಕ ಅಭಿವೃದ್ಧಿಯ ಮಂಡಳಿಗೆ ಬಜೆಟ್‌ನಲ್ಲಿ ಅನುದಾನ ನೀಡಿದೆ ಇರುವುದು ಬ್ರಾಹ್ಮಣ ಸಮುದಾಯವನ್ನು ಬೆಕೆಂದಲೇ ನಿರ್ಲಕ್ಷಿಸಿದ್ದಾರೆ, ಹಿಂದಿನ ಸಾಲಿನ ಅಧ್ಯಕ್ಷರಾದ ಸಚ್ಚಿದಾನಂದ ಮೂರ್ತಿ ಅವರು 10 ಕೋಟಿ ರೂಗಳ ಅನುದಾನವನ್ನು ಪ್ರತಿವರ್ಷ ಕೊಡುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದರು. ವಿಪರ್ಯಾಸವೆಂದರೆ ಆ 10 ಕೋಟಿ ರೂ.ಗಳು ಸಿಬ್ಬಂದಿಯ ವೇತನ ಜಾಗದ ಬಾಡಿಗೆ ಕೊಡುವುದಕ್ಕೆ ಸರಿಯಾಗುತ್ತಿಲ್ಲ. ಇದರಿಂದ ವಿಪ್ರ ಸಮುದಾಯದ ಅಭಿವೃದ್ಧಿ ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ.

ತಿಂಡಿ ತಿನಿಸು ಮಾರಾಟ ಮಾಡುವ ವಾಹನ ನೀಡುವ ಯೋಜನೆ ಎಲ್ಲಾ ನಿಗಮಕ್ಕೂ ನೀಡಲು ಸರ್ಕಾರ ಇತ್ತೀಚಿಗೆ ಜಾಹೀರಾತು ಪ್ರಕಟಿಸಿತ್ತು, ಆದಯಿರೆ ಅದರಲ್ಲೂ ಸಹ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ಒಂದೇ ಒಂದು ವಾಹನವು ನೀಡುವ ಕೆಲಸ ಸರ್ಕಾರದಿಂದ ಆಗಿಲ್ಲ, 2024–25 ಸಾಲಿನ ವಿದ್ಯಾರ್ಥಿಗಳಿಗೆ ನೀಡುವ ಸಹಾಯಧನ ಇನ್ನೂ ಸಹ ಯಾವುದೇ ವಿದ್ಯಾರ್ಥಿಗಳಿಗೆ ಸಿಕ್ಕಿಲ್ಲ, ಸ್ವಾವಲಂಬಿ ಜೀವನ ನಡೆಸಲು ಸಾಲ ಸೌಲಭ್ಯ ಯೋಜನೆಗೆ ಅರ್ಜಿ ಕರೆಯಲಾಗಿತ್ತು, ಸಾವಿರಾರು ಜನ ಫಲಾನುಭವಿಗಳು ಮಂಜೂರಾತಿ ಪತ್ರ ಸಿಗುವ ನಿರೀಕ್ಷೆಯಲ್ಲಿ ಕುಳಿತಿದ್ದಾರೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರಾಜ್ಯದಲ್ಲಿ 21 ವಿಧಾನಸಭಾ ಕ್ಷೇತ್ರದಲ್ಲಿ ನಿರ್ಣಾಯಕ ಪಾತ್ರ ಮತದಾರರಾಗಿರುವ, 35ರಿಂದ 40ಲಕ್ಷ ಜನಸಂಖ್ಯೆ ಇರುವ ಬ್ರಾಹ್ಮಣ ಸಮಾಜವನ್ನು ಕಡೆಗೆನಿಸುವ ಕೆಲಸ ಕಾಂಗ್ರೆಸ್ ಸರ್ಕಾರ ಮಾಡುತ್ತಿದ್ದು, ಈ ಕೂಡಲೇ ಕರ್ನಾಟಕ ಸರ್ಕಾರ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಯೋಜನೆಗಳಿಗೆ ಕನಿಷ್ಠ 120 ಕೋಟಿ ರೂಗಳನ್ನು ಅನುದಾನವಾಗಿ ನೀಡಬೇಕಾಗಿ ಕರ್ನಾಟಕದ ಎಲ್ಲಾ ಬ್ರಾಹ್ಮಣ ಸಮುದಾಯದ ಪರವಾಗಿ ಅವರು ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

ಮಾನಸಿಕ ಆರೋಗ್ಯಕ್ಕಾಗಿ ಟೆಲಿಮನಸ್ ಸಹಾಯವಾಣಿ 14416 ಸಂಪರ್ಕಿಸಿ: ಡಾ.ಯಲ್ಲಾ ರಮೇಶ್‌ಬಾಬು

ಬಳ್ಳಾರಿ, ಮಾ.10. ಮಾನಸಿಕ ಆರೋಗ್ಯ ಸಮಸ್ಯೆ, ಒತ್ತಡ ಇದ್ದಲ್ಲಿ ನೆರವು ಪಡೆಯಲು ಟೆಲಿಮನಸ್ ಸಹಾಯವಾಣಿ 14416ಗೆ ಕರೆಮಾಡಿ ಉಚಿತ ಆಪ್ತಸಮಾಲೋಚನೆ ಪಡೆಯಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಪ್ರತಿಯೊಬ್ಬ ವ್ಯಕ್ತಿಗೂ ಜೀವನದ ಯಾವುದಾದರೂ ಸನ್ನಿವೇಶಗಳಲ್ಲಿ ಮಾನಸಿಕ ಆರೋಗ್ಯ ಸಮಸ್ಯೆ ಕಂಡುಬರುವ ಸಾಧ್ಯತೆ ಇರುತ್ತದೆ. ಅಂತಹ ಸಂದರ್ಭದಲ್ಲಿ ಇನ್ನೊಬ್ಬರೊಂದಿಗೆ ವಿಷಯ ಹಂಚಿಕೊಳ್ಳುವ ಅಥವಾ ಸಮಸ್ಯೆಯ ತೀವ್ರತೆ ಹೆಚ್ಚಾದಾಗ ಮಾನಸಿಕ ತಜ್ಞರೊಂದಿಗೆ ತಪ್ಪದೇ ಸಮಾಲೋಚಿಸಬೇಕು ಎಂದು ತಿಳಿಸಿದರು.

ಕರೆ ಮಾಡಿದವರ ವಿವರ ಗೌಪ್ಯವಾಗಿ ಇಡಲಾಗುವುದು. ಧ್ವನಿಮುದ್ರಣ ಆಗುವುದಿಲ್ಲ. ಪರೀಕ್ಷಾ ಒತ್ತಡಕೊಳ್ಳಗಾದವರು, ಕೌಟುಂಬಿಕ ಸಮಸ್ಯೆಗೊಳಗಾದವರು, ಆತ್ಮಹತ್ಯೆ ಆಲೋಚನೆ ಮಾಡುವರು, ಮಾದಕ ವಸ್ತು ವ್ಯಸನಿಗಳು, ಸಂಬಂಧಗಳ ಸಮಸ್ಯೆಯಲ್ಲಿ ಸಿಲುಕಿರುವವರು, ಜ್ಞಾಪಕ ಶಕ್ತಿ ತೊಂದರೆ ಉಳ್ಳವರು, ಆರ್ಥಿಕ ಒತ್ತಡದಲ್ಲಿ ಇರುವವರು ಅಥವಾ ಇತರೆ ಯಾವುದೇ ಮಾನಸಿಕ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು ಇದ್ದಲ್ಲಿ ಈ ಸಹಾಯವಾಣಿ ಮೂಲಕ

ನೆರವು ಪಡೆಯಬಹುದು. ಜಿಲ್ಲಾ ಮಾನಸಿಕ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ವಿರೇಂದ್ರ ಕುಮಾರ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಮಾನಸಿಕ ಆರೋಗ್ಯ ಸೇವೆಗಳನ್ನು ನೀಡಲು ಜಿಲ್ಲಾ ಮಟ್ಟದಿಂದ ಮನೋರೋಗ ತಜ್ಞ ಡಾ.ಕಿಶೋರ್ ಅವರ ನೇತೃತ್ವದಲ್ಲಿ ಪ್ರತಿ ಮೊದಲ ಮಂಗಳವಾರ ಸಿರುಗುಪ್ಪ, ಎರಡನೇ ಮಂಗಳವಾರ ಸಂಡೂರು, ಮೂರನೇ ಮಂಗಳವಾರ ಕಂಪ್ಲಿ, ನಾಲ್ಕನೇ ಮಂಗಳವಾರ ಕುರುಗೋಡು ಹಾಗೂ ಪ್ರತಿ ತಿಂಗಳು 16ನೇ ತಾರೀಖು ಮೋಕ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮಾನಸಿಕ ಆರೋಗ್ಯ ಸೇವೆ ನೀಡಲಾಗುತ್ತಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕೊಲ್ಲಿ ಯುದ್ಧದ ಪರಿಣಾಮ, ಗಗನಕ್ಕೇರಿದ ವಾಣಿಜ್ಯ ಬಳಕೆಯ ಸಿಲಿಂಡರ್ ದರ

ಬೀದರ್, ಮಾ. 10: ಮಧ್ಯ ಪ್ರಾಚ್ಯದಲ್ಲಿ ಯುದ್ಧ ನಡೆಯುತ್ತಿರುವುದರಿಂದ ಅದರ ಬಿಸಿ ಅಡುಗೆ ಅನಿಲ ಸಿಲಿಂಡರ್‌ಗೆ ತಟ್ಟಿದೆ. ಅಮೆರಿಕ ಹಾಗೂ ಇಸ್ರೇಲ್ ಒಟ್ಟುಗೂಡಿ ಇರಾನ್ ಮೇಲೆ ದಾಳಿ ನಡೆಸುತ್ತಿದ್ದು, ಇದಕ್ಕೆ ಇರಾನ್ ಪ್ರತಿದಾಳಿ ನಡೆಸುತ್ತಿರುವುದರಿಂದ ಕೊಲ್ಲಿ ರಾಷ್ಟ್ರಗಳಿಂದ ಇಂಧನ ಸಾಗಾಟದ ಸಮಸ್ಯೆ ಉದ್ಭವಿಸಿದೆ. ಅನಿಲ ಸಿಲಿಂಡರ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದೆ. ಕಳೆದ ಒಂದು ವಾರದಿಂದ ಜಿಲ್ಲೆಗೆ ಅನಿಲ ಪೂರೈಕೆಯ ಮೇಲೂ ಪರಿಣಾಮ ಬೀರಿದೆ. ಇದರ ನೇರ ಬಿಸಿ ವಾಣಿಜ್ಯ ಬಳಕೆಯ ಅನಿಲ ಸಿಲಿಂಡರ್‌ಗಳಿಗೆ ತಟ್ಟಿದೆ.

ಆದ್ಯತೆಯ ಮೇರೆಗೆ ಗೃಹ ಬಳಕೆಯ ಸಿಲಿಂಡರ್ ಪೂರೈಕೆಯಲ್ಲಿ ಯಾವುದೇ ರೀತಿಯ ವ್ಯತ್ಯಯ ಉಂಟಾಗದಂತೆ ನೋಡಿಕೊಳ್ಳಬೇಕೆಂದು ಕೇಂದ್ರ ಸರ್ಕಾರವು ಸಿಲಿಂಡರ್ ಪೂರೈಕೆದಾರರಿಗೆ ಸೂಚನೆ ನೀಡಿದೆ ಎಂದು ತಿಳಿದು ಬಂದಿದೆ.

ಹೀಗಾಗಿಯೇ ಕಳೆದ ಒಂದು ವಾರದಿಂದ ವಾಣಿಜ್ಯ ಉದ್ದೇಶದ ಸಿಲಿಂಡರ್ ಅನ್ನು ಹೋಟೆಲ್, ಮಳಿಗ

ಉಕ್ರೇನ್, ಪಶ್ಚಿಮ ಏಷ್ಯಾ ಉದ್ವಿಗ್ನತೆ: ಟ್ರಂಪ್, ಪುಟಿನ್ ದೂರವಾಣಿ ಮೂಲಕ ಚರ್ಚೆ

ನವದೆಹಲಿ, ಮಾ.10: ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ "ತುಂಬಾ ಒಳ್ಳೆಯ ಮಾತುಕತೆ" ನಡೆಸಿರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ, ಈ ಸಂದರ್ಭದಲ್ಲಿ ಇಬ್ಬರು ನಾಯಕರು ನಡೆಯುತ್ತಿರುವ ಉಕ್ರೇನ್ ಸಂಘರ್ಷ ಮತ್ತು ಮಧ್ಯಪ್ರಾಚ್ಯದಲ್ಲಿ ಉದ್ವಿಗ್ನತೆಗಳ ಕುರಿತು ಚರ್ಚಿಸಿದರು.

ಸೋಮವಾರ ಮಾತನಾಡಿದ ಟ್ರಂಪ್, ರಷ್ಯಾ ಮತ್ತು ಉಕ್ರೇನ್ ನಡುವಿನ ಯುದ್ಧ ಸೇರಿದಂತೆ ಹಲವು ಜಾಗತಿಕ ವಿಷಯಗಳ ಕುರಿತು ಮಾತುಕತೆ ನಡೆಸಲಾಗಿದೆ ಎಂದು ಹೇಳಿದರು.

"ಅಧ್ಯಕ್ಷ ಪುಟಿನ್ ಅವರೊಂದಿಗೆ ನನಗೆ ತುಂಬಾ ಒಳ್ಳೆಯ ಮಾತುಕತೆ ನಡೆದಿದೆ... ನಾವು ಉಕ್ರೇನ್ ಬಗ್ಗೆ ಮಾತನಾಡುತ್ತಿದ್ದೆವು, ಅದು ಎಂದಿಗೂ ಮುಗಿಯದ ಹೋರಾಟ" ಎಂದು ಟ್ರಂಪ್ ಹೇಳಿದರು. "ನಾವು ಆಗ ಸ್ಪಷ್ಟವಾಗಿ ಮಧ್ಯಪ್ರಾಚ್ಯದ ಬಗ್ಗೆ ಮಾತನಾಡಿದ್ದೇವೆ ಮತ್ತು ಅವರು ಸಹಾಯಕವಾಗಿರಲು ಬಯಸುತ್ತಾರೆ. ಉಕ್ರೇನ್-ರಷ್ಯಾ ಯುದ್ಧವನ್ನು ಕೊನೆಗೊಳಿಸುವ ಮೂಲಕ ನೀವು ಹೆಚ್ಚು ಸಹಾಯಕವಾಗಬಹುದು ಎಂದು ನಾನು ಹೇಳಿದೆ. ಅದು ಹೆಚ್ಚು ಸಹಾಯಕವಾಗುತ್ತದೆ. ಆದರೆ ನಾವು ಬಹಳ ಒಳ್ಳೆಯ ಮಾತುಕತೆ ನಡೆಸಿದ್ದೇವೆ ಮತ್ತು ಅವರು ತುಂಬಾ ರಚನಾತ್ಮಕವಾಗಿರಲು ಬಯಸುತ್ತಾರೆ" ಎಂದು ಅವರು ಹೇಳಿದರು.

ಈ ಹೇಳಿಕೆಗಳನ್ನು ಶ್ವೇತಭವನದ ಅಧಿಕೃತ ಯೂಟ್ಯೂಬ್ ಚಾನೆಲ್ನಲ್ಲಿ ಪ್ರಕಟಿಸಲಾಯಿತು.

ಹಿಂದಿನ ದಿನ, ಪುಟಿನ್ ಮಾಸ್ಕೋದಲ್ಲಿ ಜಾಗತಿಕ ತೈಲ ಮತ್ತು ಅನಿಲ ಮಾರುಕಟ್ಟೆಯ ಕುರಿತು ಸಭೆಯ ಅಧ್ಯಕ್ಷತೆ ವಹಿಸಿದ್ದರು, ಅಲ್ಲಿ ಪಶ್ಚಿಮ ಏಷ್ಯಾವನ್ನು ಅಸ್ಥಿರಗೊಳಿಸುವ ಪ್ರಯತ್ನಗಳು ಜಾಗತಿಕ ಇಂಧನ ವಲಯದ ಮೇಲೆ ತೀವ್ರ ಪರಿಣಾಮ ಬೀರಬಹುದು ಎಂದು ಎಚ್ಚರಿಸಿದರು.

ರಷ್ಯಾದ ಸ್ಪುಟ್ನಿಕ್ ಸುದ್ದಿ ಸಂಸ್ಥೆಯ ಪ್ರಕಾರ, ಇಂತಹ ಬೆಳವಣಿಗೆಗಳು ತೈಲ ಮತ್ತು ಅನಿಲ

ಬೆಲೆಗಳನ್ನು ಹೆಚ್ಚಿಸಬಹುದು ಮತ್ತು ಜಾಗತಿಕ ಪೂರೈಕೆಯನ್ನು ಅಡ್ಡಿಪಡಿಸಬಹುದು ಎಂದು ಪುಟಿನ್ ಹೇಳಿದ್ದಾರೆ.

"ಮಧ್ಯಪ್ರಾಚ್ಯದಲ್ಲಿ ಪರಿಸ್ಥಿತಿಯನ್ನು ಅಸ್ಥಿರಗೊಳಿಸುವ ಪ್ರಯತ್ನಗಳು ಅನಿವಾರ್ಯವಾಗಿ ಜಾಗತಿಕ ಇಂಧನ ಮತ್ತು ಇಂಧನ ವಲಯವನ್ನು ಅಪಾಯಕ್ಕೆ ಸಿಲುಕಿಸುತ್ತದೆ, ತೈಲ ಮತ್ತು ಅನಿಲ ಬೆಲೆಗಳನ್ನು ಹೆಚ್ಚಿಸುತ್ತದೆ, ವಿಶ್ವಾದ್ಯಂತ ಈ ಸಂಪನ್ಮೂಲಗಳ ಪೂರೈಕೆಯನ್ನು ನಿರ್ಬಂಧಿಸುತ್ತದೆ ಮತ್ತು ನಿಸ್ಸಂದೇಹವಾಗಿ ದೀರ್ಘಕಾಲೀನ ಹೂಡಿಕೆ ಯೋಜನೆಗಳನ್ನು ಅಡ್ಡಿಪಡಿಸುತ್ತದೆ" ಎಂದು ರಷ್ಯಾದ ನಾಯಕ ಹೇಳಿದರು.

2025 ರಲ್ಲಿ ವಿಶ್ವದ ಸಮುದ್ರ ಮಾರ್ಗದ ತೈಲ ರಫ್ತಿನ ಸುಮಾರು ಮೂರನೇ ಒಂದು ಭಾಗವು ಹಾರ್ಮುಜ್ ಜಲಸಂಧಿಯ ಮೂಲಕ ಹಾದುಹೋಯಿತು, ಇದು ಈ ಪ್ರದೇಶವನ್ನು ಜಾಗತಿಕ ಇಂಧನ ಹರಿವಿಗೆ ನಿರ್ಣಾಯಕವಾಗಿಸುತ್ತದೆ ಎಂದು ಅವರು ಗಮನಿಸಿದರು.

ಅಸ್ಥಿರತೆ ಹದಗೆಟ್ಟರೆ ಪರ್ಷಿಯನ್ ಕೊಲ್ಲಿಯಲ್ಲಿ ತೈಲ ಉತ್ಪಾದನೆಯು ಒಂದು ತಿಂಗಳೊಳಗೆ ಸಂಪೂರ್ಣವಾಗಿ ಸ್ಥಗಿತಗೊಳ್ಳಬಹುದು ಎಂದು ಪುಟಿನ್ ಎಚ್ಚರಿಸಿದರು, ಉತ್ಪಾದನೆಯು ಈಗಾಗಲೇ ಕುಸಿಯಲು ಪ್ರಾರಂಭಿಸಿದೆ ಎಂದು ಹೇಳಿದರು.

ಕಳೆದ ವಾರದಲ್ಲಿ ಜಾಗತಿಕ ತೈಲ ಬೆಲೆಗಳು ಶೇಕಡಾ 30 ಕ್ಕಿಂತ ಹೆಚ್ಚು ಏರಿಕೆಯಾಗಿವೆ, ಬೆಲೆಗಳು ಮೊದಲು ಬ್ಯಾರಲ್‌ಗೆ 119 ಡಾಲರ್ ತಲುಪುವ ಮೊದಲು $107 ಕ್ಕೆ ಇಳಿಯುತ್ತಿದ್ದವು, ಆದರೂ ಚಂಚಲತೆ ಹೆಚ್ಚಿತ್ತು ಎಂದು ಅವರು ಹೇಳಿದರು.

ಜಾಗತಿಕ ಅನಿಲ ಬೆಲೆಗಳು ತೈಲಕ್ಕಿಂತ ವೇಗವಾಗಿ ಏರುತ್ತಿವೆ ಎಂದು ಅವರು ಹೇಳಿದರು.

ಏಷ್ಯಾ-ಪೆಸಿಫಿಕ್ ಪ್ರದೇಶ ಮತ್ತು ಪೂರ್ವ ಯುರೋಪಿಯನ್ ರಾಜ್ಯಗಳಾದ ಸ್ಲೋವಾಕಿಯಾ ಮತ್ತು ಹಂಗೇರಿಯಲ್ಲಿನ 'ವಿಶ್ವಾಸಾರ್ಹ ಪಾಲುದಾರರಿಗೆ' ರಷ್ಯಾ ಇಂಧನವನ್ನು ಪೂರೈಸುತ್ತಲೇ ಇರುತ್ತದೆ ಎಂದು ಪುಟಿನ್ ಹೇಳಿದರು. ಸ್ಥಿರ ಪರಿಸ್ಥಿತಿಗಳನ್ನು ಖಾತರಿಪಡಿಸಲು ಸಿದ್ಧರಿದ್ದರೆ, ತೈಲ ಮತ್ತು ಅನಿಲ ಪೂರೈಕೆಯಲ್ಲಿ ಯುರೋಪಿಯನ್ ರಾಷ್ಟ್ರಗಳೊಂದಿಗೆ ರಷ್ಯಾ ಸಹಕರಿಸುತ್ತದೆ ಎಂದು ಅವರು ಹೇಳಿದರು.

ಯುದ್ಧದ ಲಾಭ ಪಡೆಯುವುದಕ್ಕೆ ಮುಂದಾಗಿರುವ ರಷ್ಯಾದಿಂದ ರಿಯಾಯಿತಿ ದರದ ತೈಲ ಮಾರಾಟ ಸ್ಥಗಿತ

ಸಂಕಷ್ಟದಲ್ಲಿ ಕೈಹಿಡಿದಿದ್ದ ಭಾರತಕ್ಕೆ ಕೈಕೊಟ್ಟ ರಷ್ಯಾ

ಮಾಸ್ಕೋ, ಮಾ.10: ಇರಾನ್- ಇಸ್ರೇಲ್ ನಡುವಿನ ಯುದ್ಧ ಜಿಯೋಪೊಲಿಟಿಕ್ಸ್ ನಲ್ಲಿ ಹಲವು ಪಲ್ಲಟಗಳಿಗೆ ಕಾರಣವಾಗಿದೆ. ಈ ವರೆಗೂ ಉಕ್ರೇನ್ ವಿರುದ್ಧದ ಯುದ್ಧದಿಂದ ಪಶ್ಚಿಮದ ಜಗತ್ತಿನ ಶತ್ರುವಾಗಿದ್ದ ಪುಟಿನ್ ಈಗ ಏಕಾ ಏಕಿ ಆಪದ್ಬಾಂಧವನಂತೆ ಕಾಣತೊಡಗಿದ್ದಾರೆ. ಇದರ ಪರಿಣಾಮ ಕಚ್ಚಾ ತೈಲ ಮಾರುಕಟ್ಟೆಯಲ್ಲಿ ರಷ್ಯಾ ಪ್ರಾಬಲ್ಯ ಸಾಧಿಸಿ ಲಾಭ ಮಾಡಿಕೊಳ್ಳಲು ಮುಂದಾಗಿದೆ.

ಯುದ್ಧದ ಲಾಭಪಡೆಯುವುದಕ್ಕೆ ಮುಂದಾಗಿರುವ ರಷ್ಯಾ ರಿಯಾಯಿತಿ ದರದಲ್ಲಿ ತೈಲ ಮಾರಾಟವನ್ನು ಸ್ಥಗಿತಗೊಳಿಸಿದೆ. ಈ ವರೆಗೂ ಭಾರತಕ್ಕೆ ರಿಯಾಯಿತಿ ದರದಲ್ಲಿ ತೈಲ ಮಾರಾಟ ಮಾಡುತ್ತಿದ್ದ ರಷ್ಯಾ ಈಗ ರಿಯಾಯಿತಿಯನ್ನು ಸ್ಥಗಿತಗೊಳಿಸುತ್ತಿರುವುದಾಗಿ ವರದಿಯಾಗಿದೆ.

ಭಾರತ ರಷ್ಯಾದಿಂದ ರಿಯಾಯಿತಿ ದರದಲ್ಲಿ

ತೈಲ ಖರೀದಿಸುತ್ತಿದ್ದ ಹಿನ್ನೆಲೆಯಲ್ಲಿ ಉಭಯ ರಾಷ್ಟ್ರಗಳಿಗೂ ಲಾಭವಾಗುತ್ತಿತ್ತು. ಈಗ ಮಧ್ಯಪ್ರಾಚ್ಯದಲ್ಲಿನ ಸಂಘರ್ಷದಿಂದಾಗಿ ಜಾಗತಿಕ ಇಂಧನ ಮಾರುಕಟ್ಟೆಯಲ್ಲಿ ಅಸ್ಥಿರತೆ ಉಂಟಾಗಿ ತೈಲ ಬೆಲೆಗಳು 2022 ರಿಂದ ಇದೇ ಮೊದಲ ಬಾರಿಗೆ ಪ್ರತಿ ಬ್ಯಾರಲ್‌ಗೆ 100 ಡಾಲರ್ ಗೆ ತಲುಪಿದೆ.

ನೀವು ನಮಗೆ ಮಾಹಿತಿಯೇ ನೀಡದೇ ನಮ್ಮಿಂದ ತೈಲ ಖರೀದಿಯನ್ನು ಏಕಾಏಕಿ ಸ್ಥಗಿತಗೊಳಿಸಿದಿರಿ, ಈಗ ದಿಢೀರ್ ರಿಯಾಯಿತಿ ದರದಲ್ಲಿ ತೈಲ ಪೂರೈಕೆಗೆ ಕೇಳುತ್ತಿದ್ದೀರಾ ಎಂದು ಭಾರತಕ್ಕೆ ವ್ಲಾದಿಮಿರ್ ಪುಟಿನ್ ಪ್ರಶ್ನಿಸಿದ್ದಾರೆ ಎಂಬುದನ್ನು ಉಲ್ಲೇಖಿಸಿ ರಾಷ್ಟ್ರೀಯ ಮಾಧ್ಯಮವೊಂದು ವರದಿ ಪ್ರಕಟಿಸಿದೆ.

ಭಾರತದೊಂದಿಗಿನ ಮುಂದಿನ ತೈಲ ವ್ಯಾಪಾರ ಸಂಪೂರ್ಣವಾಗಿ ವಾಣಿಜ್ಯ ನೆಲೆಯಲ್ಲಿ ನಡೆಯುತ್ತದೆಯೇ ಹೊರತು ಈ ಹಿಂದಿನ ರಿಯಾಯಿತಿ ದರದಲ್ಲಿ ಅಲ್ಲ ಎಂಬ ಸ್ಪಷ್ಟ ಸಂದೇಶವನ್ನು ಪುಟಿನ್ ರಷ್ಯಾ ಅಧಿಕಾರಿಗಳಿಗೆ ಕಳಿಸಿದ್ದಾರೆ ಎಂದು ತಿಳಿದುಬಂದಿದೆ.

ಇರಾನ್ ಯುದ್ಧ ಆರಂಭವಾದಾಗಿನಿಂದ ಭಾರತಕ್ಕೆ ರಷ್ಯಾ ತೈಲವನ್ನು ಖರೀದಿಸಲು ಅಮೆರಿಕ 30 ದಿನಗಳ ಅನುಮತಿ ನೀಡಿತ್ತು. ರಷ್ಯಾದಿಂದ ತೈಲ ಖರೀದಿಸಲು ನಮಗೆ ಯಾರ ಅನುಮತಿಯೂ ಬೇಡ ಎಂದು ಭಾರತ ತೀಕ್ಷ್ಣವಾಗಿ ಪ್ರತಿಕ್ರಿಯೆ ನೀಡಿತ್ತು.

ಮೂರೂವರೆ ದಿನಗಳಲ್ಲಿ ಇರಾನ್ ನೌಕಾಪಡೆಯ 46 ಹಡಗುಗಳು ನಾಶ: ಡೊನಾಲ್ಡ್ ಟ್ರಂಪ್

ನವದೆಹಲಿ, ಮಾ.10: ಅಮೆರಿಕಾ ಮತ್ತು ಇಸ್ರೇಲ್ ನಡೆಸುತ್ತಿರುವ 'ಆಪರೇಷನ್ ಎಪಿಕ್ ಫ್ಯೂರಿ' ಕಾರ್ಯಾಚರಣೆಯಲ್ಲಿ ಇರಾನ್‌ನ ನೌಕಾಪಡೆಗೆ ಭಾರಿ ಹೊಡೆತ ಬಿದ್ದಿದೆ. ಅಮೆರಿಕನ್ ನೌಕಾಪಡೆಯು ಕೇವಲ ಮೂರುವರೆ ದಿನಗಳಲ್ಲಿ ಇರಾನ್ ನೌಕಾಪಡೆಯ 46 ಹಡಗುಗಳನ್ನು ಮುಳುಗಿಸಿದೆ ಎಂದು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ನ್ಯಾಷನಲ್ ಡೋರಲ್‌ನಲ್ಲಿ ರಿಪಬ್ಲಿಕನ್ ಸಭೆಯಲ್ಲಿ ಮಾತನಾಡಿದ ಟ್ರಂಪ್, ಇರಾನ್‌ನ ನೌಕಾಪಡೆಯು ಸಂಪೂರ್ಣವಾಗಿ ನಾಶವಾಗಿದೆ ಎಂದು ಹೇಳಿದರು. ನೌಕಾಪಡೆಯೆಲ್ಲಾ ಸಮುದ್ರದ ತಳದಲ್ಲಿ ಬಿದ್ದಿದೆ. 46 ಹಡಗುಗಳು, ನಂಬಬಹುದಾ ಎಂದು ಅವರು ಪ್ರಶ್ನಿಸಿದರು.

ಟ್ರಂಪ್ ತಮ್ಮ ಸೈನಿಕ ಅಧಿಕಾರಿಗ ಳೊಂದಿಗಿನ ಸಂಭಾಷಣೆಯನ್ನು ಹಂಚಿಕೊಂಡರು. ಇರಾನ್‌ನ ಹಡಗುಗಳು ಉತ್ತಮ ಗುಣಮಟ್ಟದವು ಮತ್ತು

ಟಾಪ್-ಆಫ್-ದಿ-ಲೈನ್ ಆಗಿವೆ ಏಕೆ ಅವುಗಳನ್ನು ಸೆರೆಹಿಡಿದು ಬಳಸಬಾರದು, ಅವುಗಳನ್ನು ನಾವು ಬಳಸಬಹುದಿತ್ತು. ಏಕೆ ಮುಳುಗಿಸಿದ್ದೀರಿ ಎಂದು ಕೇಳಿದ್ದಾಗ ಸೈನಿಕರು ಅದಕ್ಕೆ ಉತ್ತರಿಸಿ ಅವುಗಳನ್ನು

■ ನೌಕೆಗಳನ್ನು ಮುಳುಗಿಸುವುದರಲ್ಲಿ ಹೆಚ್ಚು ಮಜಾ ಇದೆ: ಅಧ್ಯಕ್ಷರ ಪ್ರಶ್ನೆಗೆ ಅಮೆರಿಕನ್ ಸೈನಿಕರ ಉತ್ತರ

ಮುಳುಗಿಸುವುದೇ ಹೆಚ್ಚು ಮೋಜು ಎಂದು ಉತ್ತರಿಸಿದ್ದಾರೆ ಎಂದು ಟ್ರಂಪ್ ತಿಳಿಸಿದರು.

ಅವರು ಮುಳುಗಿಸುವುದನ್ನೇ ಇಷ್ಟಪಡುತ್ತಾರೆ. ಅದು ಹೆಚ್ಚು ಸುರಕ್ಷಿತವೂ ಹೌದು ಎಂದು ಹೇಳುತ್ತಾರೆ. ಬಹುಶಃ ಅದು ಸರಿಯೇ ಇರಬಹುದು ಎಂದು ಟ್ರಂಪ್ ಹಾಸ್ಯಾಸ್ಪದವಾಗಿ ಹೇಳಿ ಸಭೆಯಲ್ಲಿ ನಗುವನ್ನು ಉಂಟುಮಾಡಿದರು. ಈ ಕಾರ್ಯಾಚರಣೆಯಲ್ಲಿ ಇರಾನ್‌ನ ಡ್ರೋನ್ ಮತ್ತು ಕ್ಷಿಪಣಿ ಸಾಮರ್ಥ್ಯವೂ ಸಂಪೂರ್ಣವಾಗಿ ನಾಶವಾಗುತ್ತಿದೆ ಎಂದು ಟ್ರಂಪ್ ಹೇಳಿದರು. ಇರಾನ್ ಸೇನೆಗೆ ಸಂಪೂರ್ಣವಾಗಿ ಸೋಲಾಗುತ್ತಿದೆ ಎಂದರು.

ಸಿಂಧೂರ ಕಾರ್ಯಾಚರಣೆಯಲ್ಲಿ ಧ್ವಂಸಗೊಂಡಿದ್ದ ವಾಯುನೆಲೆ ಪುನರ್ ಸ್ಥಾಪಿಸುವ ಪಾಕ್ ವಾಯಪಡೆ ಯತ್ನ ವಿಫಲ

ದುರಸ್ತಿಯಾಗದ ಪಾಕಿಸ್ತಾನದ ಮುರಿಯದ್ ವಾಯುನೆಲೆ

ಇಸ್ಲಾಮಾಬಾದ್, ಮಾ.10: ಭಾರತದ ಆಪರೇಷನ್ ಸಿಂಧೂರ್ ಸೇನಾ ಕಾರ್ಯಾಚರಣೆ ವೇಳೆ ದಾಳಿಗೊಳಗಾಗಿ ಬಹುತೇಕ ನಾಶವಾಗಿದ್ದ ಮುರಿದ್ ವಾಯು ನೆಲೆ ಕಟ್ಟಡವನ್ನು ಪಾಕಿಸ್ತಾನ ಸಂಪೂರ್ಣ ನೆಲಸಮ ಮಾಡಿ ತೆರವು ಮಾಡಿದೆ ಎಂದು ತಿಳಿದುಬಂದಿದೆ.

ಹೌದು.. ಪಾಕಿಸ್ತಾನದ ಚಕ್ವಾಲ್ ಬಳಿಯ ತನ್ನ ಪ್ರಧಾನ ಮುರಿಯದ್ ವಾಯುನೆಲೆಯಲ್ಲಿ ಪ್ರಮುಖ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರವನ್ನು ದುರಸ್ತಿ ಮಾಡಲು ಮತ್ತು ಪುನಃಸ್ಥಾಪಿಸಲು ಪಾಕಿಸ್ತಾನ ವಾಯುಪಡೆಯ ಪ್ರಯತ್ನಗಳು ವಿಫಲವಾಗಿದ್ದು, ಹೀಗಾಗಿ ಬೇರೆ ದಾರಿಯಿಲ್ಲದೇ ಪಾಕಿಸ್ತಾನ ಸೇನೆ ಆ ಇಡೀ ಕಟ್ಟಡವನ್ನು ತೆರವು ಮಾಡಿದೆ ಎನ್ನಲಾಗಿದೆ.

ಈ ಬಗ್ಗೆ ಖಾಸಗಿ ಸುದ್ದಿವಾಹಿನಿಯೊಂದು ವರದಿ ಮಾಡಿದ್ದು, ಹಾಲಿ ಲಭ್ಯವಿರುವ ಅದರೆ ಫೆಬ್ರವರಿ 28ರಂದು ಸೆರೆಹಿಡಿಯಲಾಗಿದ್ದ ಸ್ಯಾಟಲೈಟ್ ಚಿತ್ರಗಳಲ್ಲಿ ಮುರಿದ್ ವಾಯುನೆಲೆ ಕಟ್ಟಡವನ್ನು ಸಂಪೂರ್ಣವಾಗಿ ತೆರವು ಮಾಡಲಾಗಿದೆ ಎಂದು ವರದಿ ಮಾಡಿದೆ. ಭಾರತದ ಸೇನಾದಾಳಿ ಬಳಿಕ ಈ ಕಟ್ಟಡವನ್ನು

ಟಾರ್ಪೌಲಿನ್ಗಳಿಂದ ಮುಚ್ಚಲಾಗಿತ್ತು.

ಬಳಿಕ ಅಲ್ಲಿ ದುರಸ್ತಿ ಕಾರ್ಯ ನಡೆದಿತ್ತು. ಆದರೆ 10 ತಿಂಗಳ ಬಳಿಕವೂ ದುರಸ್ತಿ ಕಾರ್ಯ ಯಶಸ್ವಿಯಾಗದ ಹಿನ್ನಲೆಯಲ್ಲಿ ಇಡೀ ಕಟ್ಟಡವನ್ನು ಪಾಕಿಸ್ತಾನ ಸೇನೆಯೇ ನೆಲಸಮ ಮಾಡಿ ನೂತನ ಕಟ್ಟಡ ನಿರ್ಮಾಣಕ್ಕೆ ಮುಂದಾಗಿದೆ ಎಂದು ಹೇಳಲಾಗಿದೆ.

ಈ ಬಗ್ಗೆ ಮಾತನಾಡಿದ ಉಪಗ್ರಹ ಚಿತ್ರಣ ವಿಶ್ಲೇಷಕ ಡೇಮಿಯನ್ ಸೈಮನ್ ಅವರು, ಇತ್ತೀಚಿನ ಚಿತ್ರಣವು ರಚನೆಯನ್ನು ಸಂಪೂರ್ಣವಾಗಿ ಕೆಡವಲಾಗಿದೆ ಎಂದು ಈಗ ಖಚಿತಪಡಿಸುತ್ತದೆ ಎಂದು ಹೇಳಿದ್ದಾರೆ.

ಸದ್ಯದ ಚಿತ್ರಗಳನ್ನುಅವಲೋಕಿಸಿದರೆ ಭಾರತ ನಡೆಸಿದ್ದ ಕ್ಷಿಪಣಿದಾಳಿ ಕಟ್ಟಡದ ತೀರಾ ಆಳಕ್ಕೆ ಹೋಗಿ ಸಾಕಷ್ಟು ಹಾನಿ ಮಾಡಿದಂತೆ ತೋರುತ್ತಿದೆ. ಹೀಗಾಗಿ ಅಲ್ಲಿ ದುರಸ್ತಿಕಾರ್ಯ ಅಸಾಧ್ಯವಾಗಿರಬಹುದು.

ಸೌಲಭ್ಯವನ್ನು ಕೆಡವುವ ನಿರ್ಧಾರವು ವಾಯುದಾಳಿಯು ಕಟ್ಟಡದೊಳಗೆ ಗಮನಾರ್ಹ ರಚನಾತ್ಮಕ ವೈಫಲ್ಯವನ್ನು ಉಂಟುಮಾಡಿದೆ ಎಂದು ಬಲವಾಗಿ ಸೂಚಿಸುತ್ತದೆ. ಅಂತಿಮವಾಗಿ ಈ ಸ್ಥಳವು ಅಸುರಕ್ಷಿತ ಮತ್ತು ದುರಸ್ತಿಗೆ ಅನರ್ಹವಾಗಿದೆ ಎಂದು ಅವರು ಹೇಳಿದರು.

ಅಂದಹಾಗೆ ಪಾಕಿಸ್ತಾನವು ಕದನ ವಿರಾಮ ಒಪ್ಪಂದಕ್ಕೆ ಬರುವ ಮೂಲಕ ಯುದ್ಧವನ್ನು ಕೊನೆಗೊಳಿಸಲು ಮುಂದಾದ ಕೆಲವು ಗಂಟೆಗಳ ಮೊದಲು, 2025ರ ಮೇ 10 ರಂದು ಬೆಳಗಿನಜಾವ 2 ರಿಂದ ಬೆಳಗಿನ ಜಾವ 5 ರ ನಡುವೆ ಭಾರತೀಯ ವಾಯುಪಡೆಯು ದಾಳಿ ಮಾಡಿದ ಹತ್ತು ಪಾಕಿಸ್ತಾನಿ ವಾಯುನೆಲೆಗಳಲ್ಲಿ ಮುರಿದ್ ಸೇನಾನೆಲೆ ಕೂಡ ಒಂದಾಗಿದೆ.

ಇಲ್ಲಿ ಪಾಕಿಸ್ತಾನ ಮಾನವರಹಿತ ವೈಮಾನಿಕ ವಾಹನಗಳಿಗೆ ಕಮಾಂಡ್-ಅಂಡ್-ಕಂಟ್ರೋಲ್ ನೋಡ್ ಆಗಿ ಕಾರ್ಯನಿರ್ವಹಿಸುತ್ತಿತ್ತು ಎಂದು ನಂಬಲಾಗಿದೆ. ಭಾರತೀಯ ವಾಯುಪಡೆಯು ಅದೇ ನೆಲೆಯಲ್ಲಿ ಭೂಗತ ಸೌಲಭ್ಯ ಎಂದು ನಂಬಲಾದ ಸ್ಥಳದ ಮೇಲೆ ದಾಳಿ ಮಾಡಿತ್ತು.

ಟ್ರಂಪ್‌ಗೆ ಇರಾನ್‌ನ ಹಿರಿಯ ಭದ್ರತಾ ಅಧಿಕಾರಿ ಎಚ್ಚರಿಕೆ

ಟೆಹರಾನ್, ಮಾ.10: ಇರಾನ್‌ನ ಹಿರಿಯ ಭದ್ರತಾ ಅಧಿಕಾರಿಯೊಬ್ಬರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಎಚ್ಚರಿಕೆ ನೀಡಿದ್ದಾರೆ. ಹಾರ್ಮುಜ್ ಜಲಸಂಧಿಯ ಮೂಲಕ ತೈಲ ಸಾಗಣೆಯನ್ನು ತಡೆಯಲು ಪ್ರಯತ್ನಿಸಿದರೆ ಅಮೆರಿಕ ಇರಾನ್ ಮೇಲೆ ಇಪ್ಪತ್ತು ಪಟ್ಟು ಪ್ರಬಲವಾಗಿ ದಾಳಿ ಮಾಡುತ್ತದೆ ಎಂದು ಟ್ರಂಪ್ ಎಚ್ಚರಿಸಿದ ನಂತರ, ಇರಾನ್‌ನ ಸುಪ್ರೀಂ ರಾಷ್ಟ್ರೀಯ

ಭದ್ರತಾ ಮಂಡಳಿಯ ಕಾರ್ಯದರ್ಶಿ ಅಲಿ ಲಾರಿಜಾನಿ ಮಂಗಳವಾರ ಎಕ್ಸ್‌ನಲ್ಲಿ ಈ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. ಇರಾನ್ ಜನ ಖಾಲಿ ಬೆದರಿಕೆಗಳಿಗೆ ಹೆದರುವುದಿಲ್ಲ ನಿಮಗಿಂತ ಪ್ರಬಲ ವಿರೋಧಿಗಳಿಂದಲೂ ಇರಾನ್ ಅನ್ನು ನಾಶಮಾಡಲು ಸಾಧ್ಯವಾಗಿಲ್ಲ. ಟ್ರಂಪ್ ಸ್ವತಃ ತಮ್ಮ ಜೀವ ಉಳಿಸಿಕೊಳ್ಳುವುದರ ಬಗ್ಗೆ ಗಮನಹರಿಸಲಿ ಎಂದು ಎಚ್ಚರಿಸಿದ್ದಾರೆ.

ಹೈದರಾಬಾದ್‌ನ ಗಚ್ಚಿಬೌಲಿ ಕ್ರೀಡಾಂಗಣದಲ್ಲಿ ನಡೆದ ಎಫ್‌ಐಎಚ್ ಮಹಿಳಾ ಹಾಕಿ ವಿಶ್ವಕಪ್ ಅರ್ಹತಾ ಸುತ್ತಿನ ಪೂಲ್-ಬಿ ಪಂದ್ಯದಲ್ಲಿ ಉರುಗ್ವೆ ತಂಡವು ವೇಲ್ಸ್ ತಂಡವನ್ನು 3-2 ಗೋಲುಗಳಿಂದ ಸೋಲಿಸಿತು.

ಐಪಿಎಲ್ ಮೇಲೆ ಅಡುಗೆ ಅನಿಲದ ಕರಿನೆರಳು

ಪಂದ್ಯಾವಳಿ ನಡೆಯುವುದೇ ಅನುಮಾನ

ಮುಂಬೈ, ಮಾ.10: ಇರಾನ್ ಯುದ್ಧದ ಪರಿಣಾಮ ಎಲ್ ಪಿಜಿ ಅನಿಲ ಪೂರೈಕೆಯಲ್ಲಿ ವ್ಯತ್ಯಯವಾಗಿರುವುದು ಐಪಿಎಲ್ ಟೂರ್ನಿಯ ಮೇಲೆಯೂ ಕರಿನೆರಳು ಉಂಟುಮಾಡಿದೆ.

ಇಂಧನ ಪೂರೈಕೆ ನಿರ್ಬಂಧಗಳಿಂದಾಗಿ ದೇಶೀಯ ಮತ್ತು ಅಗತ್ಯ ದೇಶೀಯೇತರ ವಲಯಗಳಿಗೆ ಎಲ್‌ಪಿಜಿ ಸರಬರಾಜಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಸಾಮಾಜಿಕ ಮಾಧ್ಯಮದಲ್ಲಿ ಹೇಳಿಕೆ ನೀಡಿದ ಒಂದು ದಿನದ ನಂತರ, ಇಂಡಿಯನ್ ಪ್ರೀಮಿಯರ್ ಲೀಗ್ ಆಡಳಿತ ಮಂಡಳಿಯ ಅಧ್ಯಕ್ಷ ಅರುಣ್ ಧುಮಾಲ್, ಲೀಗ್ ಬದಲಾಗುತ್ತಿರುವ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಹೇಳಿದ್ದಾರೆ.

ಪಶ್ಚಿಮ ಏಷ್ಯಾದಲ್ಲಿ ಅಮೆರಿಕ-ಇಸ್ರೇಲ್-ಇರಾನ್ ಯುದ್ಧವು ಉಲ್ಬಣಗೊಳ್ಳುತ್ತಿರುವುದರಿಂದ, ಪೆಟ್ರೋಲಿಯಂ ಮತ್ತು ಎಲ್ಪಿಜಿ ಉತ್ಪನ್ನಗಳ ಪೂರೈಕೆಗೆ ಹೊಡೆತ ಬಿದ್ದಿದೆ. ಕಳೆದ ಎರಡು ದಿನಗಳಿಂದ, ಬೆಂಗಳೂರು ಮತ್ತು ಚೆನ್ನೈನಲ್ಲಿರುವ ಹೋಟೆಲ್ ಮಾಲೀಕರ ಸಂಘಗಳು ಒಂದು ಅಥವಾ ಎರಡು ದಿನಗಳವರೆಗೆ ಎಲ್ಪಿಜಿ ಪೂರೈಕೆಯನ್ನು